13 May 2026 Wednesday | SINCE 1957

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

# ವರ್ತಮಾನ

ಸಂಪಾದಕ: ಕೆ.ಎನ್.ರವಿ

ಭವಿಷ್ಯದ ಮುನ್ನುಡಿ

**ಭಾವನಾಂತರಂಗ**

ನಮ್ಮ ಸ್ವಭಾವವನ್ನು ಪರಿಸ್ಥಿತಿಗೆ ತಕ್ಕಂತೆ ಬದಲಾಯಿಸಿಕೊಂಡಾಗ ಮಾತ್ರ ನಮ್ಮ ಜೀವನದ ಹಾದಿ ಸುಗಮಗೊಳ್ಳುವುದು!

-ಸ್ನೇಹಾ ಆನಂದ್

info.varthaman@gmail.com



ಮತ ಕದ್ದು ಚುನಾವಣೆ ಗೆಲ್ಲಲ್ಲು ಬಿಜೆಪಿ ತಂತ್ರ: ಲಕ್ಷಣ್ ಆರೋಪ — ಪುಟ ಸಂ. 2



ಮೀಸಲಾತಿ ಪ್ರಮಾಣ ಶೇ.35ಕ್ಕೆ ಏರಿಕೆಯಾಗಲಿ: ಶಿವಕುಮಾರ್ ಕರೆ — ಪುಟ ಸಂ. 3



ಸಮಯದ ಸದ್ಬಳಕೆಯೇ ಯಶಸ್ಸಿನ ಗುಟ್ಟು: ಪ್ರೊ.ಶರಣಪ್ಪ ವಿ.ಹಲಸೆ — ಪುಟ ಸಂ. 4

9742504916 | ಮೈಸೂರು | ಮಂಡ್ಯ | ಬೆಂಗಳೂರು | ಹಾಸನ | ಚಾಮರಾಜನಗರ | ರಾಮನಗರ | ಬೆಂಗಳೂರು ಗ್ರಾಮಾಂತರ | ಕೊಡಗು | ಕಾರ್ಯನಿರ್ವಾಹಕ ಸಂಪಾದಕ – ಕೆ.ಆರ್.ಮಿಹಿರ್ ಆಕಾಶ್

VARTHAMAN | Volume: 69 | Issue: 169 | Pages: 06 | KA/SK/MYS/1098/2023-2025 | R.N.I. No.3577/1957 | www.varthaman.in | Price-3

# ಅಕ್ರಮ: ನೀಟ್ ಪರೀಕ್ಷೆ ರದ್ದು

## ಸಿಬಿಐ ತನಿಖೆಗೆ ಆದೇಶ | ಲಕ್ಷಾಂತರ ಆಕಾಂಕ್ಷಿಗಳಿಗೆ ನಿರಾಸೆ


**ನವದೆಹಲಿ:** ವೈದ್ಯಕೀಯ ಶಿಕ್ಷಣ ಪ್ರವೇಶಾತಿಗೆ ದೇಶಾದ್ಯಂತ ನಡೆಸಿದ್ದ ನೀಟ್ ಯುಜಿ ಪರೀಕ್ಷೆಯನ್ನು ಅಕ್ರಮದ ಹಿನ್ನೆಲೆಯಲ್ಲಿ ರಾಷ್ಟ್ರೀಯ ಪರೀಕ್ಷಾ ಏಜೆನ್ಸಿ (ಎನ್‌ಟಿಎ) ರದ್ದುಗೊಳಿಸಿ ಆದೇಶಿಸಿದೆ. ಅಕ್ರಮದ ಬಗ್ಗೆ ಸಿಬಿಐ ತನಿಖೆಗೆ ವಹಿಸಲಾಗಿದೆ.

ವೈದ್ಯಕೀಯ ಶಿಕ್ಷಣ ಪ್ರವೇಶಕ್ಕೆ ಪರೀಕ್ಷೆ ಬರೆದಿದ್ದ ಲಕ್ಷಾಂತರ ಆಕಾಂಕ್ಷಿಗಳಿಗೆ ಇದರಿಂದ ನಿರಾಸೆ ಆಗಿದೆ. ಅಲ್ಲದೆ, ವಿದ್ಯಾರ್ಥಿಗಳು ಮತ್ತೆ ಪರೀಕ್ಷೆ ಬರೆಯಬೇಕಾದ ಆತಂಕದಲ್ಲಿದ್ದಾರೆ.

ನೀಟ್ ಪರೀಕ್ಷೆಯಲ್ಲಿ ಅಕ್ರಮ ನಡೆದಿದೆ ಎಂಬ ಗಂಭೀರ ಆರೋಪ ಕೇಳಿಬಂದ ಹಿನ್ನೆಲೆಯಲ್ಲಿ ಪರೀಕ್ಷೆಯನ್ನು ರದ್ದು ಮಾಡಲಾಗಿದೆ. ಪರೀಕ್ಷಾ ಪಾರದರ್ಶಕತೆ ಮತ್ತು ವಿಶ್ವಾಸಾರ್ಹತೆ ಕಾಪಾಡಲು ಈ ಕಠಿಣ ಕ್ರಮ ಕೈಗೊಳ್ಳಲಾಗಿದೆ ಎಂದು ಎನ್‌ಟಿಎ ತಿಳಿಸಿದೆ. ಶೀಘ್ರದಲ್ಲೇ ಹೊಸ ದಿನಾಂಕ ಪ್ರಕಟಿಸುವುದಾಗಿ ತಿಳಿಸಿದೆ.

ಭಾರತದ ಅತಿದೊಡ್ಡ ವೈದ್ಯಕೀಯ ಪ್ರವೇಶ ಪರೀಕ್ಷೆಯಾದ ನೀಟ್ ಯುಜಿ 2026 ಅನ್ನು 'ಗೆಸ್ ಪತ್ರಿಕೆ' ಸೋರಿಕೆ ಆರೋಪದ ನಂತರ ರದ್ದುಪಡಿಸಲಾಗಿದೆ. ಮೇ 3ರಂದು ನಡೆದ ಪರೀಕ್ಷೆಯ ಸಮಗ್ರತೆಯ ಬಗ್ಗೆ ಕೇಂದ್ರೀಯ ಸಂಸ್ಥೆಗಳಿಂದ ಬಂದ ಮಾಹಿತಿಗಳು ಕಳವಳಕಾರಿಯಾಗಿದ್ದ ಹಿನ್ನೆಲೆಯಲ್ಲಿ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ ಎಂದು ತಿಳಿಸಿದೆ.

ಕಾನೂನು ಜಾರಿ ಸಂಸ್ಥೆಗಳು ಹಂಚಿಕೊಂಡ ಮಾಹಿತಿಗಳನ್ನು ಪರಿಶೀಲಿಸಿದ ನಂತರ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ ಪುಟ 2ಕ್ಕೆ




### ಸಿಬಿಐ ತನಿಖೆಗೆ ಆದೇಶ

**ನವದೆಹಲಿ:** ರಾಜಸ್ಥಾನದಲ್ಲಿ ಸೋರಿಕೆ ಆಗಿದ್ದ ಊಹಾತ್ಮಕ ಪ್ರಶ್ನೆ ಪತ್ರಿಕೆಯಲ್ಲಿದ್ದ ಸುಮಾರು 100ಕ್ಕೂ ಹೆಚ್ಚು ಜೀವಶಾಸ್ತ್ರ ಮತ್ತು ರಸಾಯನಶಾಸ್ತ್ರದ ಪ್ರಶ್ನೆಗಳು ಅಸಲಿ ಪ್ರಶ್ನೆ ಪತ್ರಿಕೆಗೆ ಹೋಲಿಕೆಯಾಗಿದೆ ಎನ್ನಲಾಗಿತ್ತು. ಕಳೆದ ಮೇ 3ರಂದು ದೇಶಾದ್ಯಂತ ನೀಟ್ ಪರೀಕ್ಷೆ ನಡೆದಿತ್ತು. ಆದರೆ ರಾಜಸ್ಥಾನದಲ್ಲಿ ಪರೀಕ್ಷಾ ಪ್ರಶ್ನೆ ಪತ್ರಿಕೆ ಸೋರಿಕೆಯಾಗಿದೆ ಎಂಬ ವರದಿ ಹರಿದಾಡಿದ್ದವು. ಈ ಬಗ್ಗೆ ಮೇ 8ರಂದು ಎನ್‌ಟಿಎ ಕೇಂದ್ರ ತನಿಖಾ ಸಂಸ್ಥೆಗೆ ಸ್ವತಂತ್ರ ಪರಿಶೀಲನೆ ನಡೆಸುವಂತೆ ಮನವಿ ಮಾಡಿತ್ತು. ತನಿಖಾ ಸಂಸ್ಥೆಗಳು ಮತ್ತು ಕಾನೂನು ಜಾರಿ ಸಂಸ್ಥೆಗಳು ನೀಡಿದ ವರದಿಯನ್ನು ಅಧರಿಸಿ, ಕೇಂದ್ರ ಸರ್ಕಾರದ ಅನುಮೋದನೆಯೊಂದಿಗೆ ಪರೀಕ್ಷೆಯನ್ನು ರದ್ದುಗೊಳಿಸಲು ನಿರ್ಧರಿಸಲಾಗಿದೆ.

ಹೀಗಾಗಿ ಲಕ್ಷಾಂತರ ವಿದ್ಯಾರ್ಥಿಗಳ ಭವಿಷ್ಯದ ಮೇಲೆ ಪರಿಣಾಮ ಬೀರಿದ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರ ಈಗ ಪುಟ 2ಕ್ಕೆ

## ರಾಜ್ಯದಲ್ಲಿ ಜಲಕಂಟಕ: ಕೋಡಿ ಶ್ರೀ ಭವಿಷ್ಯ

**ಶಿವಮೊಗ್ಗ:** ರಾಜ್ಯದಲ್ಲಿ ಅಕಾಲಿಕ ಮಳೆಯಿಂದ ಜಲಕಂಟಕ ಎದುರಾಗಲಿದೆ ಎಂದು ಕೋಡಿ ಮಠದ ಶಿವಾನಂದ ಶಿವಯೋಗಿ ರಾಜೇಂದ್ರ ಸ್ವಾಮೀಜಿ ಸ್ಫೋಟಕ ಭವಿಷ್ಯ ನುಡಿದಿದ್ದಾರೆ.



ಜಡೆ ಸಂಸ್ಥಾನ ಮಠದ ಬಳಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು. ದೇಶದಲ್ಲಿ ಸಕಾಲಿಕವಾಗಿ ಮಳೆಯಾಗದೆ ಹ' ೂ ೀ ದ' ರ' ೂ ಅಕಾಲಿಕವಾಗಿ ಸುರಿಯುವ ಮಳೆಯಿಂದಾಗಿ ಜಲಕಂಟಕ ಎದುರಾಗಲಿದೆ. ಮಳೆ, ಗುಡುಗು ಮತ್ತು ಸಿಡಿಲಿನ ಆರ್ಭಟ ಹೆಚ್ಚಾಗಲಿದೆ. ಮಳೆಗಾಲದ ನಿಗದಿತ ಅವಧಿಯಲ್ಲಿ ಮಳೆಯಾಗದೆ ಅನಿರೀಕ್ಷಿತ ಸಮಯದಲ್ಲಿ ಪುಟ 2ಕ್ಕೆ

## ರಾಜೇಗೌಡಗೆ ಮತ್ತೆ ಪ್ರಮಾಣ: ಸ್ಪೀಕರ್

**ಮೈಸೂರು:** ಶೃಂಗೇರಿ ವಿಧಾನಸಭಾ ಕ್ಷೇತ್ರದ ಶಾಸಕರ ಆಯ್ಕೆ ವಿಚಾರದಲ್ಲಿ ಸುಪ್ರೀಂ ಕೋರ್ಟ್ ಆದೇಶ ಪಾಲಿಸಲಾಗುವುದು ಎಂದು ವಿಧಾನ ಸಭೆ ಸ್ಪೀಕರ್ ಯು.ಟಿ.ಖಾದರ್ ತಿಳಿಸಿದರು.

ನಗರದಲ್ಲಿ ಮಂಗಳವಾರ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಶೃಂಗೇರಿ ಕ್ಷೇತ್ರದ ಮರು ಮತ ಎಣಿಕೆ ಫಲಿತಾಂಶಕ್ಕೆ ನ್ಯಾಯಾಲಯ ತಡೆ ನೀಡಿರುವ ಕಾರಣ ರಾಜೇಗೌಡರೇ ಶಾಸಕರಾಗಿ ಮುಂದುವರಿಯುತ್ತಾರೆ. ಮತ್ತೆ ಪ್ರಮಾಣವಚನ ಸ್ವೀಕಾರಕ್ಕೆ ಅವರು ಸಮಯ ಕೇಳಿದ್ದಾರೆ. ಸದ್ಯದಲ್ಲೇ ಅವಕಾಶ ನೀಡುತ್ತೇನೆ ಎಂದು ಹೇಳಿದರು.

## ಮೋದಿಗೆ ಅಮೃತ ಕಾಲ: ಜನರ ಪಾಲಿಗೆ ವಿಷ ಕಾಲ!

**ನವದೆಹಲಿ:** ಅಕ್ರಮ ನಡೆದಿರುವ ಆರೋಪದ ಹಿನ್ನೆಲೆಯಲ್ಲಿ ನೀಟ್ ಯುಜಿ ಪರೀಕ್ಷೆಯನ್ನು ರದ್ದುಗೊಳಿಸಿರುವ ವಿಚಾರವಾಗಿ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರದ ವಿರುದ್ಧ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ವಾಗ್ದಾಳಿ ನಡೆಸಿದ್ದಾರೆ.

ಪ್ರಧಾನಿ ಮೋದಿ ಅವರ ಪಾಲಿನ ಈ ಅಮೃತ ಕಾಲವು ದೇಶದ ಪಾಲಿಗೆ ವಿಷ ಕಾಲವಾಗಿ ಮಾರ್ಪಟ್ಟಿದೆ ಎಂದು ರಾಹುಲ್ ಕಿಡಕಾರಿದ್ದಾರೆ. 2026–27ನೇ ಸಾಲಿನ ನೀಟ್ ಪರೀಕ್ಷೆಯನ್ನು ರದ್ದುಗೊಳಿಸಲಾಗಿದೆ. ಈ ಭ್ರಷ್ಟ ಬಿಜೆಪಿ ಆಡಳಿತದಿಂದಾಗಿ 22 ಲಕ್ಷಕ್ಕೂ ಹೆಚ್ಚು ವಿದ್ಯಾರ್ಥಿಗಳ ಕಠಿಣ ಪರಿಶ್ರಮ, ತ್ಯಾಗ ಮತ್ತು ಕನಸುಗಳು ನುಚ್ಚುನೂರಾಗಿವೆ ಎಂದು ಟೀಕಿಸಿದ್ದಾರೆ.

ಕೆಲವು ತಂದೆ–ತಾಯಂದಿರು ಸಾಲ ಮಾಡಿದ್ದರು. ತಮ್ಮ ಒಡವೆಗಳನ್ನು ಮಾರಿದ್ದರು. ಲಕ್ಷಾಂತರ ಮಕ್ಕಳು ರಾತ್ರಿಯಿಡೀ ಎಚ್ಚರವಿದ್ದು ಓದಿದ್ದರು. ಆದರೆ, ಅವರಿಗೆ ಪ್ರತಿಯಾಗಿ ಸಿಕ್ಕಿದ್ದು ಮಾತ್ರ ಪ್ರಶ್ನೆ ಪತ್ರಿಕೆ ಸೋರಿಕೆ. ಸರ್ಕಾರದ ನಿರ್ಲಕ್ಷ್ಯ ಮತ್ತು ಶಿಕ್ಷಣ ವ್ಯವಸ್ಥೆಯಲ್ಲಿ ವ್ಯವಸ್ಥಿತ ಭ್ರಷ್ಟಾಚಾರ ಎಂದು ಆಕ್ರೋಶ ಹೊರಹಾಕಿದ್ದಾರೆ.

ಇದು ಕೇವಲ ವೈಫಲ್ಯ ಮಾತ್ರವಲ್ಲ. ಬದಲಾಗಿ, ಯುವಜನತೆಯ ಭವಿಷ್ಯದ ವಿರುದ್ಧ ಎಸಗಿದ ಅಪರಾಧವಾಗಿದೆ. ಪ್ರತಿ ಬಾರಿಯೂ ಪ್ರಶ್ನೆ ಪತ್ರಿಕೆ ಮಾಫಿಯಾ ಯಾವುದೇ ಶಿಕ್ಷೆಯಿಲ್ಲದೆ ಸುಲಭವಾಗಿ ನುಣುಚಿಕೊಳ್ಳುತ್ತದೆ. ಆದರೆ, ಪ್ರಾಮಾಣಿಕ ವಿದ್ಯಾರ್ಥಿಗಳು ಶಿಕ್ಷೆ ಅನುಭವಿಸುವಂತಾಗಿದೆ ಎಂದು ಬೇಸರ ವ್ಯಕ್ತಪಡಿಸಿದ್ದಾರೆ.

ಈಗ ಲಕ್ಷಾಂತರ ವಿದ್ಯಾರ್ಥಿಗಳು ಮತ್ತೊಮ್ಮೆ ಅದೇ ಮಾನಸಿಕ ಒತ್ತಡ, ಆರ್ಥಿಕ ಹೊರೆ ಮತ್ತು ಅನಿಶ್ಚಿತತೆಯನ್ನು ಎದುರಿಸಬೇಕಾಗಿದೆ. ವಿದ್ಯಾರ್ಥಿಗಳ ಹಣೆಬರಹ ಕಠಿಣ ಪರಿಶ್ರಮದಿಂದ ನಿರ್ಧರಿಸಲ್ಪಡದೆ, ಕೇವಲ ಹಣ ಮತ್ತು ಪ್ರಭಾವದಿಂದ ನಿರ್ಧರಿಸಲ್ಪಡುವುದಾದರೆ ಶಿಕ್ಷಣಕ್ಕೆ ಯಾವ ಅರ್ಥವಿರುತ್ತದೆ ಎಂದು ರಾಹುಲ್ ಪ್ರಶ್ನಿಸಿದ್ದಾರೆ.



## ಸಾರಿಗೆ ನೌಕರರಿಗೆ ಶೇ.12.5 ವೇತನ ಹೆಚ್ಚಳ

**ಬೆಂಗಳೂರು:** ರಾಜ್ಯ ಸರ್ಕಾರ ಸಾರಿಗೆ ನೌಕರರಿಗೆ ಗುಡ್ ನ್ಯೂಸ್ ನೀಡಿದೆ. ಶೇ.12.50ರಷ್ಟು ವೇತನ ಪರಿಷ್ಕರಿಸಲಾಗಿದೆ. ಹೊಸ ವೇತನ ಜು.1ರ ವೇತನದಲ್ಲೇ ಪಾವತಿಗೆ ಸರ್ಕಾರ ಆದೇಶ ಹೊರಡಿಸಿದೆ.

2025 ಮಾರ್ಚ್ 31ರ ಮೂಲ ವೇತನದ ಮೇಲೆ ಶೇ.12.5ನಷ್ಟು ವೇತನ ಹೆಚ್ಚಳ ಮಾಡಲಾಗಿದೆ. ಸಾರಿಗೆ ನೌಕರರು ಹಲವು ವರ್ಷಗಳಿಂದ ವೇತನ ಪರಿಷ್ಕರಣೆಗೆ ಬೇಡಿಕೆ ಇಟ್ಟಿದ್ದರು. ಈಗ ಸರ್ಕಾರ ನೌಕರರಿಗೆ ಸಿಹಿ ಸುದ್ದಿ ಕೊಟ್ಟಿದೆ. ಆದರೆ, ಇದಕ್ಕೆ ಸಾರಿಗೆ ನೌಕರರ ಸಂಘಟನೆಗಳು ಒಪ್ಪಿಗೆ ಸೂಚಿಸಿಲ್ಲ.ಶೇ.25ರಷ್ಟು ವೇತನ ಪರಿಷ್ಕರಣೆಗೆ ಸಾರಿಗೆ ಸಂಘಟನೆಗಳು ಒತ್ತಾಯಿಸಿದ್ದವು. ಮೇ 20ರಂದು ಮುಷ್ಕರ ಮಾಡಲು ನಿರ್ಧರಿಸಿವೆ. ನಾಲ್ಕು ನಿಗಮದ ಸಾರಿಗೆ ನೌಕರರು ಮುಷ್ಕರಕ್ಕೆ ಕರೆ ನೀಡಿದ್ದಾರೆ.

## ಬೌರಿಂಗ್ ಆಸ್ಪತ್ರೆ ದುರಂತ: ಜಿಲ್ಲಾಧಿಕಾರಿ ವರದಿ ಸಲ್ಲಿಕೆ

**ಬೆಂಗಳೂರು:** ಬೌರಿಂಗ್ ಆಸ್ಪತ್ರೆ ಗೋಡೆ ಕುಸಿದು ಏಳು ಜನರು ಸಾವನ್ನಪ್ಪಿದ್ದ ಪ್ರಕರಣಕ್ಕೆ ಸಂಬಂಧಿಸಿದಂತೆ ಜಿಲ್ಲಾಧಿಕಾರಿ ಜಗದೀಶ್ ಸರ್ಕಾರಕ್ಕೆ ತನಿಖಾ ವರದಿ ಸಲ್ಲಿಕೆ ಮಾಡಿದ್ದಾರೆ. ಇದರಲ್ಲಿ ಏಳು ಜನರ ಸಾವಿಗೆ ಆರೋಗ್ಯ ಇಲಾಖೆ ಇಂಜಿನಿಯರ್ ಮತ್ತು ಗುತ್ತಿಗೆದಾರರ ನಿರ್ಲಕ್ಷ್ಯವೇ ಕಾರಣ ಹಾಗೂ ಆಸ್ಪತ್ರೆ ಆಡಳಿತ ಮಂಡಳಿಯ ನಿರ್ಲಕ್ಷ್ಯ ಬಯಲಾಗಿದೆ.

ಬೆಂಗಳೂರು ಡಿಸಿ ಜಗದೀಶ್ ಮಾತನಾಡಿ, ಸರ್ಕಾರ ತನಿಖೆಗೆ ಸೂಚಿಸಿತ್ತು. ಕೂಲಂಕುಷವಾಗಿ ತನಿಖೆಯನ್ನ ಮಾಡಿ, ವರದಿ ಸಲ್ಲಿಕೆ ಮಾಡಿದ್ದೇನೆ. ಏನು ಸಲ್ಲಿಕೆ ಆಗಿದೆ ಅಂತಾ ಡಿಸ್ಕ್ಲೋಸ್ ಮಾಡಲ್ಲ. ಮುಚ್ಚಿದ ಲಕೋಟೆಯಲ್ಲಿ ನೀಡಿದ್ದೇನೆ. ಸರ್ಕಾರ ಏನು ಕ್ರಮ ವಹಿಸುತ್ತದೆಯೋ ಕಾದು ನೋಡಬೇಕು ಎಂದರು.

**ವರದಿಯಲ್ಲಿ ಏನಿದೆ?:** ಗೋಡೆ ಪಕ್ಕದಲ್ಲಿ ಮಣ್ಣು ಸುರಿದಿರೋದು ದುರಂತಕ್ಕೆ ಮೂಲ ಕಾರಣ. ಗೋಡೆ ಪಕ್ಕ ಸುರಿದಿರುವ ಮಣ್ಣನ್ನ ಸೂಕ್ತ ಸಮಯಕ್ಕೆ ಗುತ್ತಿಗೆದಾರ ಮತ್ತು ಆರೋಗ್ಯ ಇಲಾಖೆ ಇಂಜಿನಿಯರ್ ತೆರವು ಮಾಡಿಲ್ಲ.



ಆರೋಗ್ಯ ಇಲಾಖೆ ಇಂಜಿನಿಯರ್ ಮತ್ತು ಗುತ್ತಿಗೆದಾರ ಕಾರಣ. 4.8 ಅಡಿ ಗೋಡೆ ಇದ್ದರೆ 6 ಅಡಿ ಮಣ್ಣು ಸುರಿದಿದ್ದಾರೆ. ಗೋಡೆ ಪಕ್ಕದಲ್ಲಿ ಕ್ರಿಕೆಟ್ ಆಡುವುದಕ್ಕೆ ನೆಟ್ ಸೃಷ್ಟಿ ಮಾಡಲಾಗಿದೆ. ಕ್ರಿಕೆಟ್ ನೆಟ್ ಸೃಷ್ಟಿ ಮಾಡೋಕೆ ಮಣ್ಣು ಸುರಿದಿದ್ದಾರೆ. ಇದರಲ್ಲಿ ಆಸ್ಪತ್ರೆ ನಿರ್ಲಕ್ಷ್ಯವಿದೆ ಎಂದು ಮೂಲಗಳು ತಿಳಿಸಿವೆ.

## 717 ಮದ್ಯದಂಗಡಿ ಬಂದ್

### ತಮಿಳುನಾಡು ಸಿಎಂ ಜೋಸೆಫ್ ವಿಜಯ್ ದಿಟ್ಟ ನಿರ್ಧಾರ

**ಚೆನ್ನೈ:** ತಮಿಳುನಾಡು ಮುಖ್ಯಮಂತ್ರಿ ಜೋಸೆಫ್ ವಿಜಯ್ ರಾಜ್ಯದಲ್ಲಿ ಮದ್ಯಪಾನ ನಿಯಂತ್ರಣಕ್ಕೆ ದೊಡ್ಡ ಹೆಜ್ಜೆ ಇಟ್ಟಿದ್ದಾರೆ. ದೇವಾಲಯ, ಶಾಲೆಗಳು ಮತ್ತು ಬಸ್ ನಿಲ್ದಾಣಗಳ 500 ಮೀಟರ್ ವ್ಯಾಪ್ತಿಯೊಳಗೆ ಇರುವ 717 ಸರ್ಕಾರಿ ಮದ್ಯದಂಗಡಿಗಳನ್ನು ಎರಡು ವಾರದೊಳಗೆ ಮುಚ್ಚಲು ಆದೇಶಿಸಿದ್ದಾರೆ.

ರಾಜ್ಯ ಸರ್ಕಾರದ ಅಧೀನದಲ್ಲಿ (ತಮಿಳುನಾಡು ಸ್ಟೇಟ್ ಮಾರ್ಕೆಟಿಂಗ್ ಕಾರ್ಪೋರೇಷನ್) ಈ ಮದ್ಯದಂಗಡಿಗಳು ಕಾರ್ಯನಿರ್ವಹಿಸುತ್ತಿವೆ. ರಾಜ್ಯದಲ್ಲಿ ಒಟ್ಟು 4,765 ಟಿಎಎಸ್‌ಎಮ್‌ಎಸಿ ಅಂಗಡಿಗಳಿವೆ. ಅವುಗಳಲ್ಲಿ 276 ದೇವಾಲಯಗಳ ಸಮೀಪ, 186 ಶಿಕ್ಷಣ ಸಂಸ್ಥೆಗಳ ಬಳಿ ಹಾಗೂ 255 ಬಸ್ ನಿಲ್ದಾಣಗಳ ಬಳಿ ಇವೆ.

ಮುಖ್ಯಮಂತ್ರಿ ಸ್ಥಾನಕ್ಕೇರಿದ ತಕ್ಷಣವೇ ವಿಜಯ್ ಈ ಮಹತ್ವದ ಆದೇಶ ಹೊರಡಿಸಿರುವುದು ರಾಜ್ಯ ರಾಜಕೀಯದಲ್ಲಿ ಚರ್ಚೆಗೆ ಕಾರಣವಾಗಿದೆ. ಸಾರ್ವಜನಿಕರ ಹಿತ ಹಾಗೂ ಯುವಜನರನ್ನು ವ್ಯಸನದಿಂದ ದೂರವಿಡುವ ಉದ್ದೇಶದಿಂದ ಈ ಕ್ರಮ ಕೈಗೊಳ್ಳಲಾಗಿದೆ ಎಂದು ಸರ್ಕಾರ ಸ್ಪಷ್ಟಪಡಿಸಿದೆ. ವ್ಯಸನ ಮುಕ್ತ ತಮಿಳುನಾಡು ನಿರ್ಮಿಸುವುದು ಸರ್ಕಾರದ ಗುರಿಯಾಗಿದೆ ಎಂದು ತಿಳಿಸಲಾಗಿದೆ.



ಇನ್ನೊಂದೆಡೆ, ಟಿಎಎಸ್‌ಎಮ್‌ಸಿ ಮೇಲೆ ಜಾರಿ ನಿರ್ದೇಶನಾಲಯದ (ಇಡಿ) ತನಿಖೆ ಮುಂದುವರಿದಿದೆ. ಕಳೆದ ವರ್ಷ ಹಣ ವರ್ಗಾವಣೆ ಹಾಗೂ ಟೆಂಡರ್ ಅಕ್ರಮಗಳ ಆರೋಪದಡಿ ಹಲವು ಸ್ಥಳಗಳಲ್ಲಿ ದಾಳಿ ನಡೆಸಲಾಗಿತ್ತು. ಟಿಎಎಸ್‌ಎಮ್‌ಸಿ ಮಳಿಗೆಗಳಲ್ಲಿ ಪ್ರತಿ ಬಾಟಲಿಗೆ ಹೆಚ್ಚುವರಿ ಹಣ ವಸೂಲಿ, ಟೆಂಡರ್ ಪುಟ 2ಕ್ಕೆ

## ಸಚಿವ ಸ್ಥಾನಕ್ಕೆ ವಿಧಾನ ಪರಿಷತ್ ಸದಸ್ಯರ ಮನವಿ

**ನವದೆಹಲಿ:** ರಾಜ್ಯ ರಾಜಕೀಯದಲ್ಲಿ ಪಂಚ ರಾಜ್ಯಗಳ ಚುನಾವಣೆ ಬಳಿಕ ಮಹತ್ವದ ಬೆಳವಣಿಗೆ ನಡೆಯುತ್ತಿದೆ. ಹಿರಿಯ ಶಾಸಕರು ಸಚಿವ ಸ್ಥಾನಕ್ಕಾಗಿ ಲಾಬಿ ಮಾಡಿದ ಬೆನ್ನಲ್ಲೇ ಈಗ ಪರಿಷತ್ ಸದಸ್ಯರು ಸಚಿವ ಸ್ಥಾನಕ್ಕಾಗಿ ದೆಹಲಿಯಲ್ಲಿ ಬೀಡು ಬಿಟ್ಟಿದ್ದಾರೆ.

ವಿಧಾನ ಪರಿಷತ್ ಸದಸ್ಯರಾದ ಪುಟ್ಟಣ್ಣ, ಮಧು ಜಿ ಮಾದೇಗೌಡ, ಪುಟ 2ಕ್ಕೆ

## ಎಲ್‌ಪಿಜಿ ಉತ್ಪಾದನೆ ಹೆಚ್ಚಳ

**ನವದೆಹಲಿ:** ಪಶ್ಚಿಮ ಏಷ್ಯಾ ಸಂಘರ್ಷದ ನಡುವೆಯೂ ದೇಶದಲ್ಲಿ ಇಂಧನ ಪೂರೈಕೆ ಕೊರತೆ. ಎಲ್ ಪಿಜಿ ಉತ್ಪಾದನೆ ದಿನಕ್ಕೆ 54,000 ಟನ್ ಗೆ ಏರಿಕೆಯಾಗಿದೆ ಎಂದು ಕೇಂದ್ರ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವ ಹರ್ದೀಪ್ ಸಿಂಗ್ ಪುರಿ ತಿಳಿಸಿದರು.


ಬಿಸಿನೆಸ್ ಸಮಿಟ್‌ನಲ್ಲಿ ಮಂಗಳವಾರ ಮಾತನಾಡಿದ ಅವರು, ಪಶ್ಚಿಮ ಏಷ್ಯಾ ಸಂಘರ್ಷದ ನಡುವೆಯೂ ದೇಶದಲ್ಲಿ ಇಂಧನ ಪೂರೈಕೆ ಕೊರತೆ ಇಲ್ಲ ಎಂದು ಭರವಸೆ ನೀಡಿದರು. ಅಲ್ಲದೆ ಪಶ್ಚಿಮ ಏಷ್ಯಾ ಸಂಘರ್ಷದ ಹಿನ್ನೆಲೆಯಲ್ಲಿ ಎಲ್‌ಪಿಜಿ



## Google ಎಂಜಿನ್ ಡೌನ್

**ನವದೆಹಲಿ:** ವಿಶ್ವದ ಅತಿದೊಡ್ಡ ಸರ್ಚ್ ಎಂಜಿನ್ ಗೂಗಲ್ ಭಾರತ ಸೇರಿದಂತೆ ಕೆಲವು ದೇಶಗಳಲ್ಲಿ ತಾಂತ್ರಿಕ ಸಮಸ್ಯೆಯನ್ನು ಎದುರಿಸಿತು. ಮಂಗಳವಾರ ಬೆಳಿಗ್ಗೆ 9:48ರಿಂದ ಗೂಗಲ್ ಸೇವೆಗಳಲ್ಲಿ ವ್ಯತ್ಯಯ ಆಗಿತ್ತು. ದೇಶದ ಹಲವು ಭಾಗಗಳ ಬಳಕೆದಾರರು ಗೂಗಲ್ ಸೇವೆಗಳನ್ನು ಬಳಸಲು ಸಾಧ್ಯವಾಗುತ್ತಿಲ್ಲ ಎಂದು ದೂರು ನೀಡಿದರು.

ಸೇವಾ ಸ್ಥಗಿತಗಳನ್ನು ಟ್ರ್ಯಾಕ್ ಮಾಡುವ ಡೌನ್‌ಡೆಕ್ಟರ್ ಪ್ರಕಾರ, ಬೆಳಿಗ್ಗೆ 10:23ರ ವೇಳೆಗೆ 3,665ಕ್ಕೂ ಹೆಚ್ಚು ಬಳಕೆದಾರರು ಸಮಸ್ಯೆ ಬಗ್ಗೆ ವರದಿ ಮಾಡಿದ್ದಾರೆ. ಗೂಗಲ್ ಸರ್ಚ್ ಸೇರಿದಂತೆ ಹಲವು ಗೂಗಲ್ ಸೇವೆಗಳು ಸರಿಯಾಗಿ ಕಾರ್ಯನಿರ್ವಹಿಸುತ್ತಿಲ್ಲ ಎಂದು ಬಳಕೆದಾರರು ತಿಳಿಸಿದ್ದಾರೆ.





ಗೂಗಲ್ ಸೇವೆಗಳು ಡೌನ್ ಆಗಿದೆಯೇ ಎಂದು ತಿಳಿದುಕೊಳ್ಳಲು ಬಳಕೆದಾರರು ಡೌನ್ ಡಿಟೆಕ್ಟರ್ ವೆಬ್‌ಸೈಟ್ ಅಥವಾ ಗೂಗಲ್‌ನ ಅಧಿಕೃತ ಸ್ಟೇಟಸ್ ಡ್ಯಾಶ್‌ಬೋರ್ಡ್ ಪರಿಶೀಲಿಸಬಹುದು. ಅಲ್ಲದೆ ಸಾಮಾಜಿಕ ಜಾಲತಾಣ ಎಕ್ಸ್ ನಲ್ಲೂ ಹಲವರು ಸಮಸ್ಯೆ ಕುರಿತು ಪೋಸ್ಟ್ ಮಾಡುತ್ತಿದ್ದಾರೆ.

## ಮುಗಿಯದ ಕೇರಳ ಸಿಎಂ ಆಯ್ಕೆ ಬಿಕ್ಕಟ್ಟು

**ತಿರುವನಂತಪುರಂ:** ಕೇರಳದಲ್ಲಿ ಮುಖ್ಯಮಂತ್ರಿ ಆಯ್ಕೆ ಬಿಕ್ಕಟ್ಟು ಇನ್ನೂ ಬಗೆಹರಿದಿಲ್ಲ. ಪಕ್ಷದ ವರಿಷ್ಠರೊಂದಿಗೆ ಉನ್ನತ ಮಟ್ಟದ ಚರ್ಚೆಗಾಗಿ ಕೇರಳ ಪ್ರದೇಶ ಕಾಂಗ್ರೆಸ್ ಸಮಿತಿ (ಕೆಪಿಸಿಸಿ) ಮಾಜಿ ಅಧ್ಯಕ್ಷ ಕೆ.ಸುಧಾಕರನ್ ದೆಹಲಿಗೆ ತೆರಳಿದ್ದಾರೆ.

ಕೇರಳ ಸಿಎಂ ಬಿಕ್ಕಟ್ಟು ನಿವಾರಿಸುವ ನಿಟ್ಟಿನಲ್ಲಿ ಕೆ.ಸುಧಾಕರನ್ ಜೊತೆಗೆ, ಹಿರಿಯ ಕಾಂಗ್ರೆಸ್ ನಾಯಕರ ನಿಯೋಗ ವರಿಷ್ಠರೊಂದಿಗೆ ಮಾತುಕತೆಗಾಗಿ ರಾಷ್ಟ್ರ ರಾಜಧಾನಿಗೆ ಭೇಟಿ ನೀಡಿದೆ. ಮುಂದಿನ 48 ಗಂಟೆಗಳಲ್ಲಿ ರಾಜ್ಯದ ನಾಯಕತ್ವದ ಬಗ್ಗೆ ಅಂತಿಮ ನಿರ್ಧಾರವನ್ನು ಪುಟ 2ಕ್ಕೆ



## ವಿಜಯ್‌ಗೆ ಷಣ್ಮುಗಂ ಬಣ ಬೆಂಬಲ

### ಎಐಎಡಿಎಂಕೆ ಹೋಳು: ಪಳನಿಸ್ವಾಮಿಗೆ ತಿರುಗೇಟು

**ಚೆನ್ನೈ:** ತಮಿಳುನಾಡು ರಾಜಕೀಯದಲ್ಲಿ ಮಹತ್ವದ ಬೆಳವಣಿಗೆ ನಡೆದಿದೆ. ಎಐಎಡಿಎಂಕೆಯ ಎಸ್‌ಪಿ ವೇಲುಮಣಿ ಮತ್ತು ಸಿ.ವಿ ಷಣ್ಮುಗಂ ನೇತೃತ್ವದ ಒಂದು ಬಣವು ಮಂಗಳವಾರ ಮುಖ್ಯಮಂತ್ರಿ ವಿಜಯ್ ಅವರ ತಮಿಳಗ ವೆಟ್ರಿ ಕಳಗಂ (ಟಿವಿಕೆ) ನೇತೃತ್ವದ ಸರ್ಕಾರಕ್ಕೆ ಬೆಂಬಲ ಘೋಷಿಸಿದೆ. ಪುಟ 2ಕ್ಕೆ

# ಕೆಪಿಎಸ್‌ಸಿ ಹಾಳಾಗಲು ಕಾಂಗ್ರೆಸ್ ಕಾರಣ

## ನಿಮ್ಮ ಅವಧಿಯಲ್ಲಿ ಪರೀಕ್ಷಾ ಅಕ್ರಮ ಆಗಿಲ್ಲವೇ: ಕೇಂದ್ರ ಸಚಿವ ಎಚ್‌ಡಿಕೆ ಪ್ರಶ್ನೆ

**ಬೆಂಗಳೂರು:** ರಾಜ್ಯದಲ್ಲಿ ಕೆಪಿಎಸ್‌ಸಿ ಹಾಳಾಗಲು ಕಾಂಗ್ರೆಸ್ ಕಾರಣ. ಇವರ ಅವಧಿಯಲ್ಲಿ ಎಷ್ಟು ಬಾರಿ ಪೇಪರ್ ಲೀಕ್ ಆಗಿದೆ ಎಂದು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಕಿಡಿಕಾರಿದರು.

ನೀಟ್ ಮರು ಪರೀಕ್ಷೆ ವಿಚಾರವಾಗಿ ವಿಪಕ್ಷಗಳ ಟೀಕೆ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಅವರು, ನಮ್ಮ ರಾಜ್ಯದಲ್ಲಿ ಎಷ್ಟು ಬಾರಿ ಪರೀಕ್ಷೆ ಮುಂದೆ ಹಾಕಿದ್ದೀರಿ? ಕಾಂಗ್ರೆಸ್ ಕಾಲದಲ್ಲಿ ಎಷ್ಟು ಅನಾಹುತ ಆಗಿಲ್ಲ? ನಮ್ಮ ರಾಜ್ಯದಲ್ಲಿ ಕೆಪಿಎಸ್‌ಸಿ ಸಂಸ್ಥೆಯನ್ನು ಸರಿಪಡಿಸಲು ಆಗಲಿಲ್ಲ. ಕಾಂಗ್ರೆಸ್‌ನಿಂದಲೇ ಕೆಪಿಎಸ್‌ಸಿ ಹಾಳಾಗಿದ್ದು. ಸಿದ್ದರಾಮಯ್ಯ ಅವರು ಎಲ್ಲಾ ತೊಳೆಯುತ್ತೇವೆ ಎಂದಿದ್ದರು. ಯಾವ ರೀತಿ ತೊಳೆದರು? ಪೋಸ್ಟ್ ಗಳಿಗೆ ಹಣ ನಿಗದಿ ಮಾಡಿರುವುದು ಬೀದಿ ಬೀದಿಯಲ್ಲಿ ಚರ್ಚೆ ಆಯ್ತು. ಆ ವಾತಾವರಣ ತಂದಿದ್ದು ಕಾಂಗ್ರೆಸ್ ಎಂದು ವಾಗ್ದಾಳಿ ನಡೆಸಿದರು.

ರಾಜಸ್ತಾನದಲ್ಲಿ ಪೇಪರ್ ಲೀಕ್ ಆಗಿದೆ. ಒಂದೊಂದು ಬಾರಿ ಯಾರೋ ಮಾಡಿದ ತಪ್ಪಿಗೆ ಸರ್ಕಾರದ ಮೇಲೆ ತಪ್ಪು ಹೊರೆಸಲು ಆಗಲ್ಲ. ನಮ್ಮ ರಾಜ್ಯದಲ್ಲಿ ಕಾಂಗ್ರೆಸ್






### ಜಿಬಿಎ ಚುನಾವಣೆ: ಸಿದ್ದು–ಡಿಕೆಶಿ ಕಿತ್ತಾಟ

ಜಿಬಿಎ ಚುನಾವಣೆ ಮುಂದೂಡಿಕೆಗೆ ಸರ್ಕಾರದ ಪ್ರಯತ್ನ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಎಚ್.ಡಿ.ಕುಮಾರಸ್ವಾಮಿ, ಜಿಬಿಎ ಚುನಾವಣೆ ಮಾಡಬೇಕು ಅಂತ ಸಿಎಂ ಎಲೆಕ್ಷನ್ ಸಿಬ್ಬಂದಿಯನ್ನು ಡಿಸಿಎಂ ಅನುಪಸ್ಥಿತಿಯಲ್ಲಿ ಕರೆದರು. ಕರೆದು ಜಿಬಿಎ ಚುನಾವಣೆ ಮಾಡೋಕೆ ಒತ್ತಡ ಹಾಕಿದರು. ನಂತರ ಡಿಸಿಎಂ ಬಂದು ಮತ್ತೊಂದು ಸಭೆ ಕರೆದು ಯಾವುದೇ ಕಾರಣಕ್ಕೂ ಚುನಾವಣೆ ಮಾಡಬಾರದು ಅಂತ ಸಿಎಂ ಮೇಲೆ ಒತ್ತಡ ಹಾಕಿದ್ದಾರೆ. ಈಗ ಸುಪ್ರೀಂಕೋರ್ಟ್ ಮುಂದೆ ಅರ್ಜಿ ಹಾಕಿದ್ದಾರೆ. ಜನಗಣತಿ ಅದು, ಇದು ಅಂತ ಹೇಳಿ ಸೆಪ್ಟೆಂಬರ್ ವರೆಗೂ ಚುನಾವಣೆ ಆಗಲ್ಲ ಅಂತ

## ಸಿಎಂ ವಿಜಯ್‌ಗೆ ಹೈಕೋರ್ಟ್ ಶಾಕ್

### ಒಂದು ಮತದಿಂದ ಗೆಲುವು | ವಿಶ್ವಾಸಮತದಲ್ಲಿ ಪಾಲ್ಗೊಳ್ಳದಂತೆ ತಡೆ

**ಚೆನ್ನೈ:** ತಮಿಳುನಾಡಿನ ನೂತನ ಮುಖ್ಯಮಂತ್ರಿ ವಿಜಯ್‌ಗೆ ಮೊದಲ ದಿನವೇ ಮದ್ರಾಸ್ ಹೈಕೋರ್ಟ್ ಶಾಕ್ ನೀಡಿದೆ. ಟಿವಿಕೆ ಶಾಸಕರೊಬ್ಬರಿಗೆ ವಿಶ್ವಾಸಮತ ಪ್ರಕ್ರಿಯೆಯಲ್ಲಿ ಪಾಲ್ಗೊಳ್ಳದಂತೆ ತಡೆ ನೀಡಿದೆ.

ಮದ್ರಾಸ್ ಹೈಕೋರ್ಟ್ ಮಂಗಳವಾರ ತಿರುಪತ್ತೂರು ಶಾಸಕ ಆರ್.ಶ್ರೀನಿವಾಸ ಸೇತುಪತಿ ಅವರನ್ನು ವಿಧಾನಸಭೆಯ ಕಾರ್ಯಚಟುವಟಿಕೆಗಳಲ್ಲಿ ಭಾಗವಹಿಸುವುದರಿಂದ ತಾತ್ಕಾಲಿಕವಾಗಿ ನಿರ್ಬಂಧಿಸಿದೆ. ಹೀಗಾಗಿ ವಿಜಯ್ ನೇತೃತ್ವದ ಸರ್ಕಾರ ಎದುರಿಸಲಿರುವ ವಿಶ್ವಾಸಮತ ಯಾಚನೆ ಪರೀಕ್ಷೆಯಲ್ಲಿ ಅವರು ಭಾಗವಹಿಸಲು ಸಾಧ್ಯವಿಲ್ಲ.

ನ್ಯಾಯಮೂರ್ತಿಗಳಾದ ಎಲ್.ವಿಕ್ಟೋರಿಯಾ ಗೌರಿ ಮತ್ತು ಎನ್.ಸೆಂಥಿಲ್ ಕುಮಾರ್ ಒಳಗೊಂಡ ವಿಭಾಗೀಯ ಪೀಠವು ಮಧ್ಯಂತರ ತಡೆ ಆದೇಶವನ್ನು ನೀಡಿದೆ. ಅರ್ಜಿಯನ್ನು ಮಾಜಿ ಸಚಿವ ಪೆರಿಯಕರುಪ್ಪನ್ ಸಲ್ಲಿಸಿದ್ದರು. ತಿರುಪತ್ತೂರು ವಿಧಾನಸಭಾ ಚುನಾವಣೆಯಲ್ಲಿ ಆರ್.ಶ್ರೀನಿವಾಸ ವಿರುದ್ಧ ಕೇವಲ ಒಂದು ಮತದ ಅಂತರದಿಂದ ಅವರು ಸೋತಿದ್ದರು.



ಶಿವಗಂಗೈ ಜಿಲ್ಲೆಯ ತಿರುಪತ್ತೂರು ಕ್ಷೇತ್ರಕ್ಕೆ ಸೇರಿದ ಅಂಚೆ ಮತಪತ್ರವನ್ನು ತಪ್ಪಾಗಿ ತಿರುಪತ್ತೂರು ಜಿಲ್ಲೆಯ ಮತ್ತೊಂದು ತಿರುಪತ್ತೂರು ಕ್ಷೇತ್ರಕ್ಕೆ ಕಳುಹಿಸಲಾಗಿದೆ ಎಂದು ಆರೋಪಿಸಿದರು. ಆ ಮತಪತ್ರವನ್ನು ಸರಿಯಾದ ಕ್ಷೇತ್ರಕ್ಕೆ ಮರುಕಳುಹಿಸಿ ಎಣಿಸುವ ಬದಲು ತಿರಸ್ಕರಿಸಲಾಗಿದೆ ಎಂದು ಅವರು ಅರ್ಜಿ ಸಲ್ಲಿಸಿದ್ದರು. ಈ ತೀರ್ಪು ವಿಜಯ್ ನೇತೃತ್ವದ ಸರ್ಕಾರದ ಸ್ಥಿರತೆಯನ್ನು ನಿರ್ಧರಿಸಬಹುದಾದ ವಿಶ್ವಾಸ ಪರೀಕ್ಷೆಗೆ ಮುನ್ನವೇ

# ಮತ ಕದ್ದು ಚುನಾವಣೆ ಗೆಲ್ಲಲು ಬಿಜೆಪಿ ತಂತ್ರ

## ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ್ ಕಿಡಿ



ಮೈಸೂರು: ಕೇಂದ್ರದ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಬಿಜೆಪಿ ಸರ್ಕಾರ ಕೇಂದ್ರ ಚುನಾವಣಾ ಆಯೋಗದ ಮೂಲಕ ಮತಪರಿಷ್ಕರಣೆ ನೆಪದಲ್ಲಿ ಮತಗಳನ್ನು ಕದಿಯುವ ದರೋಡೆಗೆ ಮುಂದಾಗಿದ್ದು, ಆ ಮೂಲಕ 2028ರ ಚುನಾವಣೆ ಗೆಲ್ಲಲು ಈಗಲೇ ತಯಾರಿ ನಡೆಸುತ್ತಿದೆ ಎಂದು ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ್ ಕಿಡಿಕಾರಿದರು.

ನಗರದ ಜಲದರ್ಶಿನಿ ಅತಿಥಿಗೃಹದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿ, ಮತಪರಿಷ್ಕರಣೆ (ಎಸ್.ಐ.ಆರ್) ಹೆಸರಿನಲ್ಲಿ ರಾಜ್ಯದಲ್ಲಿ 86 ಲಕ್ಷ ಮತದಾರರನ್ನು ಕೈ ಬಿಡಲು ಬಿಜೆಪಿ ಹುನ್ನಾರ ನಡೆಸಿದೆ. ಈಗಾಗಲೇ ಹರಿಯಾಣ, ಬಿಹಾರ್,ಮಹರಾಷ್ಟ್ರ ಮತ್ತು ಪಶ್ಚಿಮ ಬಂಗಾಳದಲ್ಲಿ ಲಕ್ಷಾಂತರ ಮತದಾರರನ್ನು ಕೈಬಿಟ್ಟು ಚುನಾವಣೆ ಗೆದ್ದಿದ್ದಾರೆ. ಈಗ ಕರ್ನಾಟಕದಲ್ಲೂ ಚುನಾವಣಾ ಮ್ಯಾಪಿಂಗ್‌ಗೆ ಮುಂದಾಗಿ 15 ದಿನಗಳ ಹಿಂದೆಯೇ ರಾಜ್ಯಾದ್ಯಂತ ಮ್ಯಾಪಿಂಗ್ ಕಾರ್ಯ ಮುಗಿದಿದೆ. ರಾಜ್ಯದಲ್ಲಿ 2025-2026 ರಲ್ಲಿ ಒಟ್ಟು 5.5 ಕೋಟಿ ಮತದಾರರು ಇದ್ದಾರೆ. ಶೇ.85 ರಷ್ಟು ಮ್ಯಾಪಿಂಗ್ ಮಾಡಿದ್ದು ಶೇ.15ರಷ್ಟು ಅಂದರೆ 86 ಲಕ್ಷದಷ್ಟು ಮ್ಯಾಪಿಂಗ್ ಮಾಡದೆ ಮತದಾರರ ಪಟ್ಟಿಯಿಂದ ಹೊರಗಿಟ್ಟಿದ್ದಾರೆ. ಚುನಾವಣಾ ಆಯೋಗವನ್ನು ಕೇಳಿದರೆ ಕೈ ಬಿಡುವುದಿಲ್ಲ ಎಂದು ಹೇಳುತ್ತಾರೆ. ಆದರೆ, ಚುನಾವಣಾ ಸಮಯದಲ್ಲಿ ಕೈ ಬಿಟ್ಟು ಬಿಜೆಪಿಯವರಿಗೆ ಪೂರಕ ವಾತಾವರಣ ಸೃಷ್ಟಿ ಮಾಡಲಿದ್ದಾರೆಂದು ಆರೋಪಿಸಿದರು.


ಉದಾಹರಣೆಗೆ ಮೈಸೂರು ಜಿಲ್ಲೆಯ 11 ವಿಧಾನ ಸಭಾ ಕ್ಷೇತ್ರಗಳಲ್ಲಿ ಒಟ್ಟು 27,99,744 ಮತದಾರರಿದ್ದಾರೆ. ಇದರಲ್ಲಿ 3,48,544 ಮಂದಿಯನ್ನು ಕೈ ಬಿಡಲು ಮುಂದಾಗಿದ್ದಾರೆ. ಚಾಮುಂಡೇಶ್ವರಿ ಕ್ಷೇತ್ರದಲ್ಲಿ 71,521, ನರಸಿಂಹರಾಜ ಕ್ಷೇತ್ರದಲ್ಲಿ 59,749 ಮತದಾರರನ್ನು ಕೈಬಿಡಲು ಮುಂದಾಗಿದ್ದು, ಈ ಪೈಕಿ 40 ಸಾವಿರ ಮುಸ್ಲಿಮ್ ಮತದಾರರಿದ್ದಾರೆಂದರು. ಇನ್ನೂ ಬಿಟ್ಟು ಹೋದ ಮತದಾರರ ಸೇರ್ಪಡೆಗೆ ಅವಕಾಶವಿದೆ ಎಂದು ಚುನಾವಣಾಧಿಕಾರಿಗಳು ಹೇಳುತ್ತಾರೆ. ಆದರೆ, ಅವರ ನಿಯಮಗಳನ್ನು ನೋಡಿದರೆ ಮರು ಸೇರ್ಪಡೆ ಕಷ್ಟವಾಗಿದೆ. ಏಕೆಂದರೆ ಮತದಾರರ ಮರು ಸೇರ್ಪಡೆಗೆ ತಂದೆಯ ಓಟರ್ ಐಡಿ ನೀಡಬೇಕು. ತಂದೆ ಮಗನ ಸಂಬಂಧಕ್ಕೆ ಸಂಬಂಧಿಸಿದ ಎರಡು ದಾಖಲೆಗಳು ನೀಡಬೇಕು. ಜನ್ಮ ವಿವರದ ಮಾಹಿತಿಗೆ ದಾಖಲೆ ಒದಗಿಸಬೇಕು. ಕುಟುಂಬದ ಹಿರಿಯ ಸದಸ್ಯ ಮ್ಯಾಪಿಂಗ್ ಒಳಪಡದಿದ್ದರೆ ಇಡೀ ಕುಟುಂಬದ ಮತದಾರರ ಪಟ್ಟಿಗೆ ತಡೆ ಸಿಗಲಿದೆ ಇದೆಲ್ಲಾ ಅಂಶಗಳನ್ನು ನೋಡಿದರೆ ವಾಮಮಾರ್ಗದಲ್ಲಿ ವ್ಯವಸ್ಥಿತವಾಗಿ ಬಿಜೆಪಿ 2028 ಚುನಾವಣೆ ಗೆಲ್ಲಲು ತಯಾರಿ ನಡೆಸಿದ್ದಾರೆಂದರು.

ಕೇರಳದಲ್ಲಿ 16ಲಕ್ಷ, ತಮಿಳುನಾಡಿನಲ್ಲಿ 20ಲಕ್ಷ, ಪಶ್ಚಿಮ ಬಂಗಾಳದಲ್ಲಿ 92ಲಕ್ಷ ಮತದಾರರನ್ನು ಕಿತ್ತು ಹಾಕಿದ್ದಾರೆ. ಇದು ಗೊತ್ತಾದ ಬಳಿಕ ಮಮತಾ ಬ್ಯಾನರ್ಜಿಯೇ ಕೋರ್ಟ್‌ನಲ್ಲಿ ವಾದ ಮಾಡಿ ಅಂತಿಮವಾಗಿ ಸೇರಿಸಿದ್ದು ಕೇವಲ 450 ಮಾತ್ರ. ಬಿಜೆಪಿ ನಡೆ ನೋಡಿದರೆ ಮುಂದಿನ ದಿನಗಳಲ್ಲಿ ಪಶ್ಚಿಮ ಬಂಗಾಳದ ಕಥೆಯೂ ಇಲ್ಲೂ ಆಗಲಿದೆ ಎಂದರು. ಇದು ವ್ಯವಸ್ಥಿತ ಪಿತೂರಿ ಆಗಿದೆ. ಮುಖ್ಯಮಂತ್ರಿ ಸಿದ್ಧರಾಮಯ್ಯ ಇದನ್ನು ಒಪ್ಪಿಕೊಳ್ಳುವುದಿಲ್ಲ. ಸುಗ್ರೀವಾಜ್ಞೆ ಮೂಲಕ ಚುನಾವಣಾ ಆಯೋಗಕ್ಕೆ ಕಳುಹಿಸುತ್ತೇವೆ ಎಂದು ಹೇಳಿದ್ದಾರೆ. ಈ ಸಮಯದಲ್ಲಿ ಜನರ ಸಹಕಾರ ಸರ್ಕಾರ ಜೊತೆ ಇರಬೇಕು. ಸರ್ಕಾರದ ತೀರ್ಮಾನಕ್ಕೆ ಎಲ್ಲರೂ ಬದ್ಧರಾಗಿರಬೇಕು ಎಂದು ಮನವಿ ಮಾಡಿದರು. ಶೃಂಗೇರಿ ಕ್ಷೇತ್ರದ ಮರು ಎಣಿಕೆಗೆ ಸಂಬಂಧಿಸಿದಂತೆ ಸುಪ್ರೀಂಕೋರ್ಟ್ ನೀಡಿರುವ ತೀರ್ಪು ಸತ್ಯಕ್ಕೆ ಸಂದ ಜಯವಾಗಿದೆ. ಬ್ಯಾಲೆಟ್ ಪೇಪರ್‌ಗಳನ್ನು ತಿದ್ದಲಾಗಿದೆ. ಬಿಜೆಪಿಯ ಕಾರ್ಯಕರ್ತರೇ ತಮ್ಮ ಅಧಿಕಾರ ಉಪಯೋಗಿಸಿಕೊಂಡಿರುವುದು ಗೊತ್ತಾಗಲಿದೆ. ನೀಟ್ ಪರೀಕ್ಷೆಯಲ್ಲಿ ದೊಡ್ಡ ಗೋಲ್‌ಮಾಲ್ ನಡೆದಿದೆ. ತಮಿಳುನಾಡಿನಂತೆ ಕರ್ನಾಟಕದಲ್ಲೂ ನೀಟ್ ಪರೀಕ್ಷೆಯನ್ನು ಬ್ಯಾನ್ ಮಾಡಬೇಕು. ಪ್ರಶ್ನೆ ಪತ್ರಿಕೆ ಸೋರಿಕೆಯಾಗಿರುವುದರ ಹಿಂದೆ ದೊಡ್ಡ ವ್ಯಕ್ತಿಗಳು ಶಾಮೀಲಾಗಿದ್ದಾರೆ ಎಂದು ಆರೋಪಿಸಿದರು. ಕಾಂಗ್ರೆಸ್ ಜಿಲ್ಲಾಧ್ಯಕ್ಷ ಡಾ.ಬಿ.ಜೆ.ವಿಜಯಕುಮಾರ್, ಜಿಪಂ ಮಾಜಿ ಅಧ್ಯಕ್ಷ ಬಿ.ಎಂ.ರಾಮು, ನಗರ ಪ್ರಧಾನ ಕಾರ್ಯದರ್ಶಿ ಎಂ.ಶಿವಣ್ಣ, ವಕ್ತಾರ ಕೆ.ಮಹೇಶ್, ಕಾರ್ಯದರ್ಶಿ ಗಿರೀಶ್ ನಾಯ್ಕ ಹಾಜರಿದ್ದರು.

## ದೇಶ ದಿವಾಳಿಗೆ ಮೋದಿಯಿಂದ ಮುನ್ಸೂಚನೆ

ಮೈಸೂರು: ಪ್ರಧಾನಿ ನರೇಂದ್ರ ಮೋದಿ ದೇಶದ ಜನರಿಗೆ ಏನು ತಿನ್ನಬೇಕು, ಏನು ಬಳಸಬೇಕು, ಏನು ಉಳಿಸಬೇಕೆಂಬುದನ್ನು ಹೇಳುತ್ತಿರುವುದು ಗಮನಿಸಿದರೆ ದೇಶದ ಆರ್ಥಿಕ ಪರಿಸ್ಥಿತಿ ದಿವಾಳಿಯಾಗಿದ್ದು, ಅದರ ಪರಿಣಾಮ ಮುಂದಿನ ದಿನಗಳಲ್ಲಿ ನಾಗರೀಕರ ಮೇಲೆ ಬೀಳಲಿದೆ ಇದರ ಮುನ್ಸೂಚನೆಯೇ ಮೋದಿಯವರ ಹೇಳಿಕೆಯಾಗಿದೆ ಎಂದು ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ್ ಹೇಳಿದರು.

ಚಿನ್ನ ಖರೀದಿಸಬೇಡಿ, ವಿದೇಶಕ್ಕೆ ಹೋಗಬೇಡಿ, ಪೆಟ್ರೋಲ್ ಮತ್ತು ಗ್ಯಾಸ್ ಮಿತವಾಗಿ ಬಳಸಿ. ರಸಗೊಬ್ಬ ಬಳಸಬೇಡಿ, ಮೆಟ್ರೋದಲ್ಲಿ ಓಡಾಡಿ. ಮನೆಯಲ್ಲೇ ಕೆಲಸಮಾಡಿ ಎಂದು ಮೋದಿ ಕರೆಕೊಟ್ಟಿದ್ದಾರೆ. 12 ವರ್ಷ ಆಡಳಿತ ನಡೆಸಿದ ಪ್ರಧಾನಿ ಜನಸಾಮಾನ್ಯರನ್ನು ಧಿಕ್ಕು ತಪ್ಪಿಸುವ ಹೇಳಿಕೆ ನೀಡುತ್ತಿದ್ದಾರೆ. ದೇಶದ ಆರ್ಥಿಕ ಪರಿಸ್ಥಿತಿ ಹದಗೆಟ್ಟಿದೆ. ಡಾಲರ್ ಎದುರು ರೂಪಾಯಿ ಮೌಲ್ಯ ಕುಸಿದಿದೆ. ದೇಶದ ಜಿಡಿಪಿ ಕುಸಿತ 8ನೇ ಸ್ಥಾನಕ್ಕೆ ಹೋಗಿದೆ. ವಾಹನ ಬಿಟ್ಟು ಬಸ್, ರೈಲುಗಳಲ್ಲಿ ಓಡಾಡುವಂತೆ ಹೇಳಿರುವುದಕ್ಕೆ ಅಂಧಭಕ್ತರು ಸ್ವಾಗತಿಸುತ್ತಿದ್ದಾರೆ. ಅರ್ಥ ವ್ಯವಸ್ಥೆ ಹಾಳು ಮಾಡಿರುವುದನ್ನು ನೋಡಿದರೆ ಮುಂದೆ ದೊಡ್ಡ ಕಂಟಕವಾಗಲಿದೆ. ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡರು ಸ್ವಾಗತಿಸಿರುವುದು ದುರಂತ. ಚಿನ್ನ ಖರೀದಿಸಬೇಡಿ ಎಂದ ಮೇಲೆ



### 10 ರೂಪಾಯಿ ತಂದಿಲ್ಲ



**ಮೈಸೂರು ಅಭಿವೃದ್ಧಿ ಬಗ್ಗೆ ಮಾತನಾಡುವ ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಕೇಂದ್ರ ಸರ್ಕಾರದಿಂದ ಹತ್ತು ರೂಪಾಯಿ ತಂದಿಲ್ಲ. ವಿಮಾನ ನಿಲ್ದಾಣದ ರನ್‌ವೇ ವಿಸ್ತರಣೆಗೆ ರಾಜ್ಯ ಸರ್ಕಾರ ಅನುದಾನ ನೀಡಿದೆ. ಎನ್‌ಎಚ್‌ಐಎನಿಂದ ಬೈಪಾಸ್ ರಸ್ತೆಗೆ ಅನುಮೋದನೆ ಕೊಡಿಸಿಲ್ಲ. ಪ್ರಸಾದ್ ಯೋಜನೆ, ಯೂನಿಟಿ ಮಾಲ್ ಯೋಜನೆಗೆ ತಡೆಯಾಜ್ಞೆ ತರಲಾಗಿದೆ. ಮೊದಲು ಕೇಂದ್ರದಿಂದ ನೀವು ಏನು ತಂದಿದ್ದೀರಾ ಎಂದು ಹೇಳಿ? ಮೋದಿ ನಿಲುವು ಸಮರ್ಥಿಸಿಕೊಳ್ಳುವ ಬಿಜೆಪಿಯ ಬಹುತೇಕ ನಾಯಕರು ಜೋಕರ್‌ಗಳಾಗಿದ್ದಾರೆ. ಆರ್.ಅಶೋಕ್ ನಂಬರ್ ಒನ್ ಜೋಕರ್, ಛಲವಾದಿ ನಾರಾಯಣಸ್ವಾಮಿ ನಂಬರ್ ಟು ಜೋಕರ್. ಈಗ ಮೊದಲನೇ ಸ್ಥಾನಕ್ಕೆ ಬರಲು ಕೇಂದ್ರ ಸಚಿವ ವಿ.ಸೋಮಣ್ಣ ಪೈಪೋಟಿ ನೀಡುತ್ತಿದ್ದಾರೆ. ಆರ್.ಅಶೋಕ್ ಅವರಂತಹ ಮೂರ್ಖ ಬೇರೆ ಯಾರಿಲ್ಲ ಎಂದು ಲಕ್ಷ್ಮಣ್ ಟೀಕಿಸಿದರು.**

ಟಿ.ಎ.ಶರವಣರಿಗೆ ಮುಖವೇ ಇಲ್ಲದಂತಾಗಿದೆ. ಟಿ.ಎ.ಶರವಣ ಅವರೇ ಎಲ್ಲಿ ಹೋಗಿದ್ದೀರಾ? ನಿಮ್ಮ ಮೋದಿ ಬಗ್ಗೆ ಯಾಕೆ ಬಾಯಿ ಬಿಡುತ್ತಿಲ್ಲ ಎಂದು ಪ್ರಶ್ನಿಸಿದರು.

## ಮೊದಲ ಪುಟದಿಂದ

### ವಿಜಯ್‌ಗೆ ಷಣ್ಮುಗಂ ಬಣ ಬೆಂಬಲ

ಷಣ್ಮುಗಂ ಬಣದ ನಾಯಕರು ವಿಜಯ್ ಅವರನ್ನು ಭೇಟಿ ಮಾಡಲು ಯೋಜಿಸಿದ್ದಾರೆ. ನಾವು ಪಕ್ಷವನ್ನು ಪುನರುಜ್ಜೀವನಗೊಳಿಸಬೇಕು. ಅದರ ಭವಿಷ್ಯದ ಬಗ್ಗೆ ಚರ್ಚಿಸಬೇಕು. ಈ ಬಗ್ಗೆ ಸಭೆ ಕರೆಯುವಂತೆ ಎಐಎಡಿಎಂಕೆ ಮುಖ್ಯಸ್ಥ ಎಡಪ್ಪಾಡಿ ಕೆ ಪಳನಿಸ್ವಾಮಿ ಅವರನ್ನು ಒತ್ತಾಯಿಸುತ್ತೇವೆ ಎಂದು ಷಣ್ಮುಗಂ ತಿಳಿಸಿದ್ದಾರೆ.

ನಾವು ಡಿಎಂಕೆ ವಿರುದ್ಧ ಈ ಪಕ್ಷವನ್ನು ಸ್ಥಾಪಿಸಿದ್ದೇವೆ. 53 ವರ್ಷಗಳ ಕಾಲ ನಮ್ಮ ರಾಜಕೀಯ ಡಿಎಂಕೆಗೆ ವಿರುದ್ಧವಾಗಿತ್ತು. ಹೀಗಾಗಿ ಡಿಎಂಕೆ ಬೆಂಬಲದೊಂದಿಗೆ ಎಐಎಡಿಎಂಕೆ ಸರ್ಕಾರವನ್ನು ರಚಿಸುವ ಪ್ರಸ್ತಾಪವನ್ನು ತಿರಸ್ಕರಿಸಲಾಯಿತು. ನಾವು ಅಂತಹ ಮೈತ್ರಿಯನ್ನು ರಚಿಸಿದ್ದರೆ ಎಐಎಡಿಎಂಕೆ ಅಸ್ತಿತ್ವದಲ್ಲೇ ಇರುತ್ತಿರಲಿಲ್ಲ ಎಂದು ಹೇಳಿದರು.

ಎಐಎಡಿಎಂಕೆಯನ್ನು ವಿಭಜಿಸುವ ಯಾವುದೇ ಉದ್ದೇಶ ನಮಗಿಲ್ಲ. ವಿಜಯ್ ಮತ್ತು ಟಿವಿಕೆ ಜೊತೆ ಮೈತ್ರಿ ಮಾಡಿಕೊಳ್ಳಲು ಬಂಡಾಯ ಬಣದ ಕರೆಯನ್ನು ಈ ಹಿಂದೆ ನಿರಾಕರಿಸಿದ್ದ ಪಳನಿಸ್ವಾಮಿ, ಈ ಪಕ್ಷವನ್ನು ವಿಭಜಿಸುವ ಯಾವುದೇ ಉದ್ದೇಶವನ್ನು ಹೊಂದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಎಐಎಡಿಎಂಕೆ ಶಾಸಕರು ಟಿವಿಕೆಗೆ ತಮ್ಮ ಬೆಂಬಲವನ್ನು ನೀಡಲು ನಿರ್ಧರಿಸಿದ್ದಾರೆಂದು ಅವರು ತಿಳಿಸಿದ್ದಾರೆ.

### ರಾಜ್ಯದಲ್ಲಿ ಜಲಕಂಟಕ: ಕೋಡಿ ಶ್ರೀ ಭವಿಷ್ಯ

ಸುರಿಯುವ ಮಳೆಯು ಗಂಭೀರ ಪರಿಣಾಮ ಬೀರಲಿದೆ ಎಂದರು.

ರಾಜ್ಯ ಮತ್ತು ದೇಶದ ರಾಜಕಾರಣದ ಬಗ್ಗೆ ಕೇಳಲಾದ ಪ್ರಶ್ನೆಗಳಿಗೆ ತಮ್ಮದೇ ಶೈಲಿಯಲ್ಲಿ ಉತ್ತರಿಸಿದ ಶ್ರೀಗಳು, ಅರಸನ ಅರಮನೆ ಕಳೆಗುಂದಿತು ಮತ್ತು ಪಟ್ಟದ ಆನೆ ಗಾಂಭೀರ್ಯದಿಂದ ನಡೆದೀತು ಎಂಬ ಅವರ ಮಾರ್ಮಿಕ ನುಡಿಗಳು ರಾಜಕೀಯ ವಲಯದಲ್ಲಿ ಹಲವು ಅರ್ಥಗಳನ್ನು ಕಲ್ಪಿಸುತ್ತಿವೆ. ಅಧಿಕಾರ ಕೇಂದ್ರಗಳಲ್ಲಿ ಬದಲಾವಣೆ ಅಥವಾ ಪ್ರಭಾವಿ ವ್ಯಕ್ತಿಗಳ ವರ್ಚಸ್ಸಿನಲ್ಲಿ ಏರುಪೇರಾಗುವ ಮುನ್ಸೂಚನೆಯನ್ನು ಈ ಸಾಲುಗಳು ನೀಡುತ್ತಿವೆ.

### ಸಚಿವ ಸ್ಥಾನಕ್ಕೆ ವಿಧಾನ ಪರಿಷತ್ ಸದಸ್ಯರ ಮನವಿ

ಬಸಣ್ಣಗೌಡ ಬಾದರ್ಲಿ, ಚಂದ್ರಶೇಖರ್ ಪಾಟೀಲ್, ಡಿ.ಟಿ ಶ್ರೀನಿವಾಸ್ ದೆಹಲಿಯಲ್ಲಿ ಉಸ್ತುವಾರಿ ರಣದೀಪ್ ಸುರ್ಜೇವಾಲಾ ಭೇಟಿಯಾಗಿ ಸಚಿವ ಸ್ಥಾನಕ್ಕಾಗಿ ಮನವಿ ಸಲ್ಲಿಸಿದರು. ಸಚಿವ ಸಂಪುಟ ಪುನರ್ ರಚನೆ ಮಾಡಬೇಕು. ಕನಿಷ್ಠ ಐದು ಮಂದಿ ಪರಿಷತ್ ಸದಸ್ಯರಿಗೆ ಕ್ಯಾಬಿನೆಟ್ ನಲ್ಲಿ ಅವಕಾಶ ನೀಡಬೇಕು ಎಂದು ಒತ್ತಾಯಿಸಿದರು. ಇದೇ ವೇಳೆ ನಾಯಕತ್ವ ಬದಲಾವಣೆ ಗೊಂದಲ ಶೀಘ್ರ ಬಗೆಹರಿಸುವಂತೆ ಮನವಿ ಮಾಡಿದ್ದಾರೆ ಎನ್ನಲಾಗಿದೆ.

### ಸಿಬಿಐ ತನಿಖೆಗೆ ಆದೇಶ

ಮಧ್ಯೆ ಪ್ರವೇಶಿಸಿದೆ. ಸಿಬಿಐ ತನಿಖೆಗೆ ಆದೇಶಿಸಿದೆ. ರಾಜಸ್ಥಾನದ ವಿಶೇಷ ಕಾರ್ಯಾಚರಣೆ ತಂಡವು ಈ ಆಪಾದಿತ ಅವ್ಯವಹಾರಗಳ ಕುರಿತು ತನಿಖೆ ಆರಂಭಿಸಿದೆ. ಸೋರಿಕೆಯಾದ ಮಾಹಿತಿ ಸಿಕ್ಕಿದ ಕೂಡಲೇ ಎನ್‌ಟಿಎ ಇದನ್ನು ಕೇಂದ್ರ ತನಿಖಾ ಸಂಸ್ಥೆಗಳಿಗೆ ವರ್ಗಾಯಿಸಿತ್ತು.

2024 ಮತ್ತು 2025ರಲ್ಲೂ ಇಂತಹದೇ ಆರೋಪಗಳು ಕೇಳಿಬಂದಿದ್ದವು. 2024ರ ಪ್ರಕರಣದಲ್ಲಿ ಸಿಬಿಐ ಪಾಟ್ನಾ ಮತ್ತು ಹಜಾರಿಬಾಗ್‌ನಲ್ಲಿ ಕೆಲವು ಆರೋಪಿಗಳನ್ನು ಬಂಧಿಸಿತ್ತು.

### 717 ಮದ್ಯದಂಗಡಿ ಬಂದ್

ಅಕ್ರಮ ಮತ್ತು ಸುಮಾರು 1,000 ಕೋಟಿ ರೂ. ಮೌಲ್ಯದ ಲೆಕ್ಕವಿಲ್ಲದ ಹಣದ ವ್ಯವಹಾರ ನಡೆದಿದೆ ಎಂದು ಇಡಿ ಆರೋಪಿಸಿತ್ತು. ಈ ಪ್ರಕರಣ ಸುಪ್ರೀಂ ಕೋರ್ಟ್‌ವರೆಗೂ ತಲುಪಿದೆ. ರಾಜ್ಯ ಸರ್ಕಾರದ ಅಧಿಕಾರಕ್ಕೆ ಕೇಂದ್ರ ತನಿಖಾ ಸಂಸ್ಥೆಗಳು ಹಸ್ತಕ್ಷೇಪ ಮಾಡುತ್ತಿರುವ ಕುರಿತು ನ್ಯಾಯಾಲಯ ಪ್ರಶ್ನೆ ಎತ್ತಿತ್ತು. ಆಗಿನ ಡಿಎಂಕೆ ಸರ್ಕಾರ ಇದನ್ನು ರಾಜಕೀಯ ಸೇಡು ಎಂದು ಟೀಕಿಸಿತ್ತು.

### ಜಿಬಿಎ ಚುನಾವಣೆ: ಸಿದ್ದು-ಡಿಕೆಶಿ ಕಿತ್ತಾಟ

ಮುಂದೂಡಲು ಮುಂದಾಗಿದ್ದಾರೆಂದು ಆರೋಪಿಸಿದರು. ಜಿಬಿಎ ಚುನಾವಣೆ ಘೋಷಣೆಯಾದರೆ ಸಿಎಂ ಸಿದ್ದರಾಮಯ್ಯ ಸ್ಥಾನ ಮತ್ತೆ 6 ತಿಂಗಳು ಭದ್ರ ಆಗುತ್ತದೆ. ಡಿಸಿಎಂಗೆ ಚುನಾವಣೆ ಆದರೆ ನನ್ನ ಸ್ಥಾನಕ್ಕೆ ಚ್ಯುತಿ ಆಗುತ್ತದೆ. ಸಿಎಂ-ಡಿಸಿಎಂ ನಡುವೆ ಗಲಾಟೆ ನಡೆಯುತ್ತಿದೆ. ಅಂತಿಮವಾಗಿ ಡಿಸಿಎಂ ಒತ್ತಡದ ಮೇರೆಗೆ ಸುಪ್ರೀಂಕೋರ್ಟ್ ಮುಂದೆ ಅರ್ಜಿ ಹಾಕಿದ್ದಾರೆ. ಸಿಎಂ-ಡಿಸಿಎಂ ನಡುವೆ ಚುನಾವಣೆ ವಿಚಾರದಲ್ಲಿ ಸಂಘರ್ಷ ನಡೆಯುತ್ತಿದೆ ಎಂದು ಆರೋಪಿಸಿದರು.

## ಎಸ್ಸಿ, ಎಸ್ಟಿಗಳಿಗೆ ಶೇ.56% ಮೀಸಲಾತಿ ಜಾರಿಗೆ ಆಗ್ರಹ



ಚಾಮರಾಜನಗರ, ಎಸ್ಸಿ ,ಎಸ್ಟಿ ಜಾತಿಗಳಿಗೆ ಶೇ.56% ಮೀಸಲಾತಿ ನೀಡದಂತೆ ಪಕ್ಷತೀತವಾಗಿ ಎಲ್ಲಾ ರಾಜಕೀಯ ಪಕ್ಷಗಳು ಒಳಸಂಚು ಮಾಡಿರುವುದರಿಂದ ರಾಜ್ಯಉಚ್ಚ ನ್ಯಾಯಾಲಯ ನೀಡಿರುವ ತಾತ್ಕಾಲಿಕ ತಡೆಯಾಜ್ಞೆಯನ್ನು ತೆರವು ಮಾಡಲು ಸರ್ಕಾರದ ಅಡ್ವಕೇಟ್ ಜನರಲ್ ಹೈಕೋರ್ಟ್ ವಿಚಾರಣೆಗೆ ಸತತವಾಗಿ ಗೈರಾಗಿ ಸಮರ್ಥವಾಗಿ ವಾದ ಮಂಡಿಸಲು ಸಾಧ್ಯವಾಗದೆ ಉದ್ದೇಶ ಪೂರ್ವಕವಾಗಿ 152 ಜಾತಿಗಳಿಗೆ ಅನ್ಯಾಯ ಮಾಡುತ್ತಿದ್ದಾರೆ ಎಂದು ಕರ್ನಾಟಕ ರಾಜ್ಯ ನಾಯಕರ ಯುವ ಸೇನೆಯ ರಾಜ್ಯಾಧ್ಯಕ್ಷ ದೇವರಾಜ್ ಟಿ.ಕಾಟೂರು ಆರೋಪಿಸಿದರು.

ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿ, ಎಸ್ಸಿ, ಎಸ್ಟಿ ಜಾತಿಗಳಿಗೆ ಶೇ.56 ಮೀಸಲಾತಿ ನೀಡದಂತೆ ಎಲ್ಲ ರಾಜಕೀಯ ಪಕ್ಷಗಳ ಒಳಸಂಚು ಮಾಡಿವೆ ಎಂದು ದೂರಿದರು. ಕಳೆದ 30 ವರ್ಷಗಳಿಂದ ಎಸ್ಟಿ ಸಮಾಜಕ್ಕೆ ಜನಸಂಖ್ಯೆಗೆ ಅನುಗುಣವಾಗಿ ಮೀಸಲಾತಿ ನೀಡಬೇಕೆಂದು ಹಲವಾರು ಹೋರಾಟಗಳ ಫಲವಾಗಿ ಹಿಂದಿನ ಬಿಜೆಪಿ ಸರ್ಕಾರ ಎಸ್ಸಿಗೆ ಶೇ17%, ಎಸ್ಟಿಗೆ ಶೇ.7% ಮೀಸಲಾತಿ ನೀಡುವುದಾಗಿ ಸುಗ್ರೀವಾಜ್ಞೆ ಮೂಲಕ ಜಾರಿಗೊಳಿಸಿತ್ತು. ಅಂದಿನಿಂದ ಇಂದಿನವರೆಗೂ ಎಸ್ಸಿ/ಎಸ್ಟಿ ಸಮುದಾಯಗಳಿಗೆ ಶೈಕ್ಷಣಿಕವಾಗಿ, ಔದ್ಯೋಗಿಕವಾಗಿ ಸಂವಿಧಾನಬದ್ಧ ಸಲವತ್ತುಗಳನ್ನು ನೀಡುತ್ತಾ ಬರುತ್ತಿದೆ. ಆದರೆ ಇಂದಿನ ಕಾಂಗ್ರೆಸ್ ಸರ್ಕಾರ 56,437 ಹುದ್ದೆಗಳನ್ನು ನೇಮಕ ಮಾಡಿಕೊಳ್ಳಲಾಗುವುದು ಎಂದು ಅಧಿಸೂಚನೆ ಹೊರಡಿಸಿದೆ ಇದನ್ನು ವಿರೋಧಿಸಿದ ಮೇಲ್ವರ್ಗದ ಸಮುದಾಯದ ಸರ್ಕಾರಿ ನೌಕರನೊಬ್ಬ ಮತ್ತು ಆತನ ಪ್ರಬಲ ಜಾತಿಯ ಮುಖಂಡರ ಸಹಕಾರದೊಂದಿಗೆ ಶೇ 56% ಮೀಸಲಾತಿ ಸಂವಿಧಾನ ಬದ್ದವಾಗಿ 9 ಅನುಸೂಚಿಗೆ ಸೇರಿಸಿಲ್ಲ ಆದರಿಂದ ಹಳೇ ಮೀಸಲಾತಿಯಲ್ಲಿ ನೇಮಕ ಮಾಡಿಕೊಳ್ಳಬೇಕು ಎಂದು ಅರ್ಜಿ ಸಲ್ಲಿಸಿದ್ದ ಮೇರೆಗೆ ರಾಜ್ಯ ಉಚ್ಚ ನ್ಯಾಯಾಲಯ ಹಳೇ ಮೀಸಲಾತಿ ಅಡಿಯಲ್ಲಿ ಹುದ್ದೆಗಳನ್ನು ನೇಮಕ ಮಾಡಿಕೊಳ್ಳಬೇಕೆಂದು ತಡೆಯಾಜ್ಞೆಯನ್ನು ನೀಡಿದೆ ಇದನ್ನು ರಾಜ್ಯ ಸರ್ಕಾರ ತೆರವುಗೊಳಿಸಲು ಪ್ರಾಮಾಣಿಕ ಪ್ರಯತ್ನ ಮಾಡುತ್ತಿಲ್ಲ ಎಂದು ದೂರಿದರು.

ನಮ್ಮ ರಾಜ್ಯದಲ್ಲಿ ಬಿ.ಜೆ.ಪಿ. ವಿರೋದ ಪಕ್ಷವಾಗಿ ಸಮರ್ಥವಾಗಿ ಅವರ ಕೆಲಸವನ್ನು ನಿರ್ವಹಿಸುತ್ತಿಲ್ಲ ತನ್ನ ಪಕ್ಷದ ಆಡಳಿತದಲ್ಲಿ ಸುಗ್ರೀವಾಜ್ಞೆಯ ಮೂಲಕ ಶೇ 56% ಮೀಸಲಾತಿ ಏರಿಕೆ ಮಾಡಿದನ್ನು ಉಳಿಸಿಕೊಳ್ಳಬೇಕು ಅನ್ನುವ ಪರಿಜ್ಞಾನ ಬಿ.ಜೆ.ಪಿಗೆ ಇಲ್ಲ ಎಸ್ಸಿ/ಎಸ್ಟಿ ಬಿಜೆಪಿ ಘಟಕ ಈ ವಿಚಾರವಾಗಿ ಚಿತ್ರದುರ್ಗದಿಂದ ವಿಧಾನಸೌಧವರೆಗೆ ಪಾದಯಾತ್ರೆ ಮಾಡುತ್ತೇವೆ. ಅಂಥ ಪೂರ್ವಭಾವಿ ಸಭೆ ಮಾಡಿ ಆರ್ಭಟಿಸಿದ ಬಿ.ಜೆ.ಪಿ ನಾಯಕರು ಅವರ ಪಕ್ಷದ ಸರ್ವೋಚ್ಚ ನಾಯಕನ ಕುತಂತ್ರದಿಂದ ತನ್ನ ಸಮುದಾಯಗಳಿಗೆ ತೊಂದರೆಯಾಗುತ್ತದೆ ಎಂದು ಪಾದಯಾತ್ರೆ ಮಾಡಬೇಡಿ ಎಂದು ಹೇಳಿದ ಮೇಲೆ ಬಿಜೆಪಿಯವರು ಕೈಬಿಟ್ಟು ನಾಯಕ ಸಮಾಜಕ್ಕೆ ಮೀಸಲಾತಿ ಹೋರಾಟದಲ್ಲಿ ಶಕ್ತಿ ತುಂಬದೆ ಆಸಕ್ತರಾಗಿದ್ದಾರೆ.

ರಾಜ್ಯಉಚ್ಚ ನ್ಯಾಯಾಲಯ ನೀಡಿರುವ ತಾತ್ಕಾಲಿಕ ತಡೆಯಾಜ್ಞೆಯನ್ನು ರಾಜ್ಯ ಸರ್ಕಾರ, ಎಲ್ಲ ಪಕ್ಷಗಳು ತೆರವುಗೊಳಿಸಬೇಕು ಇಲ್ಲದಿದ್ದರೆ ರಾಜ್ಯ ಸರ್ಕಾರ ವಿರುದ್ಧ ರಾಜ್ಯಾದ್ಯಂತ ಎಸ್ ಸಿ, ಎಸ್ ಟಿ ಸಂಘ- ಸಂಸ್ಥೆಗಳೊಂದಿಗೆ ಹೋರಾಟ ಮಾರಾಟ ಮಾಡಲಾಗುವುದು, ಚುನಾವಣೆಯಲ್ಲಿ ಎಲ್ಲ ಪಕ್ಷಗಳಿಗೂ ತಕ್ಕಪಾಠ ಕಲಿಸಬೇಕಾಗುತ್ತದೆ ಎಂದು ಎಚ್ಚರಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಕರ್ನಾಟಕ ರಾಜ್ಯ ನಾಯಕರ ಯುವ ಸೇನೆಯ ರಾಜ್ಯ ಪ್ರಧಾನ ಕಾರ್ಯದರ್ಶಿ ಸಿದ್ದರಾಜು, ರಾಜ್ಯ ಉಪಾಧ್ಯಕ್ಷ ಶಿವಕುಮಾರಸ್ವಾಮಿ, ಗೌರವ ಸಲಹೆಗಾರ ಪರಶಿವಮೂರ್ತಿ, ಜಿಲ್ಲಾ ಮುಖಂಡರಾದ ಜಯಸುಂದರ್, ಕೆ.ಪರಶಿವಮೂರ್ತಿ ಹಾಜರಿದ್ದರು.

## ಮೊದಲ ಪುಟದಿಂದ

### ಸಿಎಂ ವಿಜಯ್‌ಗೆ ಹೈಕೋರ್ಟ್ ಶಾಕ್

ತಮಿಳುನಾಡಿನ ರಾಜಕೀಯ ವಾತಾವರಣವನ್ನು ಮತ್ತಷ್ಟು ಉದ್ವಿಗ್ನಗೊಳಿಸಿದೆ.

### ಅಕ್ರಮ: ನೀಟ್ ಪರೀಕ್ಷೆ ರದ್ದು

ಎಂದು ರಾಷ್ಟ್ರೀಯ ಪರೀಕ್ಷಾ ಸಂಸ್ಥೆ ತಿಳಿಸಿದೆ. ಅಭ್ಯರ್ಥಿಗಳು ಎನ್ ಟಿಎ ಅಧಿಕೃತ ಮಾಹಿತಿಗಳನ್ನು ಮಾತ್ರ ನಂಬಬೇಕು ಮತ್ತು ಸಾಮಾಜಿಕ ಮಾಧ್ಯಮಗಳಲ್ಲಿ ಹರಡುವ ತಪ್ಪು ಮಾಹಿತಿಯನ್ನು ನಂಬಬಾರದು. ವಿದ್ಯಾರ್ಥಿಗಳು ಮತ್ತೆ ತಯಾರಿ ಮಾಡಿಕೊಂಡು ಪರೀಕ್ಷೆಗೆ ಸಿದ್ಧರಾಗಿರಬೇಕು ಎಂದು ಎನ್ ಟಿಎ ತಿಳಿಸಿದೆ.

### ಮುಗಿಯದ ಕೇರಳ ಸಿಎಂ ಆಯ್ಕೆ ಬಿಕ್ಕಟ್ಟು

ಪ್ರಕಟಿಸಲಾಗುವುದು ಎಂದು ಕಾಂಗ್ರೆಸ್ ನಾಯಕ ಕೆ.ಮುರಳೀಧರನ್ ತಿಳಿಸಿದ್ದಾರೆ.

ರಾಜ್ಯದಲ್ಲಿನ ಪ್ರಸ್ತುತ ರಾಜಕೀಯ ವಾತಾವರಣದ ಬಗ್ಗೆ ಕೇಂದ್ರದ ನಾಯಕತ್ವಕ್ಕೆ ವಿವರಿಸಲಾಗುವುದು ಎಂದು ವಿ.ಎಂ ಸುಧೀರನ್ ಹೇಳಿದ್ದಾರೆ.

### ಎಲ್‌ಪಿಜಿ ಉತ್ಪಾದನೆ ಹೆಚ್ಚಳ

ಉತ್ಪಾದನೆಯನ್ನು ದಿನಕ್ಕೆ 35,000 ಟನ್‌ನಿಂದ 54,000 ಟನ್‌ಗೆ ಹೆಚ್ಚಿಸಲಾಗಿದೆ. ಭಾರತದಲ್ಲಿ 69 ದಿನಗಳಿಗೆ ಸಾಕಾಗುವ ಕಚ್ಚಾ ತೈಲ ಮತ್ತು ಎಲ್‌ಎನ್‌ಜಿ ಸಂಗ್ರಹ ಹಾಗೂ 45 ದಿನಗಳಿಗೆ ಸಾಕಾಗುವ ಎಲ್‌ಪಿಜಿ ಸಂಗ್ರಹವಿದೆ ಎಂದು ಹೇಳಿದರು.

### ಕೆಪಿಎಸ್‌ಸಿ ಹಾಳಾಗಲು ಕಾಂಗ್ರೆಸ್ ಕಾರಣ

ಆಡಳಿತದಲ್ಲಿ ಅನೇಕ ಬಾರಿ ಇಂತಹ ಸಂದರ್ಭ ಎದುರಾಗಿದೆ. ಚರ್ಚೆ ಮಾಡೋಕೆ ಕಾಂಗ್ರೆಸ್ ಅವರಿಗೆ ಯಾವ ನೈತಿಕತೆ ಇದೆ ಎಂದು ಪ್ರಶ್ನಿಸಿದರು.

## ಮಳವಳ್ಳಿಯಲ್ಲಿ ಅಂಬೇಡ್ಕರ್ ಜಯಂತಿ



**ಮಳವಳ್ಳಿ:** ಡಾ.ಬಿ.ಆರ್.ಅಂಬೇಡ್ಕರ್ ಅವರ ಜಯಂತೋತ್ಸವದ ಅಂಗವಾಗಿ ಮಳವಳ್ಳಿ ಪಟ್ಟಣದಲ್ಲಿ ಎರಡು ದಿನಗಳ ಕಾಲ ಅಂಬೇಡ್ಕರ್ ಹಬ್ಬ ನಡೆಯಿತು.

ಶಾಸಕ ಪಿ. ಎಂ.ನರೇಂದ್ರಸ್ವಾಮಿ ಚಾಲನೆ ನೀಡಿದರು. ಪಟ್ಟಣದ ಸಿದ್ದಾರ್ಥ ನಗರ ಬಡಾವಣೆಯ ವಿಶ್ವಜ್ಞಾನಿ ಡಾ.ಬಿ.ಆರ್.ಅಂಬೇಡ್ಕರ್ ಆಚರಣಾ ಸಮಿತಿ ಹಾಗೂ ಸಿದ್ದಾರ್ಥ ನಗರದ ಭೀಮ ಬಂಧುಗಳು ಪ್ರವಾಸಿ ಮಂದಿರ ಬಳಿ ಇರುವ ಅಂಬೇಡ್ಕರ್ ಪುತ್ಥಳಿ ಆವರಣದಲ್ಲಿ ಹಮ್ಮಿಕೊಂಡಿದ್ದರು. ಡಾ.ಬಿ.ಆರ್.ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡಿ, ನಂತರ ಮಾತನಾಡಿ ದರು. ಸಮ ಸಮಾಜ ನಿರ್ಮಾಣಕ್ಕೆ ಸಂವಿಧಾ ನದ ಮೂಲಕ ಕೆಳವರ್ಗದ ಸಮುದಾಯಗ ಳಿಗೂ ಹಕ್ಕು ಕೊಟ್ಟ ಮಾಹಾನ್ ಮಾನವತವಾದಿ ಹೆಸರಿನಲ್ಲಿ ಹಬ್ಬ ಆಚರಣೆ ಮಾಡುತ್ತಿರು ವುದು ಸಂತಸದಸಂಗತಿಯಾಗಿದೆ ಎಂದರು.

ಆಚರಣ ಸಮಿತಿ ಅಧ್ಯಕ್ಷ ಹೃದೀಶ್, ಕಾರ್ಯ ದರ್ಶಿ ಎಂ. ಆರ್.ಅಶೋಕ್, ಉಪಾಧ್ಯಕ್ಷರಾದ ಶ್ರೀಧರ್, ನಾರಾಯಣ, ಸಂಘಟನಾಕಾರ್ಯ ದರ್ಶಿ ಟಿ .ಜಿ. ಮರಿಸ್ವಾಮಿ, ಖಜಾಂಚಿ ಎಂ. ಡಿ .ಶಿವಶಂಕರ್ ಸಮಿತಿಯ ಮುಖಂಡರಾದ ಸಂದೇಶ್ , ಕಿರಣ್ ಶಂಕರ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಅಧ್ಯಕ್ಷ ದೊಡ್ಡಯ್ಯ ಮಾಜಿ ಅಧ್ಯಕ್ಷ ಕಲ್ಕುಣಿ ದೇವರಾಜು ಇದ್ದರು.

## ಫುಡ್ ಫ್ಯಾಕ್ಟರಿ ದಬ್ಬಾಳಿಕೆ: ಶಾಸಕ ಹೆಚ್.ಟಿ.ಮಂಜು ಎಚ್ಚರಿಕೆ

# ಬಣ್ಣೇನಹಳ್ಳಿಯಲ್ಲಿ ರೈತರಿಂದ ಬೃಹತ್ ಪ್ರತಿಭಟನೆ

ಕೆ.ಆರ್.ಪೇಟೆ ತಾಲೂಕಿನ ಬಣ್ಣೇನಹಳ್ಳಿಯ ಮೆಗಾ ಫೇವರಿಟ್ ಫುಡ್ ಕಂಪನಿಯ ರೈತ ವಿರೋಧಿ ಧೋರಣೆ ಖಂಡಿಸಿ ಗ್ರಾಮಸ್ಥರು ಬೃಹತ್ ಪ್ರತಿಭಟನೆ ನಡೆಸಿದರು. ಭೂಮಿ ನೀಡುವಾಗ ಸ್ಥಳೀಯರಿಗೆ ಉದ್ಯೋಗ ನೀಡುವುದಾಗಿ ನೀಡಿದ್ದ ಭರವಸೆಯನ್ನು ಕಂಪನಿ ಉಲ್ಲಂಘಿಸಿದೆ ಎಂದು ಪ್ರತಿಭಟನಾಕಾರರು ಆಕ್ರೋಶ ವ್ಯಕ್ತಪಡಿಸಿದರು. ಸುಖಾಸುಮ್ಮನೆ ಸ್ಥಳೀಯ ಕಾರ್ಮಿಕರನ್ನು ಕೆಲಸದಿಂದ ವಜಾಗೊಳಿಸುತ್ತಿರುವ ಕಂಪನಿಯ ಕ್ರಮವನ್ನು ಖಂಡಿಸಿದ ರೈತರು, ನ್ಯಾಯ ಸಿಗದಿದ್ದರೆ ಅಮರಣಾಂತ ಉಪವಾಸ ಸತ್ಯಾಗ್ರಹ ನಡೆಸುವುದಾಗಿ ಎಚ್ಚರಿಸಿದ್ದಾರೆ.

**ಜಿಲ್ಲಾಡಳಿತದ ವಿರುದ್ಧ ಶಾಸಕರ ಆಕ್ರೋಶ**

ಸ್ಥಳಕ್ಕೆ ಭೇಟಿ ನೀಡಿದ ಶಾಸಕ ಹೆಚ್.ಟಿ.ಮಂಜು ಅವರು ಮಾತನಾಡಿ, ರೈತರ ಸಮಸ್ಯೆಗಳಿಗೆ ಜಿಲ್ಲಾಡಳಿತವೇ ನೇರ ಹೊಣೆ ಎಂದು ಕಿಡಿಕಾರಿದರು. ರಸ್ತೆ ಮತ್ತು ಕೆರೆಯನ್ನು ಒತ್ತುವರಿ ಮಾಡಿಕೊಂಡಿರುವ ಉದ್ದಿಮೆದಾರರ ವಿರುದ್ಧ ಕ್ರಮ ಕೈಗೊಳ್ಳುವಲ್ಲಿ ಅಧಿಕಾರಿಗಳು ವಿಫಲರಾಗಿದ್ದಾರೆ. ರೈತರ ಮೇಲೆ



ದಬ್ಬಾಳಿಕೆ ನಡೆಸಿದರೆ ಪರಿಣಾಮ ನೆಟ್ಟಗಿರಲಾರದು. ಕೂಡಲೇ ಕೆರೆ ಸರ್ವೆ ನಡೆಸಿ ರಸ್ತೆಯನ್ನು ಮುಕ್ತಗೊಳಿಸಬೇಕು, ಇಲ್ಲವಾದಲ್ಲಿ ಜಿಲ್ಲಾಡಳಿತವೇ ಮುಂದಿನ ಅನಾಹುತಗಳಿಗೆ ಹೊಣೆಯಾಗಲಿದೆ ಎಂದು ಅವರು ಎಚ್ಚರಿಕೆ ನೀಡಿದರು.

ಕಾರ್ಯಕ್ರಮದಲ್ಲಿ ಜೆಡಿಎಸ್ ರೈತ ಮೋರ್ಚಾ ಅಧ್ಯಕ್ಷ ಬೂಕನಕೆರೆ ಹುಲ್ಲೇಗೌಡ, ಟಿ.ಎ.ಪಿ.ಸಿ.ಎಂ.ಎಸ್ ಅಧ್ಯಕ್ಷ ಟಿ.ಬಲದೇವ್ ಸೇರಿದಂತೆ ಹಲವು ಮುಖಂಡರು ಹಾಗೂ ಸ್ಥಳೀಯ ರೈತರು ಪಾಲ್ಗೊಂಡಿದ್ದರು.

### ಕೆರೆ ಮಾಲಿನ್ಯ, ರಸ್ತೆ ಒತ್ತುವರಿ ಆರೋಪ

**ಫ್ಯಾಕ್ಟರಿಯಿಂದ ಹೊರಬರುವ ಕಲುಷಿತ ನೀರನ್ನು ಮಂಜಿಕೆರೆಗೆ ಬಿಡುತ್ತಿರುವುದರಿಂದ ಕೆರೆ ಸಂಪೂರ್ಣ ಮಲಿನಗೊಂಡಿದೆ. ಇದರಿಂದ ಜಾನುವಾರುಗಳಿಗೆ ಚರ್ಮವ್ಯಾಧಿ ಹರಡುತ್ತಿದ್ದು, ಕುಡಿಯಲು ನೀರಿಲ್ಲದಂತಾಗಿದೆ. ಅಲ್ಲದೆ, ಗ್ರಾಮದ ಮುಖ್ಯ ರಸ್ತೆಯನ್ನು ಫ್ಯಾಕ್ಟರಿ ಆಡಳಿತ ಮಂಡಳಿ ಮುಚ್ಚಿ ಒತ್ತುವರಿ ಮಾಡಿಕೊಂಡಿರುವುದರಿಂದ ಕೃಷಿ ಭೂಮಿಗೆ ತೆರಳಲು ಅಡ್ಡಿಯಾಗಿದೆ. ತಕ್ಷಣ ಕೆರೆ ಸುತ್ತ 30 ಅಡಿ ರಸ್ತೆ ನಿರ್ಮಿಸಿ ರೈತರ ಸಂಚಾರಕ್ಕೆ ಅನುವು ಮಾಡಿಕೊಡಬೇಕೆಂದು ಗ್ರಾಮಸ್ಥರು ಒತ್ತಾಯಿಸಿದರು.**

# ಮೀಸಲಾತಿ ಪ್ರಮಾಣ ಶೇ.35ಕ್ಕೆ ಏರಿಕೆಯಾಗಲಿ: ಶಿವಕುಮಾರ್ ಕರೆ

ಎಚ್.ಡಿ.ಕೋಟೆ ತಾಲೂಕಿನ ಜಕ್ಕಹಳ್ಳಿ ಗ್ರಾಮದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಪ್ರತಿಮೆ ಅನಾವರಣಗೊಳಿಸಿ ಮಾತನಾಡಿದ ವಿಧಾನಪರಿಷತ್ ಸದಸ್ಯ ಶಿವಕುಮಾರ್ ಅವರು, ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಮೀಸಲಾತಿ ಪ್ರಮಾಣವನ್ನು ಶೇ.35ಕ್ಕೆ ಹೆಚ್ಚಿಸಬೇಕೆಂದು ಆಗ್ರಹಿಸಿದರು. ಪ್ರಸ್ತುತ ಈ ಸಮುದಾಯಗಳ ಜನಸಂಖ್ಯೆ ಶೇ.40ರಿಂದ 45ಕ್ಕೆ ಏರಿಕೆಯಾಗುವ ನಿರೀಕ್ಷೆಯಿದ್ದು, ಅದಕ್ಕೆ ಪೂರಕವಾಗಿ ಮೀಸಲಾತಿ ಸಿಗಬೇಕು. ಈ ನಿಟ್ಟಿನಲ್ಲಿ ನ್ಯಾಯಯುತ ಹಕ್ಕಿಗಾಗಿ ಹೋರಾಟ ಅನಿವಾರ್ಯವಾಗಿದ್ದು, ಜಕ್ಕಹಳ್ಳಿಯಿಂದಲೇ ಈ ಚಳವಳಿ ಆರಂಭವಾಗಲಿ ಎಂದು ಅವರು ಕರೆ ನೀಡಿದರು. ಅಲ್ಲದೆ, 2027ರಲ್ಲಿ ಮುಕ್ತಾಯಗೊಳ್ಳಲಿರುವ ಜನಗಣತಿಯಲ್ಲಿ ಎಲ್ಲರೂ ನಿಖರ ಮಾಹಿತಿ ನೀಡುವಂತೆ ಅವರು ತಿಳಿಸಿದರು.



### ಸಾಮಾಜಿಕ ಸಾಮರಸ್ಯ ಮತ್ತು ಗ್ರಾಮದ ಮಾದರಿ

ಜಕ್ಕಹಳ್ಳಿ ಗ್ರಾಮವು ಸಾಮಾಜಿಕ ಭಾವೈಕ್ಯತೆಗೆ ಸಾಕ್ಷಿಯಾಗಿದೆ ಎಂದು ಶ್ಲಾಘಿಸಿದ ಶಿವಕುಮಾರ್ ಅವರು, ಇಲ್ಲಿ ವೀರಶೈವ ಲಿಂಗಾಯತ ಮತ್ತು ದಲಿತ ಸಮುದಾಯಗಳು ಒಗ್ಗೂಡಿ ಅಂಬೇಡ್ಕರ್ ಪ್ರತಿಮೆ ನಿರ್ಮಿಸಿರುವುದು ನಿಜವಾದ ಬಸವ ತತ್ವದ ಹಾದಿಯಾಗಿದೆ ಎಂದರು. ಅಂಬೇಡ್ಕರ್, ಬುದ್ಧ, ಬಸವಣ್ಣ ಮತ್ತು ಕನಕದಾಸರಂತಹ ಮಹಾಪುರುಷರು ಯಾವುದೇ ಒಂದು ಜಾತಿಗೆ ಸೀಮಿತರಲ್ಲ. ಅವರನ್ನು ಜಾತಿಯ ಚೌಕಟ್ಟಿನಲ್ಲಿ ಬಂಧಿಸುವುದು ಸರಿಯಲ್ಲ ಎಂದು ಬೇಸರ ವ್ಯಕ್ತಪಡಿಸಿದ ಅವರು, ಗ್ರಾಮದ ಗ್ರಂಥಾಲಯ ನಿರ್ಮಾಣಕ್ಕಾಗಿ ತಮ್ಮ ಅನುದಾನದಿಂದ 10 ಲಕ್ಷ ರೂಪಾಯಿ ನೀಡುವುದಾಗಿ ಘೋಷಿಸಿದರು. ಕಾರ್ಯಕ್ರಮದಲ್ಲಿ ದಸಂಸ ಜಿಲ್ಲಾ ಸಂಚಾಲಕ ಬೆಟ್ಟಯ್ಯ ಕೋಟೆ, ಜಿಪಂ ಮಾಜಿ ಸದಸ್ಯರಾದ ಎಚ್.ಸಿ. ಮಂಜುನಾಥ್, ವೆಂಕಟಸ್ವಾಮಿ ಸೇರಿದಂತೆ ಹಲವು ಗಣ್ಯರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

### ಅಂಬೇಡ್ಕರ್ ಎಂದರೆ ಕೇವಲ ಆಚರಣೆಯಲ್ಲ, ಅನುಸರಣೆ

ಕಾರ್ಯಕ್ರಮದ ದಿವ್ಯಸಾನಿಧ್ಯ ವಹಿಸಿದ್ದ ಉರಿಲಿಂಗಿಪೆದ್ದಿ ಮಠದ ಜ್ಞಾನ ಪ್ರಕಾಶ್ ಸ್ವಾಮೀಜಿ ಅವರು ಮಾರ್ಮಿಕವಾಗಿ ಮಾತನಾಡುತ್ತಾ, ಅಂಬೇಡ್ಕರ್ ಅವರನ್ನು ಕೇವಲ ಪ್ರತಿಮೆ ಅಥವಾ ಫ್ಲೆಕ್ಸ್ ಮಹಾಪುರುಷರನ್ನಾಗಿ ನೋಡಬಾರದು ಎಂದರು. ಅವರ ಚಿಂತನೆಗಳು ಮತ್ತು ತತ್ವಗಳನ್ನು ಜೀವನದಲ್ಲಿ ಅಳವಡಿಸಿಕೊಂಡಾಗ ಮಾತ್ರ ಅವರು ನಮ್ಮಲ್ಲಿ ಜೀವಂತವಾಗಿರುತ್ತಾರೆ. ಸಂವಿಧಾನದ ಮೂಲಕ ಅವರು ನೀಡಿದ ಸವಲತ್ತುಗಳು ಇಂದು ದೇಶದ ಪ್ರತಿ ಪ್ರಜೆಯನ್ನೂ ತಲುಪಿವೆ. ಈ ಸಾಮರಸ್ಯ ಸದಾ ಮುಂದುವರಿಯಬೇಕು ಎಂದು ಹಾರೈಸಿದರು.

### ಶಿಕ್ಷಣದಲ್ಲಿ ಅಂಬೇಡ್ಕರ್ ಜೀವನ ಚರಿತ್ರೆ ಅಗತ್ಯ

ಮಾಜಿ ಸಚಿವ ಎನ್.ಮಹೇಶ್ ಮಾತನಾಡಿ, ಗ್ರಾಮಸ್ಥರ ಸ್ವಯಂಪ್ರೇರಿತ ದೇಣಿಗೆಯಿಂದ ನಿರ್ಮಾಣವಾದ ಈ ಪ್ರತಿಮೆ ಸ್ವಾಭಿಮಾನದ ಸಂಕೇತವಾಗಿದೆ ಎಂದರು. ಇದೇ ವೇಳೆ ಮಾಜಿ ಮಹಾಪೌರ ಪುರುಷೋತ್ತಮ್ ಅವರು ಮಾತನಾಡಿ, ಇಂದಿನ ಪಠ್ಯಕ್ರಮಗಳಲ್ಲಿ ಅಂಬೇಡ್ಕರ್ ಅವರ ಜೀವನ ಚರಿತ್ರೆಯನ್ನು ಮರೆಮಾಚಲಾಗುತ್ತಿದೆ ಎಂದು ಆರೋಪಿಸಿದರು. ಒಂದನೇ ತರಗತಿಯಿಂದ ಪಿಎಚ್ಡಿವರೆಗೆ ಅವರ ಹೋರಾಟದ ಬದುಕನ್ನು ವಿದ್ಯಾರ್ಥಿಗಳಿಗೆ ಕಲಿಸುವ ಮೂಲಕ ಸಂವಿಧಾನದ ಅರಿವು ಮೂಡಿಸಬೇಕು ಎಂದು ಅವರು ಒತ್ತಾಯಿಸಿದರು.

# ಪೌರ ಕಾರ್ಮಿಕರಿಗೆ ವಿಮೆ

## ರಾಮನಗರ ಸ್ಥಳೀಯ ಸಂಸ್ಥೆಗಳಿಗೆ ಉಪವಿಭಾಗದ ಉಪವಿಭಾಗಾಧಿಕಾರಿಗಳ ಕಟ್ಟುನಿಟ್ಟಿನ ಸೂಚನೆ

ರಾಮನಗರ: ಜಿಲ್ಲೆಯಲ್ಲಿರುವ ಎಲ್ಲ ಪೌರ ಕಾರ್ಮಿಕರಿಗೆ ಆರೋಗ್ಯ ವಿಮೆ ಮತ್ತು ಜೀವವಿಮೆ ಮಾಡಿಸುವಂತೆ ನಗರ ಸ್ಥಳೀಯ ಸಂಸ್ಥೆಗಳಿಗೆ ರಾಮನಗರ ಉಪವಿಭಾಗದ ಉಪವಿಭಾಗಾಧಿಕಾರಿ ಬಿನೋಯ್ ಅವರು ಕಟ್ಟುನಿಟ್ಟಿನ ಸೂಚನೆ ನೀಡಿದರು.

ನಗರದಲ್ಲಿರುವ ಉಪವಿಭಾಗಾಧಿಕಾರಿಗಳ ಕಚೇರಿಯಲ್ಲಿ ಉಪ ವಿಭಾಗ ಮಟ್ಟದ ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ವಿಮೆಯು ಕಾರ್ಮಿಕರ ಹಕ್ಕಾಗಿದೆ. ಸ್ಥಳೀಯ ಸಂಸ್ಥೆಗಳು ಕಡ್ಡಾಯವಾಗಿ ವಿಮೆ ಮಾಡಿಸಬೇಕು. ಕಾರ್ಮಿಕರ ಸಂಬಳದಲ್ಲೇ ಕಡಿತವಾಗುವ ವಿಮೆ ಮಾಡಿಸಲು ಅಧಿಕಾರಿಗಳು ನಿರ್ಲಕ್ಷ್ಯ ತೋರುತ್ತಿರುವ ಕುರಿತು ದೂರು ಕೇಳಿ ಬಂದಿದ್ದು, ಕಾರ್ಮಿಕರ ಆರೋಗ್ಯ ವಿಮೆ ಮತ್ತು ಜೀವವಿಮೆ ವಿ?ಯದಲ್ಲಿ ಯಾರೂ ನೆಪ ಹೇಳದೆ ತುರ್ತಾಗಿ ವಿಮೆ ಮಾಡಿಸುವಂತೆ ಸೂಚಿಸಿದರು.

ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಲ್ಲಿ ಪೌರ ಕಾರ್ಮಿಕ ಮಕ್ಕಳಿಗೆ ನೇರ ಪ್ರವೇಶ ನೀಡಬೇಕೆಂಬ ನಿಯಮವಿದೆ. ಈ ಬಗ್ಗೆ ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳ ಗಮನಕ್ಕೆ ತಂದು ಪೌರ ಕಾರ್ಮಿಕರಿಗೆ ಜಾಗೃತಿ ಮೂಡಿಸುವ ಮೂಲಕ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಲ್ಲಿ ಪೌರ ಕಾರ್ಮಿಕ ಮಕ್ಕಳ ಪ್ರವೇಶಕ್ಕೆ ಆದ್ಯತೆ ನೀಡಬೇಕು ಹಾಗೂ ಡಾ. ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ನೀಡಲಾಗುವ ಲ್ಯಾಪ್‌ಟಾಪ್‌ಗಳನ್ನು ಶೀಘ್ರವಾಗಿ ವಿತರಿಸಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.



### ಶೇ24.10 ಅನುದಾನ ಬಳಕೆ ಬಗ್ಗೆ ವರದಿ ಕೊಡಲು ಸೂಚನೆ

ಪೌರ ಕಾರ್ಮಿಕರ ಕಲ್ಯಾಣ ಕಾರ್ಯಕ್ರಮಗಳಿಗಾಗಿ ಕಾಯ್ದಿರಿಸಿರುವ ಶೇ. 24.10 ಅನುದಾನವನ್ನು ನಗರಸಭೆ ಹಾಗೂ ಪುರಸಭೆಗಳಲ್ಲಿ ಪೂರ್ಣಪ್ರಮಾಣದಲ್ಲಿ ಬಳಕೆ ಮಾಡಿ ವರದಿ ನೀಡಬೇಕೆಂದು ನಿರ್ದೇಶಿಸಿದ ಅವರು ಸ್ಥಳೀಯ ಸಂಸ್ಥೆಗಳು ಸ್ಥಳೀಯ ಸಂಸ್ಥೆಗಳು ಕಸ ಸಂಗ್ರಹಣೆಗೆ ಸೇರಿದಂತೆ ವಿವಿಧ ಉದ್ದೇಶಗಳಿಗೆ ಬಳಸುವ ವಾಹನಗಳಿಗೆ ವಿಮೆಯನ್ನು ಕಡ್ಡಾಯವಾಗಿ ಮಾಡಿಸಬೇಕು. ಸದೃಢತೆ ಪ್ರಮಾಣಪತ್ರ ಹೊಂದಿರಬೇಕು. ಇಲ್ಲದಿದ್ದರೆ ಅಪಘಾತ ಅದಾಗ ವಿಮೆ ಕ್ಲೈಮ್‌ಗೆ ತೊಂದರೆಯಾಗಲಿದೆ ಎಂದು ಸಲಹೆ ನೀಡಿದರು.

ಸಭೆಯಲ್ಲಿ ಸಮಿತಿ ಸದಸ್ಯರಾದ ಆರ್. ನಾಗರಾಜು, ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರಾದ ಡಾ. ಕುಮಾರ್, ಕನಕಪುರದ ಪ್ರಕಾಶ್, ಚನ್ನಪಟ್ಟಣದ ಪೌರಾಯುಕ್ತರಾದ ಮಹೇಂದ್ರ, ಜಿಲ್ಲಾಸ್ಪತ್ರೆಯ ಆರ್‌ಎಂಓ ಡಾ. ನಾರಾಯಣಸ್ವಾಮಿ, ಕ್ರೈಸ್ ಎಂಡಿಆರ್‌ಎಸ್ ಸಂಯೋಜಕ ಮಹೇಶ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

### ಕೆನರಾ ಬ್ಯಾಂಕ್ ಪ್ರಾಯೋಜಿತ
## ಉಚಿತ ಶಿಕ್ಷಣಕ್ಕೆ ಅರ್ಜಿ ಆಹ್ವಾನ

ರಾಮನಗರ: ತಾಲ್ಲೂಕಿನ ಬಿಡದ ಬಳಿಯ ಜೋಗರದೊಡ್ಡಿಯಲ್ಲಿ ಕೆನರಾ ಬ್ಯಾಂಕ್ ಸ್ಥಾಪಿಸಿರುವ ಕೆ ಪಿ ಜೆ ಪ್ರಭು ಕರಕುಶಲ ತರಬೇತಿ ಸಂಸ್ಥೆಯಲ್ಲಿ ಮರ ಮತ್ತು ಕಲ್ಲು ಕೆತ್ತನೆ, ಲೋಹ ಶಿಲ್ಪ ಮತ್ತು ಕುಂಭಕಲೆ ವಿಭಾಗಗಳಲ್ಲಿ ಉಚಿತ ತರಬೇತಿಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ನಿರುದ್ಯೋಗಿ ಯುವಕ ಮತ್ತು ಯುವತಿಯರಿಗಾಗಿ ಕೆನರಾ ಬ್ಯಾಮಕ್ 1991ರಿಂದ ಮರ ಮತ್ತು ಕಲ್ಲು ಕೆತ್ತನೆ, ಲೋಹ ಶಿಲ್ಪ ಮತ್ತು ಕುಂಭಕಲೆ ವಿಭಾಗಗಳಲ್ಲಿ ಉಚಿತವಾಗಿ ತರಬೇತಿಯನ್ನು ನೀಡುತ್ತಿದೆ. ಈ ಸಂಸ್ಥೆ ಇದುವರೆಗೆ ಒಟ್ಟಾರೆ 1400 ಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ಶಿಲ್ಪಕಲಾ ಶಿಕ್ಷಣವನ್ನು ನೀಡಿದೆ. ಇದರಲ್ಲಿ ಶೇಖಡ 95 ರ?ು ವಿದ್ಯಾರ್ಥಿಗಳು ಲಾಭದಾಯಕ ಹುದ್ದೆಯಲ್ಲಿದ್ದಾರೆ. ಹಲವಾರು ವಿದ್ಯಾರ್ಥಿಗಳು ರಾಷ್ಟ್ರ ಮತ್ತು ರಾಜ್ಯ ಮಟ್ಟದ ಪ್ರಶಸ್ತಿಗಳಿಗೆ ಭಾಜನವಾಗಿದ್ದಾರೆ.

ಮರ ಮತ್ತು ಕಲ್ಲುಕೆತ್ತನೆ ಹಾಗೂ ಲೋಹ ಶಿಲ್ಪ ವಿಭಾಗಗಳಲ್ಲಿ ತರಬೇತಿಯ ಅವಧಿಯು 18 ತಿಂಗಳಾಗಿದ್ದು, ಕುಂಭಕಲೆ (ಟೆರಾಕೋಟಾ) ವಿಭಾಗದ ತರಬೇತಿ ಅವಧಿಯು 6 ತಿಂಗಳಾಗಿರುತ್ತದೆ. ಅಭ್ಯರ್ಥಿಗಳು ಕನಿ? 7ನೇ ತರಗತಿಯಲ್ಲಿ ಉತ್ತೀರ್ಣರಾಗಿರಬೇಕು, ವಯೋಮಿತಿ 18 ರಿಂದ 35 ವ?ದೊಳಗಿರಬೇಕು. ತರಬೇತಿ ಅವಧಿಯಲ್ಲಿ ಊಟ, ವಸತಿ, ಸಮವಸ್ತ್ರ, ಕಂಪ್ಯೂಟರ್ ಶಿಕ್ಷಣ, ಉಪಕರಣಗಳು/ಕಚ್ಚಾಸಾಮಗ್ರಿಗಳನ್ನು ಉಚಿತವಾಗಿ ಒದಗಿಸಲಾಗುವುದು. ಆಭ್ಯರ್ಥಿಗಳಿಗೆ ತರಬೇತಿ ಅಂಗವಾಗಿ ಉಚಿತ ಶೈಕ್ಷಣಿಕ ಪ್ರವಾಸ ಏರ್ಪಡಿಸಲಾಗುವುದಲ್ಲದೆ, ನುರಿತ ಶಿಕ್ಷಕರಿಂದ ತರಬೇತಿ ನೀಡಲಾಗುವುದು. ಸದರೀ ತರಬೇತಿಗೆ ಸೇರಲಿಚ್ಛಿಸುವವರು ನೇರ ಸಂದರ್ಶನಕ್ಕೆ ದಿನಾಂಕ ಮೇ 31, 2026 ರೊಳಗೆ ಬೆಂಗಳೂರು ಸಮೀಪದ ಜೋಗರದೊಡ್ಡಿ (ಬಿಡದಿ ಹೋಬಳಿ, ರಾಮನಗರ ತಾಲ್ಲೂಕು, ಬೆಂಗಳೂರು ದಕ್ಷಿಣ (ರಾಮನಗರ)ಜಿಲ್ಲೆ) ಯಲ್ಲಿರುವ ಕೆನರಾಬ್ಯಾಂಕ್ ಕೆ ಪಿ ಜೆ ಪ್ರಭು ಕರಕುಶಲ ತರಬೇತಿ ಸಂಸ್ಥೆಯಲ್ಲಿ ಹಾಜರಾಗಬೇಕು. ವಿವರಗಳಿಗಾಗಿ (9481739830, 9164984414 ) ಸಂಪರ್ಕಿಸಬಹುದು

## ಪ್ಯಾಸೆಂಜರ್ ಆಟೋ ಮಗುಚಿ ಆರು ಜನರಿಗೆ ಗಾಯ



ಚಾಮರಾಜನಗರ, ಕೊಳ್ಳೇಗಾಲ ತಾಲೂಕಿನ ಸರಗೂರು ಹೊರವಲಯದ ರಸ್ತೆಯಲ್ಲಿ ಪ್ಯಾಸೆಂಜರ್ ಆಟೋ ಮಗುಚಿ ಚಾಲಕ ಸೇರಿ ಆರು ಪ್ರಯಾಣಿಕರು ಗಾಯಗೊಂಡಿರುವ ಘಟನೆ ಮಂಗಳವಾರ ಬೆಳಗ್ಗೆ ಜರುಗಿದೆ.

ತಾಲೂಕಿನ ಸತ್ತೇಗಾಲ ಗ್ರಾಮದ ಪುಟ್ಟಮ್ಮ(60), ಮನೀಶ್(14), ಲಕ್ಷ್ಮಮ್ಮ(58), ಚಾಲಕ ಮಧು(55), ಪಟ್ಟಣದ ಮಂಜುಳಾ(35) ಹಾಗೂ ಮತ್ತೀಪುರ ಗ್ರಾಮದ ಮಹದೇವಮ್ಮ(70) ಇವರು ಗಾಯಗೊಂಡಿದ್ದಾರೆ. ಸತ್ತೇಗಾಲ ಕಡೆಯಿಂದ ಕೊಳ್ಳೇಗಾಲ ಪಟ್ಟಣಕ್ಕೆ ಬರುತ್ತಿದ್ದ ಪ್ರಯಾಣಿಕರು ತುಂಬಿದ್ದ ಪ್ಯಾಸೆಂಜರ್ ಆಟೋ ಸರಗೂರು ಗ್ರಾಮದ ಹೊರವಲಯದ ರಸ್ತೆಯಲ್ಲಿ ಮಗುಚಿದ್ದ ಪರಿಣಾಮ ಪ್ರಯಾಣಿಕರು ಗಾಯಗೊಂಡಿದ್ದರು. ತಕ್ಷಣ ಗಾಯಾಳುಗಳನ್ನು ಕೊಳ್ಳೇಗಾಲ ಆಸ್ಪತ್ರೆಗೆ ಕರೆತರಲಾಯಿತು. ಆಸ್ಪತ್ರೆಯ ವೈದ್ಯರಾದ ಡಾ.ಟೀನಾ ಅವರು ಗಾಯಾಳುಗಳಿಗೆ ಚಿಕಿತ್ಸೆ ನೀಡಿ ಬಳಿಕ ಹೆಚ್ಚಿನ ಚಿಕಿತ್ಸೆಗೆ ಮೈಸೂರು ಹಾಗೂ ಚಾಮರಾಜನಗರ ಸಿಮ್ಸ್ ಆಸ್ಪತ್ರೆಗಳಿಗೆ ಕಳುಹಿಸಿಕೊಡಲಾಯಿತು. ಚಾಲಕ ಮಾತ್ರ ಕೊಳ್ಳೇಗಾಲ ಆಸ್ಪತ್ರೆಯಲ್ಲಿ ಚಿಕಿತ್ಸೆಗೆ ದಾಖಲಾಗಿದ್ದಾರೆ. ಈ ಸಂಬಂಧ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿಕೊಂಡು ಮುಂದಿನ ಕ್ರಮ ಕೈಗೊಂಡಿದ್ದಾರೆ.

## ಜಿಂಕೆ ಮಾಂಸ ಮಾರಾಟ ಮಾಡಲು ಯತ್ನಿಸುತ್ತಿದ್ದ ವ್ಯಕ್ತಿ ವಶ

ಗುಂಡ್ಲುಪೇಟೆ ತಾಲ್ಲೂಕಿನ ಕೂತನೂರು ಗ್ರಾಮದಲ್ಲಿ ಜಿಂಕೆ ಮಾಂಸ ಮಾರಾಟ ಮಾಡಲು ಯತ್ನಿಸುತ್ತಿದ್ದ ವ್ಯಕ್ತಿಯೊಬ್ಬರನ್ನು ಗುಂಡ್ಲುಪೇಟೆ ಬಫರ್ ಜೋನ್ ವಲಯದ ಅರಣ್ಯಾಧಿಕಾರಿಗಳು ಬಂಧಿಸಿದ್ದಾರೆ.

ತಾಲ್ಲೂಕಿನ ಕೂತನೂರು ಗ್ರಾಮದ ಲಕ್ಷ್ಮಣ್(30) ಬಂಧಿತ. ಮಾಹಿತಿ ಅರಿತ ಪೊಲೀಸರು ಮನೆಯ ಪಕ್ಕದ ಹಿತ್ತಲಿನಲ್ಲಿ ಜಿಂಕೆ ಮಾಂಸವನ್ನು ಕತ್ತರಿಸಿ ಮಾರಾಟ ಮಾಡುತ್ತಿದ್ದಾಗ ಅರಣ್ಯಾಧಿಕಾರಿ ಶಿವಕುಮಾರ್ ನೇತೃತ್ವದ ತಂಡ ದಾಳಿ ನಡೆಸಿದೆ. ಈ ವೇಳೆ ಮಾಂಸದ ಜೊತೆಗೆ ಜಿಂಕೆಯ ತಲೆ, ಕಾಲುಗಳು ಸಿಕ್ಕಿವೆ.

ಪ್ರಕರಣ ದಾಖಲಿಸಿಕೊಂಡಿರುವ ಅರಣ್ಯಾಧಿಕಾರಿಗಳು ಮುಂದಿನ ಕ್ರಮ ಕೈಗೊಂಡಿದ್ದಾರೆ.



## ತಾಲೂಕು ಅಧ್ಯಕ್ಷರ ಅವಿರೋಧ ಆಯ್ಕೆ



ಗುಂಡ್ಲುಪೇಟೆ: ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ತಾಲೂಕು ಅಧ್ಯಕ್ಷರಾಗಿ ಕೊಡಸೋಗೆ ಶಿವಪ್ರಸಾದ್ (ಗುಂಡಣ್ಣ) ಅವಿರೋಧವಾಗಿ ಆಯ್ಕೆಯಾದರು.

ಪಟ್ಟಣದ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ತಾಲೂಕು ಕಚೇರಿಯಲ್ಲಿ ನಡೆದ ಚುನಾವಣೆ ಪ್ರಕ್ರಿಯೆಯಲ್ಲಿ ನಾಮಪತ್ರ ಸಲ್ಲಿಸಿದ್ದ 6 ಮಂದಿ ಪೈಕಿ ಐವರು ನಾಮಪತ್ರ ವಾಪಸ್ಸು ಪಡೆದ ಹಿನ್ನಲೆಯಲ್ಲಿ ಕೊಡಸೋಗೆ ಶಿವಪ್ರಸಾದ್ (ಗುಂಡಣ್ಣ)ರ ಅವಿರೋಧ ಆಯ್ಕೆಯನ್ನು ಚುನಾವಣಾಧಿಕಾರಿಯಾದ ಸರ್ಕಾರಿ ನೌಕರರ ಸಂಘದ ಮಾಜಿ ಅಧ್ಯಕ್ಷ ಅಂಕಪ್ಪ ಘೋಷಿಸಿದರು.

ಈ ಸಂದರ್ಭದಲ್ಲಿ ಮಾಜಿ ಶಾಸಕ ಹಾಗೂ ಬಿಜೆಪಿ ಜಿಲ್ಲಾಧ್ಯಕ್ಷ ಸಿ.ಎಸ್.ನಿರಂಜನ್‌ಕುಮಾರ್, ಮಹಾಸಭಾ ಮಾಜಿ ಅಧ್ಯಕ್ಷ ಕಮರಹಳ್ಳಿ ರವಿ, ನಿರ್ದೇಶಕರಾದ ಎಚ್.ಎಂ.ನಂದೀಶ್, ಡಿ.ಬಿ. ಕುಮಾರ್, ಮುಖಂಡರಾದ ಕಡಬೂರು ಮಂಜುನಾಥ್, ಸಿ.ಮಹದೇವಪ್ರಸಾದ್, ಎಚ್.ಎನ್. ನಟೇಶ್, ಎಚ್.ಎಸ್.ಪ್ರಸಾದ್, ನಾಗೇಂದ್ರ, ಗುರುಸ್ವಾಮಿ, ಮಹೇಂದ್ರ, ರೇವಣ್ಣ, ಶಂಕರ್, ಸುಬ್ಬು, ವಿಜಯ್ ಬೊಮ್ಮನಹಳ್ಳಿ, ಎಚ್.ಎಸ್.ಪ್ರಸಾದ್, ರಾಮಲಿಂಗಪ್ಪ, ಮಂಜು ಹಾಜರಿದ್ದರು.

## ಕಾಮಗಾರಿಗೆ ಶಾಸಕರಿಂದ ಗುದ್ದಲಿಪೂಜೆ



ಚಾಮರಾಜನಗರ: ನಗರದ13ನೇ ವಾರ್ಡ್ ನಲ್ಲಿ ಅಂಬೇಡ್ಕರ್ ಸಮುದಾಯ ಭವನದ ಮುಂದುವರೆದ ಕಾಮಗಾರಿಗೆ ಎಂಎಸ್‌ಐಎಲ್ ಅಧ್ಯಕ್ಷ, ಶಾಸಕ ಸಿ.ಪುಟ್ಟರಂಗಶೆಟ್ಟಿ ಗುದ್ದಲಿಪೂಜೆ ನೆರವೇರಿಸಿದರು.

2025–26ನೇ ಸಾಲಿನ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಅನುದಾನದಲ್ಲಿ ಅಂಬೇಡ್ಕರ್ ಸಮುದಾಯ ಭವನದ ಮುಂದುವರೆದ ಕಾಮಗಾರಿ 20 ಲಕ್ಷ ರೂ. ನೀಡಲಾಗಿದೆ. ಗುಣಮಟ್ಟದಿಂದ ಸುಸಜ್ಜಿತ ಸಮುದಾಯ ಭವನ ನಿರ್ಮಿಸಿಕೊಂಡು ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಕಿವಿಮಾತು ಹೇಳಿದರು.

ಈ ಸಂದರ್ಭದಲ್ಲಿ ನಗರಸಭಾ ಮಾಜಿ ಅಧ್ಯಕ್ಷೆ ಚಿನ್ನಮ್ಮ, ಮುಖಂಡ ಮಹೇಶ್ ಕುದರ್, ಸಿ. ಕೆ.ಮಂಜುನಾಥ್, ಯಜಮಾನರಾದ ಮಂಜುನಾಥ್ ಕುದರ್, ಮಹದೇವು, ಶಿವಣ್ಣ, ಗುರುಸ್ವಾಮಿ, ನಾಗರಾಜು, ಮಲ್ಲಿಕಾರ್ಜುನ, ನಿರ್ಮಿತಿ ಕೇಂದ್ರ ಇಂಜಿನಿಯರ್ ಆದ ಭೀಮ್ ಸಾಗರ್, ಸೋಮುಶೇಖರ್ ಇತರರು ಹಾಜರಿದ್ದರು.

### ದೂರದ ಕೆಪಿಎಸ್ ಶಾಲೆಗೆ ಕಳುಹಿಸಲು ಚಿಕ್ಕೇಗೌಡನದೊಡ್ಡಿ ಪೋಷಕರ ಆತಂಕ

## ಎಐಡಿಎಸ್‌ಓ ನೇತೃತ್ವ: ಪೋಷಕರ ಹೋರಾಟ

ರಾಮನಗರ: ಗ್ರಾಮಗಳಲ್ಲಿರುವ ಸರ್ಕಾರಿ ಶಾಲೆಗಳನ್ನು ಮುಚ್ಚಿದರೆ 6 ರಿಂದ 8 ಕಿಲೋಮೀಟರ್ ದೂರದ ಶಾಲೆಗೆ ದಿನನಿತ್ಯ ಕರೆದುಕೊಂಡು ಹೋಗುವುದು ಸಾಧ್ಯವಿಲ್ಲ. ನಮ್ಮೂರಿನಲ್ಲಿರುವ ಸರ್ಕಾರಿ ಶಾಲೆ ನಮ್ಮ ಗ್ರಾಮದಲ್ಲೇ ಇರಲಿ ಎಂದು ಸರ್ಕಾರದ ಕೆಪಿಎಸ್ ಮ್ಯಾಗ್ನೆಟ್ ಶಾಲೆಗಳಿಗೆ ಚಿಕ್ಕೇಗೌಡನದೊಡ್ಡಿಯಲ್ಲಿ ಪೋಷಕರು ವಿರೋಧ ವ್ಯಕ್ತಪಡಿಸಿದ್ದಾರೆ.

ಸುತ್ತಮುತ್ತಲಿನ 10ಕ್ಕೂ ಹೆಚ್ಚು ಸರ್ಕಾರಿ ಶಾಲೆಗಳನ್ನು ಪಾದರಹಳ್ಳಿ ಗ್ರಾಮದಲ್ಲಿ ಕೆಪಿಎಸ್ ಮ್ಯಾಗ್ನೆಟ್ ಶಾಲೆಗೆ ವಿಲೀನಗೊಳಿಸುವ ಸರ್ಕಾರದ ಉದ್ದೇಶ ಸರಿಯಲ್ಲ. ನಾವೆಲ್ಲ ಆರ್ಥಿಕವಾಗಿ ಅತ್ಯಂತ ಹಿಂದುಳಿದ ಜನ. ದಿನನಿತ್ಯ 6–7 ಕಿಮೀ ದೂರದ ಕೆಪಿಎಸ್ ಮ್ಯಾಗ್ನೆಟ್ ಶಾಲೆಗೆ ಕರೆದುಕೊಂಡು ಹೋಗಲು ನಮಗೆ ಸಾಮರ್ಥ್ಯವಿಲ್ಲ. ನಮಗೆ ಓದು ಬರಹ ಬರೋಲ್ಲ. ಪಾದರಹಳ್ಳಿ ಕೆಪಿಎಸ್ ಮ್ಯಾಗ್ನೆಟ್ ಶಾಲೆಗೆ ವರ್ಗಾವಣೆ ಪತ್ರಕ್ಕೆ ನಮ್ಮಿಂದ ಹೆಬ್ಬೆಟ್ಟು ಒತ್ತಿಸಿಕೊಂಡಿದ್ದಾರೆ. ಪತ್ರದಲ್ಲಿ ಏನಿದೆ ಎಂದು ನಮಗೆ ತಿಳಿದಿಲ್ಲ ಎಂದು ಚಿಕ್ಕೇಗೌಡನದೊಡ್ಡಿಯ ಗ್ರಾಮಸ್ಥರು ಅಲವತ್ತುಕೊಂಡಿದ್ದಾರೆ ಎಂದು ಎಐಡಿಎಸ್‌ಓ ಸಂಘಟನೆಯ ಪ್ರಕಟಣೆ ತಿಳಿಸಿದೆ.




ಶಿಕ್ಷಕರ ಮೇಲೆ ಭರವಸೆಯನ್ನು ಇಟ್ಟು ಹೆಬ್ಬೆಟ್ಟನ್ನು ಒತ್ತಿದ್ದೇವೆ ಎಂದು ಪೋಷಕರು ತಿಳಿಸಿದ್ದಾರೆ. ತಮ್ಮ ಗ್ರಾಮದಿಂದ ಪಾದರಹಳ್ಳಿ ನಡುವೆ ನಿರ್ಜನ ಪ್ರದೇಶವಿದೆ. ಅಂತಹ ಸ್ಥಳದ ಮೂಲಕ ಮಕ್ಕಳನ್ನು ಶಾಲೆಗೆ ಕಳುಹಿಸುವುದಾದರು ಹೇಗೆ ಎಂಬ ಆತಂಕವನ್ನು ಪೋಷಕರು ವ್ಯಕ್ತಪಡಿಸಿದ್ದಾರೆ. ನಮ್ಮೂರ ಶಾಲೆ ಮುಚ್ಚಿದರೆ, ಅನಿವಾರ್ಯವಾಗಿ ನಮ್ಮ ಮಕ್ಕಳನ್ನು ನಮ್ಮ ಜೊತೆ ಕೂಲಿಗೆ ಕರೆದುಕೊಂಡು ಹೋಗಬೇಕಾಗುತ್ತದೆ ಎಂದು ಗ್ರಾಮಸ್ಥರು ತಮ್ಮ ಆತಂಕವನ್ನು ಹಂಚಿಕೊಂಡಿದ್ದಾರೆ. ಮಕ್ಕಳ ಶಿಕ್ಷಣಕ್ಕೆ ಬೇಕಾದ ಉತ್ತಮ ಶಿಕ್ಷಕರು ಹಾಗೂ ಗುಣಮಟ್ಟದ ಶಿಕ್ಷಣವನ್ನು ಈ ಶಾಲೆಯಲ್ಲೇ ಕಲ್ಪಿಸಿಕೊಡಲು ಆಗ್ರಹಿಸಿ ಂಖಆಖಔ ನೇತೃತ್ವದಲ್ಲಿ ಗ್ರಾಮಸ್ಥರು ಹೋರಾಟ ನಡೆಸಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

## ಪೌರಕಾರ್ಮಿಕರಿಗೆ ಕಡ್ಡಾಯವಾಗಿ ವಿಮೆ ಮಾಡಿಸಿ

ರಾಮನಗರ: ಜಿಲ್ಲೆಯ ನಗರ ಮತ್ತು ಪಟ್ಟಣಗಳ ಸ್ವಚ್ಛತೆ ಕಾಪಾಡುವ ಪೌರ ಕಾರ್ಮಿಕರಿಗೆ ಆರೋಗ್ಯ ವಿಮೆ ಮತ್ತು ಜೀವವಿಮೆ ಮಾಡಿಸುವಂತೆ ನಗರ ಸ್ಥಳೀಯ ಸಂಸ್ಥೆಗಳಿಗೆ ರಾಮನಗರ ಉಪವಿಭಾಗದ ಉಪವಿಭಾಗಾಧಿಕಾರಿ ಬಿನೋಯ್ ಅವರು ಕಟ್ಟುನಿಟ್ಟಿನ ಸೂಚನೆ ನೀಡಿದರು.

ಅವರು ಮೇ 11ರ ಸೋಮವಾರ ನಗರದ ಉಪವಿಭಾಗಾಧಿಕಾರಿಗಳ ಕಚೇರಿಯಲ್ಲಿ ರಾಮನಗರ ಉಪ ವಿಭಾಗ ಮಟ್ಟದ ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ವಿಮೆಯು ಕಾರ್ಮಿಕರ ಹಕ್ಕಾಗಿದೆ. ಸ್ಥಳೀಯ ಸಂಸ್ಥೆಗಳು ಕಡ್ಡಾಯವಾಗಿ ವಿಮೆ ಮಾಡಿಸಬೇಕು. ಕಾರ್ಮಿಕರ ಸಂಬಳದಲ್ಲೇ ಕಡಿತವಾಗುವ ವಿಮೆ ಮಾಡಿಸಲು ಅಧಿಕಾರಿಗಳು ನಿರ್ಲಕ್ಷ್ಯ ತೋರುತ್ತಿರುವ ಕುರಿತು ದೂರು ಕೇಳಿ ಬಂದಿದ್ದು, ಕಾರ್ಮಿಕರ ಆರೋಗ್ಯ ವಿಮೆ ಮತ್ತು ಜೀವವಿಮೆ ವಿಷಯದಲ್ಲಿ ಯಾರೂ ನೆಪ ಹೇಳದೆ ತುರ್ತಾಗಿ ವಿಮೆ ಮಾಡಿಸುವಂತೆ ಸೂಚಿಸಿದರು.

ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಲ್ಲಿ ಪೌರ ಕಾರ್ಮಿಕ ಮಕ್ಕಳಿಗೆ ನೇರ ಪ್ರವೇಶ ನೀಡಬೇಕೆಂಬ ನಿಯಮವಿದೆ. ಈ ಬಗ್ಗೆ ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳ ಗಮನಕ್ಕೆ ತಂದು ಪೌರ ಕಾರ್ಮಿಕರಿಗೆ ಜಾಗೃತಿ ಮೂಡಿಸುವ ಮೂಲಕ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಲ್ಲಿ ಪೌರ ಕಾರ್ಮಿಕ ಮಕ್ಕಳ ಪ್ರವೇಶಕ್ಕೆ ಆದ್ಯತೆ ನೀಡಬೇಕು ಹಾಗೂ ಡಾ. ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ನೀಡಲಾಗುವ ಲ್ಯಾಪ್‌ಟಾಪ್‌ಗಳನ್ನು ಶೀಘ್ರವಾಗಿ ವಿತರಿಸಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.



ಪೌರ ಕಾರ್ಮಿಕರ ಕಲ್ಯಾಣ ಕಾರ್ಯಕ್ರಮಗಳಿಗಾಗಿ ಕಾಯ್ದಿರಿಸಿರುವ ಶೇ. 24.10 ಅನುದಾನವನ್ನು ನಗರಸಭೆ ಹಾಗೂ ಪುರಸಭೆಗಳಲ್ಲಿ ಪೂರ್ಣಪ್ರಮಾಣದಲ್ಲಿ ಬಳಕೆ ಮಾಡಿ ವರದಿ ನೀಡಬೇಕೆಂದು ನಿರ್ದೇಶಿಸಿದ ಅವರು ಸ್ಥಳೀಯ ಸಂಸ್ಥೆಗಳು ಸ್ಥಳೀಯ ಸಂಸ್ಥೆಗಳು ಕಸ ಸಂಗ್ರಹಣೆಗೆ ಸೇರಿದಂತೆ ವಿವಿಧ ಉದ್ದೇಶಗಳಿಗೆ ಬಳಸುವ ವಾಹನಗಳಿಗೆ ವಿಮೆಯನ್ನು ಕಡ್ಡಾಯವಾಗಿ ಮಾಡಿಸಬೇಕು. ಸದೃಢತೆ ಪ್ರಮಾಣಪತ್ರ ಹೊಂದಿರಬೇಕು. ಇಲ್ಲದಿದ್ದರೆ ಅಪಘಾತ ಅದಾಗ ವಿಮೆ ಕ್ಲೈಮ್‌ಗೆ ತೊಂದರೆಯಾಗಲಿದೆ ಎಂದು ಸಲಹೆ ನೀಡಿದರು.

'ಸಭೆಯಲ್ಲಿ ಸಮಿತಿ ಸದಸ್ಯರಾದ ಆರ್. ನಾಗರಾಜು, ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರಾದ ಡಾ. ಕುಮಾರ್, ಕನಕಪುರದ ಪ್ರಕಾಶ್, ಚನ್ನಪಟ್ಟಣದ ಪೌರಾಯುಕ್ತರಾದ ಮಹೇಂದ್ರ, ಜಿಲ್ಲಾಸ್ಪತ್ರೆಯ ಆರ್‌ಎಂಓ ಡಾ. ನಾರಾಯಣಸ್ವಾಮಿ, ಕ್ರೈಸ್ಟ್ ಎಂಡಿಆರ್‌ಎಸ್ ಸಂಯೋಜಕ ಮಹೇಶ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

ರಾಜಕೀಯ ದ್ವೇಷ ಹಿನ್ನೆಲೆ

# ಹೊಂಗನೂರಿನಲ್ಲಿ ಕಾಂಗ್ರೆಸ್ ಮುಖಂಡನಿಗೆ ಚೂರಿ ಇರಿತ

ಚಾಮರಾಜನಗರ, ಮಾಜಿ ಶಾಸಕ ಎಸ್ ಬಾಲರಾಜು ಬೆಂಬಲಿಗ ಹಾಗೂ ಬಿಜೆಪಿ ಜಿಲ್ಲಾ ಕಾರ್ಯದರ್ಶಿ ಹೊಂಗನೂರು ಮಹದೇವಸ್ವಾಮಿ ರಾಜಕೀಯ ದ್ವೇಷ ಹಿನ್ನೆಲೆಯಲ್ಲಿ ಕಾಂಗ್ರೆಸ್ ಮುಖಂಡನೊಬ್ಬರಿಗೆ ಚೂರಿ ಇರಿದು ಪರಾರಿಯಾಗಿರುವ ಘಟನೆ ತಾಲೂಕಿನ ಹೊಂಗನೂರು ಗ್ರಾಮದಲ್ಲಿ ಗುರುವಾರ ನಡೆದಿದೆ.

ಗ್ರಾಮದ ನಿವಾಸಿ ಹಾಗೂ ಹೊಂಗನೂರು ಗ್ರಾಮ ಪಂಚಾಯಿತಿ ಕಾಂಗ್ರೆಸ್ ಪ್ರಜಾ ಪ್ರತಿನಿಧಿ ಅಧ್ಯಕ್ಷ ಮಹದೇವಯ್ಯ (54) ಹಲ್ಲೆಯಿಂದ ತೀವ್ರ ಗಾಯಗೊಂಡು ಚಾ.ನಗರ ವೈದ್ಯಕೀಯ ಅಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಹೊಂಗನೂರು ಮಹದೇವಸ್ವಾಮಿ ಮತ್ತು ಅವರ ಸಂಬಂಧಿ ಸಿದ್ದರಾಜು ವಿರುದ್ದ ಸಂತೇಮರಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಸಬ್ ಇನ್ಸ್‌ಪೆಕ್ಟರ್ ಸಾಗರ್ ಕಾರ್ಯಾಚರಣೆ ನಡೆಸಿ, ಅರೋಪಿ ಸಿದ್ದರಾಜು ಅನ್ನು ಬಂಧಿಸಿದ್ದು, ನಾಪತ್ತೆಯಾಗಿರುವ ಪ್ರಮುಖ ಆರೋಪಿ ಮಹದೇವಸ್ವಾಮಿಗಾಗಿ ಶೋಧ ಮುಂದುವರಿಸಿದ್ದಾರೆ.

**ಘಟನೆ ವಿವರ :** ಹೊಂಗನೂರು ಗ್ರಾಮದ ಮಹದೇವಯ್ಯ ಅವರನ್ನು ಅದೇ ಗ್ರಾಮದ ಸಿದ್ದರಾಜು ಎಂಬಾತ ಕೊಲೆ ಮಾಡುವ ದುರುದ್ದೇಶದಿಂದಲೇ ಕರಿಕಲ್ಲು ವ್ಯವಹಾರ ಮಾತಾಡೋಣ ಬಾ ಎಂದು ದೂರದ ನಿರ್ಜನ ಪ್ರದೇಶಕ್ಕೆ ಕರೆದುಕೊಂಡು ಹೋಗಿದ್ದಾನೆ. ಗ್ರಾಮದ ಬಳಿ ಇರುವ ಹಾಸ್ಟೆಲ್ ಹಾಗೂ ಅಲ್ಲಿಂದ ಸುಮಾರು ದೂರದಲ್ಲಿರುವ ಅಂಬಳೆ ಮತ್ತು ಹೊಮ್ಮ ಹೋಗುವ ರಸ್ತೆ ಮಧ್ಯೆ ಭಾಗದಲ್ಲಿ ಇಬ್ಬರು ಹೋಗುತ್ತಿದ್ದಂತೆ ಎದುರಿಗೆ ಬೈಕ್‌ನಲ್ಲಿ ಬಂದ ಆರೋಪಿ ಮಹದೇವಸ್ವಾಮಿ, ಏಕಾಏಕಿ ಜಗಳ ತೆಗೆದು ನಾಟಕದ ಆಹ್ವಾನ ಪತ್ರಿಕೆಯಲ್ಲಿ ನಮ್ಮ ನಾಯಕರಾದ ಎಸ್. ಬಾಲರಾಜು ಅವರ ಹೆಸರು ಹಾಕಿಸಿಲ್ಲ. ಇದಕ್ಕೆ ನೀನೇ ಕಾರಣ ಎಂದು ಪೂರ್ವನಿಯೋಜನೆಯಂತೆ ಕಣ ?ಣಗೆ ಖಾರದಪುಡಿಯನ್ನು ಎರಚಿ, ಜೊತೆಯಲ್ಲಿ ತಂದಿದ್ದ ಚೂರಿಯಿಂದ ಮುಖ ಹಾಗೂ ಕುತ್ತಿಗೆ ಭಾಗಕ್ಕೆ ಹೊಡೆದು ಪರಾರಿಯಾಗಿದ್ದಾನೆ. ಈ ಘಟನೆಯನ್ನು ಸ್ಥಳದಲ್ಲಿಯೇ ಇದ್ದ ಸಿದ್ದರಾಜು ನೋಡುತ್ತಾ ನಿಂತಿದ್ದ ಎಂದು ಹಲ್ಲೆಗೊಳಗಾದ ಮಹದೇವಯ್ಯ ದೂರಿನಲ್ಲಿ ತಿಳಿಸಿದ್ದಾರೆ.

ತಕ್ಷಣ ಗ್ರಾಮಕ್ಕೆ ಬಂದು ಅಲ್ಲಿಂದ ನೇರವಾಗಿ ಚಾ.ನಗರ ವೈದ್ಯಕೀಯ ಕಾಲೇಜು ಅಸ್ಪತ್ರೆಗ ಚಿಕಿತ್ಸೆಗೆ ದಾಖಲಾಗಿದ್ದೇನೆ. ನಂತರ ಪೊಲೀಸ್ ಠಾಣೆಗೆ ದೂರು ನೀಡಿದ್ದೇನೆ. ಬಿಜೆಪಿ ಮುಖಂಡನಾಗಿರುವ ಮಹದೇವಸ್ವಾಮಿ ಈ ಹಿಂದೆಯೂ ಸಹ ಮಾಜಿ ಶಾಸಕರಾದ ದಿ. ಎಸ್. ಜಯಣ್ಣ ಹಾಗೂ ಮೈಸೂರಿನ ಉರಿಲಿಂಗ ಪೆದ್ದಿ ಮಠದ ಶ್ರೀ ಜ್ಞಾನ ಪ್ರಕಾಶ್‌ಸ್ವಾಮೀಜಿಗಳ ವಿರುದ್ದ ಸಾಮಾಜಿಕ ಜಾಲತಾಣದಲ್ಲಿ ಅವಹೇಳನಕಾರಿಯಾಗಿ ಪೋಸ್ಟರ್ ಆಗಿದ್ದರು. ಈ ಸಂಬಂಧ ಮಹದೇವಯ್ಯ ಮತ್ತು ಇತರರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲು ಮಾಡುತ್ತಿದ್ದರು. ಈ ದ್ವೇಷವನ್ನುಟ್ಟುಕೊಂಡು ಜೊತೆಗೆ ಮೇ 11 ರಂದು ಗ್ರಾಮದಲ್ಲಿ ನಡೆಯುವ ನಾಟಕದ ಆಹ್ವಾನ ಪತ್ರಿಕೆಯಲ್ಲಿ ನಮ್ಮ ನಾಯಕರಾದ ಎಸ್. ಬಾಲರಾಜು ಹೆಸರು ಹಾಕಿಸಿಲ್ಲ ಎಂದು ಕೋಪಗೊಂಡಿದ್ದ ಮಹದೇವಸ್ವಾಮಿ ಮತ್ತು ಸಿದ್ದರಾಜು ಸಮಯ ಸಾಧಿಸಿ, ನನ್ನನ್ನು ಕೊಲೆ ಮಾಡುವ ಸಂಚು ರೂಪಿಸಿದ್ದರು. ಅದೃಷ್ಟವಾಶಾತ್ ನಾನು ಪರಾಗಿದ್ದೇನೆ. ಕೊಲೆಗೆ ಯತ್ನ ಮಾಡಿರುವ ಇವರಿಬ್ಬರ ವಿರುದ್ದ ಕಾನೂನು ಕ್ರಮ ಕೈಗೊಳ್ಳಬೇಕೆಂದು ಮಹದೇವಯ್ಯ ನೀಡಿರುವ ದೂರಿನಲ್ಲಿ ಮನವಿ ಮಾಡಿದ್ದಾರೆ.

# ಲಕ್ಷ್ಯ ಕವನ ಸಂಕಲನ ಲೋಕಾರ್ಪಣೆಗೊಳಿಸಿ ಶುಭ ಕೋರಿದ ಸುತ್ತೂರು ಶ್ರೀ

ಚಾಮರಾಜನಗರ, :ಡಾ.ಮಮತ ಲೋಕೇಶ್ವರಿ.ಎಂಬಿಬಿಎಸ್‌ಅವರು ಬರೆದಿರುವ ಲಕ್ಷ್ಯ ಕವನ ಸಂಕಲನವನ್ನು ಸುತ್ತೂರು ಜಗದ್ಗುರು ಶ್ರೀ ವೀರಾಸಿಂಹಾಸನ ಮಹಾಸಂಸ್ಥಾನ ಮಠದ ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮೀಜಿ ಲೋಕಾರ್ಪಣೆಗೊಳಿಸಿ ಶುಭ ಕೋರಿದರು.

ನಗರದ ಡಾ.ರಾಜ್ ಕುಮಾರ್ ಜಿಲ್ಲಾ ರಂಗಮಂದಿರದಲ್ಲಿ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು ವತಿಯಿಂದ ನಡೆದ ಡಾ.ಮಮತ ಲೋಕೇಶ್ವರಿ ಎನ್.ಎಂಬಿಬಿಎಸ್ ಅವರ ಲಕ್ಷ್ಯ ಕವನ ಸಂಕಲನ ಲೋಕಾರ್ಪಣೆ ಸಮಾರಂಭದಲ್ಲಿ ಶ್ರೀಗಳು ಕವನ ಸಂಕಲನ ಬಿಡುಗಡೆಗೊಳಿಸಿ ಮಾತನಾಡಿ, ವೃದ್ಯಕೀಯ ವೃತ್ತಿ ಬೇರೆ, ಸಾಹಿತ್ಯ ಕ್ಷೇತ್ರನೇ ಬೇರೆ ಒಬ್ಬ ಹೆಣ್ಣು ದಿನನಿತ್ಯ ವಸ್ತುಗಳು, ಪರಿಸರ ಸುತ್ತಮುತ್ತ ಇರುವ ವಾತಾವರಣವನ್ನು ಕವನ ಸಂಕಲನದಲ್ಲಿ ಕಟ್ಟಿಕೊಡುವ ಮೂಲಕ ಲಕ್ಷ್ಯ ಕವನ ಸಂಕಲನ ಬರೆದು ಚೊಚ್ಚಲ ಯಶ್ವಸಿಯಾಗಿದ್ದಾಳೆ. ಕವನ ಸಂಕಲನದಲ್ಲಿ ಸಾಧನೆ ಮಾಡಿ ಸಾಹಿತ್ಯ ಕ್ಷೇತ್ರದಲ್ಲಿ ಗುರುತಿಸಿಕೊಳ್ಳುತ್ತಿರುವುದು ತುಂಬಾ ಸಂತಸಕರ ವಿಷಯವಾಗಿದೆ ಎಂದು ಮೆಚ್ಚಿಗೆ ವ್ಯಕ್ತಪಡಿಸಿ ಶುಭ ಕೋರಿದರು. ಶರಣ ಸಾಹಿತ್ಯ ಪರಿಷತ್ತಿನ ರಾಜ್ಯಾಧ್ಯಕ್ಷ ಸೋಮಶೇಖರ ಕಾರ್ಯಕ್ರಮ ಉದ್ಘಾಟಿಸಿದರು.

ಮೈಸೂರಿನ ಹಿರಿಯ ಸಾಹಿತಿ ಪ್ರೊ.ಶಿವರಾಜಪ್ಪ, ಕವಯತ್ರಿ ಡಾ.ಮಮತಾ ಲೋಕೇಶ್ವರಿ, ಮಾಜಿ ವಿಧಾನ ಪರಿಷತ್ ಸದಸ್ಯ ಪ್ರೊ. ಕೆ.ಆರ್.ಮಲ್ಲಿಕಾರ್ಜುನಪ್ಪ, ಮಾಜಿ ಸಚಿವೆ ಗೀತಾಮಹದೇವಪ್ರಸಾದ್ ಮಾತನಾಡಿದರು ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು ಅಧ್ಯಕ್ಷ ಬಿ.ಕೆ. ರವಿಕುಮಾರ್ ಪ್ರಾಸ್ತಾವಿಕ ಭಾಷಣ ಮಾಡಿದರು. ಕದಳಿ ವೇದಿಕೆ ಜಿಲ್ಲಾಧ್ಯಕ್ಷೆ ವಸಂತಮ್ಮ ಹಾಜರಿದ್ದರು.

# ಗೃಹಲಕ್ಷ್ಮಿ ಹಣ ಶೀಘ್ರ ಖಾತೆಗೆ

**ಬೆಂಗಳೂರು:** ಗೃಹಲಕ್ಷ್ಮಿ ಯೋಜನೆಯ ಮಾರ್ಚ್ ತಿಂಗಳ ಕಂತಿನ ಹಣ ನಾಲ್ಕೈದು ದಿನಗಳಲ್ಲಿ ಫಲಾನುಭವಿಗಳ ಬ್ಯಾಂಕ್ ಖಾತೆಗೆ ಜಮೆಯಾಗುತ್ತದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿದರು.



ಬೆಳಗಾವಿಯಲ್ಲಿ ಸೋಮವಾರ ಮಾತನಾಡಿದ ಅವರು, ಇದೇ ಯೋಜನೆಯ ಏಪ್ರಿಲ್ ಕಂತಿನ ಹಣವೂ ಎಂಟರಿಂದ 10 ದಿನಗಳಲ್ಲಿ ಫಲಾನುಭವಿಗಳ ಕೈಸೇರಲಿದೆ ಎಂದರು.

# ಸಮಯದ ಸದ್ಬಳಕೆಯೇ ಯಶಸ್ಸಿನ ಗುಟ್ಟು: ಪ್ರೊ.ಶರಣಪ್ಪ ವಿ.ಹಲಸೆ

ಮೈಸೂರು: ವಿದ್ಯಾರ್ಥಿ ಜೀವನವು ವ್ಯಕ್ತಿಯ ಭವಿಷ್ಯವನ್ನು ರೂಪಿಸುವ ಅತ್ಯಂತ ಮಹತ್ವದ ಹಂತವಾಗಿದೆ. ಈ ಅವಧಿಯಲ್ಲಿ ಶಿಸ್ತು, ಕಠಿಣ ಪರಿಶ್ರಮ ಮತ್ತು ಸಮಯ ಪ್ರಜ್ಞೆಯನ್ನು ಅಳವಡಿಸಿಕೊಂಡರೆ ಮಾತ್ರ ಉನ್ನತ ಸಾಧನೆ ಮಾಡಲು ಸಾಧ್ಯ ಎಂದು ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಶರಣಪ್ಪ ವಿ.ಹಲಸೆ ಹೇಳಿದರು




ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ ವತಿಯಿಂದ ಕೆ-ಸೆಟ್ ಮತ್ತು ಯುಜಿಸಿ- ನೆಟ್ ಸ್ಪರ್ಧಾತ್ಮಕ ಪರೀಕ್ಷೆಗಳ ತರಬೇತಿ ಶಿಬಿರವನ್ನು ಕಾವೇರಿ ಸಭಾಂಗಣದಲ್ಲಿ ಉದ್ಘಾಟಿಸಿ ಮಾತನಾಡಿದರು. ಸ್ವಾಮಿ ವಿವೇಕಾನಂದರು ಪ್ರತಿಯೊಬ್ಬ ವಿದ್ಯಾರ್ಥಿಯ ಜೀವನದಲ್ಲಿ ಮೂರು 'ಖ' ಸೂತ್ರಗಳನ್ನು ಅಳವಡಿಸಿಕೊಳ್ಳುವುದು ಬಹಳ ಮುಖ್ಯ. ನಿಮ್ಮ ಉಜ್ವಲ ಭವಿಷ್ಯಕ್ಕಾಗಿ ನಿರಂತರವಾಗಿ ಪ್ರಯತ್ನಿಸಿ, ನಿಮ್ಮ ಮೇಲೆ ನಿಮಗೆ ಮೊದಲು ನಂಬಿಕೆ ಇರಲಿ. ಸೋಲುಗಳಿಗೆ ಎದೆಗುಂದದೆ ಗುರಿಯತ್ತ ಸಾಗಿ, ನೀವು ಮಾಡುವ ಕೆಲಸದಲ್ಲಿ ಪ್ರಾಮಾಣಿಕತೆ ಇರಲಿ. ಪ್ರತಿಯೊಬ್ಬರಿಗೂ ದಿನಕ್ಕೆ 24 ಗಂಟೆಯೇ ಇರುತ್ತದೆ. ಆ ಸಮಯವನ್ನು ಯಾರು ಹೇಗೆ ವಿವೇಚನೆಯಿಂದ ಬಳಸಿಕೊಳ್ಳುತ್ತಾರೆ ಎಂಬುದು ಅವರ ಯಶಸ್ಸನ್ನು ನಿರ್ಧರಿಸುತ್ತದೆ. ಛಲ ಇರಲಿ ಜೀವನದಲ್ಲಿ ಏನನ್ನಾದರೂ ಸಾಧಿಸಬೇಕೆಂಬ ಛಲ ಇರಬೇಕು. ಬರೀ ಮನೋರಂಜನೆಗೆ ಅಂಟಿಕೊಳ್ಳದೆ, ಓದು ಮತ್ತು ಜ್ಞಾನಾರ್ಜನೆಯಲ್ಲಿ ತೊಡಗಿಸಿಕೊಳ್ಳಬೇಕು ಎಂದರು. ತಂತ್ರಜ್ಞಾನ ಮತ್ತು ಸಂಶೋಧನೆ ವಿದ್ಯಾರ್ಥಿಗಳು ಇತ್ತೀಚಿನ ತಂತ್ರಜ್ಞಾನಗಳಾದ ಆರ್ಟಿಫಿಶಿಯಲ್ ಇಂಟೆಲಿಜೆನ್ಸ್ ಬಗ್ಗೆ ತಿಳಿದಿರಬೇಕು. ಆದರೆ, ಸಂಶೋಧನೆ ಮತ್ತು ಓದಿನ ವಿಷಯದಲ್ಲಿ ಅತಿಯಾಗಿ ಅದರ ಮೇಲೆ ಅವಲಂಬಿತರಾಗಬಾರದು. ಸ್ವಂತ ಪರಿಶ್ರಮದಿಂದ ಸಿದ್ಧಪಡಿಸಿದ ಜ್ಞಾನವಷ್ಟೇ ದೀರ್ಘಕಾಲ ಉಳಿಯುತ್ತದೆ ಎಂದರು.

ಗ್ರಾಮೀಣ ಭಾಗದಿಂದ ಬಂದ ವಿದ್ಯಾರ್ಥಿಗಳು ಯಾವುದೇ ಕೀಳರಿಮೆ ಹೊಂದಬಾರದು. ಛಲ ಮತ್ತು ಧೈರ್ಯವಿದ್ದರೆ ಎಂತಹ ಕಠಿಣ ಪರಿಸ್ಥಿತಿ ಯಲ್ಲೂ ಜಯ ಸಾಧಿಸಬಹುದು. ಡಾ. ಎ.ಪಿ.ಜೆ. ಅಬ್ದುಲ್ ಕಲಾಂ ಅವರಂತಹ ಮಹನೀಯರ ಜೀವನ ನಮಗೆ ಸದಾ ದಾರಿದೀಪವಾಗಬೇಕು. ವಿದ್ಯಾರ್ಥಿಗಳು ಮೊಬೈಲ್ ಮತ್ತು ಸಾಮಾಜಿಕ ಜಾಲತಾಣಗಳ ಅತಿಯಾದ ಬಳಕೆಯಿಂದ ದೂರವಿದ್ದು, ವಿದ್ಯಾಭ್ಯಾಸದ ಕಡೆಗೆ ಹೆಚ್ಚಿನ ಗಮನ ಹರಿಸಬೇಕೆಂದು ಎಂದು ಹೇಳಿರು.

ಬೆಂಗಳೂರು ಉತ್ತರ ವಿಶ್ವವಿದ್ಯಾನಿಲಯ ಕುಲಪತಿಗಳಾದ ಪ್ರೊ.ಬಿ.ಕೆ.ರವಿ ಮಾತನಾಡಿ ಹಿಂದಿನ ಕಾಲಕ್ಕೆ ಹೋಲಿಸಿದರೆ ಇಂದು ತಂತ್ರಜ್ಞಾನ ಮತ್ತು ಸಂಪನ್ಮೂಲಗಳು ಹೇರಳವಾಗಿವೆ. ಆದರೆ, ಪರೀಕ್ಷೆಯನ್ನು ಹೇಗೆ ಎದುರಿಸಬೇಕು, ಯಾವ ಅಂಶಗಳಿಗೆ ಹೆಚ್ಚಿನ ಒತ್ತು ನೀಡಬೇಕು ಎಂಬ ಸರಿಯಾದ ಮಾರ್ಗದರ್ಶನ ಯಶಸ್ಸಿಗೆ ಅತಿ ಮುಖ್ಯ ಎಂದು ಹೇಳಿದರು.

ಆಡಳಿತ ತರಬೇತಿಯ ಸಂಸ್ಥೆಯ ಜಂಟಿ ನಿರ್ದೇಶಕ ಆರ್.ಸತ್ಯಶ್ರೀ ಮಾತನಾಡಿ ಸಮಯದ ನಿರ್ವಹಣೆಯೇ ಯಶಸ್ಸಿನ ಮೆಟ್ಟಿಲು ಪ್ರತಿಯೊಬ್ಬ ವ್ಯಕ್ತಿಗೂ ದಿನದ 24 ಗಂಟೆಗಳು ಸಮಾನವಾಗಿರುತ್ತವೆ. ಆದರೆ ಯಾರು ಆ ಸಮಯವನ್ನು ಶಿಸ್ತಿನಿಂದ ಬಳಸಿಕೊಳ್ಳುತ್ತಾರೋ ಅವರು ಮಾತ್ರ ಜೀವನದಲ್ಲಿ ಯಶಸ್ವಿಯಾಗುತ್ತಾರೆ. ವಿದ್ಯಾರ್ಥಿಗಳು ಮೊಬೈಲ್ ಮತ್ತು ಅನಗತ್ಯ ವಿಷಯಗಳಿಗೆ ಸಮಯ ವ್ಯಯಿಸದೆ. ತಮ್ಮ ಪಠ್ಯ ಮತ್ತು ಕೌಶಲ್ಯದ ಅಭಿವೃದ್ಧಿಗೆ ಸಮಯ ಮೀಸಲಿಡಬೇಕು ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಕುಲಸಚಿವ ಪ್ರೊ.ಎಸ್.ಕೆ.ನವೀನ್ ಕುಮಾರ್, ಪರೀಕ್ಷಾಂಗ ಕುಲಸಚಿವ ಡಾ.ಸಿ.ಎಸ್. ಆನಂದಕುಮಾರ್, ಶೈಕ್ಷಣಿಕ ಡೀನ್ ಪ್ರೊ.ಎಂ. ರಮಾನಾಥಂ ನಾಯ್ಡು, ಅಧ್ಯಯನ ಕೇಂದ್ರದ ಡೀನ್ ಡಾ.ಎನ್.ಆರ್.ಚಂದ್ರೇಗೌಡ, ಸಂಯೋಜನಾಧಿಕಾರಿ ಜೈನಹಳ್ಳಿ ಸತ್ಯ ನಾರಾಯಣಗೌಡ ಮತ್ತಿತರರು ಉಪಸ್ಥಿತರಿದ್ದರು

# 40 ವರ್ಷದ ಬಳಿಕ ಏಕರೂಪ ವಿಧಾನಸಭೆ

## ಸತೀಶ್ ಮಹನಾ ಹೇಳಿಕೆ | ಆರು ರಾಜ್ಯಗಳ ವಿಧಾನಸಭೆಯ ಸಭಾಧ್ಯಕ್ಷರ ಸಭೆ




ಮೈಸೂರು: 40 ವರ್ಷಗಳ ಬಳಿಕ ದೇಶದ ಎಲ್ಲಾ ರಾಜ್ಯದ ವಿಧಾನಸಭೆಗಳ ಕಾರ್ಯವಿಧಾನ ಹಾಗೂ ನಡವಳಿಕೆಯ ಏಕರೂಪತೆ ತರುವ ನಿಟ್ಟಿನಲ್ಲಿ ಆರು ರಾಜ್ಯಗಳ ವಿಧಾನಸಭೆಯ ಸಭಾಧ್ಯಕ್ಷರನ್ನು ಒಗಳನ್ನೊಳಗೊಂಡ ಸಮಿತಿ ಸದಸ್ಯರು ಇದರ ಸಾಧಕ-ಬಾಧಕಗಳ ಕುರಿತಂತೆ ಮೊಟ್ಟ ಮೊದಲ ಬಾರಿಗೆ ಚರ್ಚಿಸಿರುವುದಾಗಿ ಸಮಿತಿಯ ಅಧ್ಯಕ್ಷ ಹಾಗೂ ಉತ್ತರ ಪ್ರದೇಶದ ವಿಧಾನಸಭೆಯ ಸಭಾಧ್ಯಕ್ಷ ಸತೀಶ್ ಮಹನಾ ತಿಳಿಸಿದರು.

ನಗರದ ಖಾಸಗಿ ಹೋಟೆಲ್‌ನಲ್ಲಿ ನಡೆದ ಸಮಿತಿ ಸುದ್ದಿಗೋಷ್ಠಿಯಲ್ಲಿ ಸಭೆ ಬಳಿಕ ಮಾತನಾಡಿದ ಅವರು, ಲೋಕಸಭೆಯ ಸಭಾಧ್ಯಕ್ಷರು ಆರು ರಾಜ್ಯಗಳ ವಿಧಾನಸಭೆಯ ಸಭಾಧ್ಯಕ್ಷರನ್ನು ಒಗಳನ್ನೊಳಗೊಂಡ ಸಮಿತಿ ಸದಸ್ಯರು ರಚಿಸಿದ್ದಾರೆ. ಸಮಿತಿಯು ವಿವಿಧ ರಾಜ್ಯಗಳ ಸಭಾಧ್ಯಕ್ಷರುಗಳೊಂದಿಗೆ ಚರ್ಚಿಸಿ ವರದಿ ಸಿದ್ಧಪಡಿಸಲಿದೆ. ಸಮಿತಿಯಲ್ಲಿ ನಾಗಲ್ಯಾಂಡ್, ಹಿಮಾಚಲ್ ಪ್ರದೇಶ, ಕರ್ನಾಟಕ, ಮಹಾರಾಷ್ಟ್ರ ಮತ್ತು ದೆಹಲಿಯ ವಿಧಾನಸಭಾ ಸಭಾಧ್ಯಕ್ಷರುಗಳು ಸಮಿತಿಯ ಸದಸ್ಯರಾಗಿದ್ದಾರೆ. ಎಲ್ಲಾ ರಾಜ್ಯಗಳ ವಿಧಾನಮಂಡಲದಲ್ಲಿರುವ ನೀತಿ ನಿಯಮಗಳು ಹಾಗೂ ನಿಯಮಗಳನ್ನು ಉತ್ತಮಗೊಳಿಸುವ ಬಗ್ಗೆ ಚರ್ಚೆ ನಡೆಸಿ ವರದಿ ಸಿದ್ಧಪಡಿಸಲಿದೆ. ಇದರೊಂದಿಗೆ ಬೇರೆ ರಾಜ್ಯಗಳ ಸಭಾಧ್ಯಕ್ಷರು ನೀಡುವ ಸಲಹೆಗಳನ್ನು ಸಹ ಪಡೆಯಲಾಗುವುದು ಎಂದರು.



40 ವರ್ಷಗಳ ಹಿಂದೆ ವಿಧಾನ ಮಂಡಲದ ನೀತಿ ನಿಯಮಗಳನ್ನು ರೂಪಿಸಲಾಗಿತ್ತು. ಈ ಹಿಂದೆ 25 ರಿಂದ 30 ವರ್ಷಗಳಿಗೆ ತಲೆಮಾರು ಬದಲಾವಣೆಯಾಗುತ್ತಿತ್ತು. ಇಂದು 5 ವರ್ಷಗಳಲ್ಲಿ ತಲೆಮಾರು ಬದಲಾವಣೆಯಾಗುತ್ತಿದೆ. ಈ ಹಿನ್ನಲೆಯಲ್ಲಿ ವಿಧಾನಮಂಡಲದಲ್ಲಿ ಎಲ್ಲಾ ರಾಜ್ಯಗಳ ಉತ್ತಮ ಸಲಹೆಗಳನ್ನು ಪಡೆದು ಏಕರೂಪತೆ ತರುವ ನಿಟ್ಟಿನಲ್ಲಿ ಸಮಿತಿ ಕಾರ್ಯನಿರ್ವಹಿಸುತ್ತಿದೆ. ತಂತ್ರಜ್ಞಾನ, ಮೂಲಸೌಕರ್ಯ, ಹಣಕಾಸು ವ್ಯವಹಾರ ಸೇರಿ ವಿವಿಧ ವ್ಯವಸ್ಥೆಗಳು ಬದಲಾವಣೆ ಹಾಗೂ ಸಾರ್ವಜನಿಕರ ಶ್ರೇಯೋಭಿವೃದ್ಧಿಯನ್ನು ಮುಖ್ಯವಾಗಿ ಇರಿಸಿಕೊಂಡು ಸಮಿತಿ ಚರ್ಚೆ ನಡೆಸುತ್ತಿದೆ. ಸಮಿತಿಯು ವರದಿಯನ್ನು ಸಿದ್ಧಪಡಿಸಿ ಲೋಕಸಭಾಧ್ಯಕ್ಷರಿಗೆ ಸಲ್ಲಿಸಲಿದೆ. ಇಂದು ಪ್ರಥಮ ಸಭೆ ನಡೆಸಲಾಗಿದ್ದು, ಮುಂದಿನ ಸಭೆಯನ್ನು ಒಂದೆರಡು ತಿಂಗಳೊಳಗಾಗಿ ದೆಹಲಿಯಲ್ಲಿ ನಡೆಸಲಾಗುವುದು. ಸಮಿತಿಗೆ ವರದಿ ನೀಡಲು 6 ತಿಂಗಳ ಕಲಾವಕಾಶ ನೀಡಲಾಗಿದೆ ಎಂದರು.

ಕರ್ನಾಟಕ ವಿಧಾನಸಭೆಯ ಸಭಾಧ್ಯಕ್ಷ ಯು.ಟಿ.ಖಾದರ್ ಮಾತನಾಡಿ, 1891ರಲ್ಲಿ ನಾಲ್ವಡಿ ಕೃಷ್ಣರಾಜ ಒಡೆಯರ್ ಮೈಸೂರಿನಲ್ಲಿ ಪ್ರಜಾಪ್ರತಿನಿಧಿ ಸಭೆ ನಡೆಸಿ ಇತಿಹಾಸ ಬರೆದಿದ್ದರು. ಈ ಹಿನ್ನೆಲೆಯಲ್ಲಿ ಸಮಿತಿಯು ಪ್ರಥಮ ಸಭೆಯನ್ನು ಮೈಸೂರಿನಲ್ಲಿ ನಡೆಸಲಾಗಿದೆ. ಏಕರೂಪದ ವಿಧಾನಸಭೆಯ ನಿಯಮ ಜಾರಿಯಿಂದ ಯಾವುದೇ ವಿಧವಾದ ಒಕ್ಕೂಟ ವ್ಯವಸ್ಥೆಗೆ ಧಕ್ಕೆ ಆಗುವುದಿಲ್ಲ. ಬದಲಿಗೆ ಬಲಿಷ್ಠ ಭಾರತಕ್ಕೆ ಇದು ಸಹಕಾರಿಯಾಗಲಿದೆ. ಸಮಿತಿಯೂ ಇತರ ರಾಜ್ಯದ ವಿಧಾನಸಭಾಧ್ಯಕ್ಷರ ಸಲಹೆಯನ್ನು ಪಡೆಯಲಿವೆ. ಅಲ್ಲದೆ, ಕಲಾಪ ನಡೆಯುವ ದಿನಾಂಕ, ಕಲಾಪಗಳ ಮಹತ್ವ, ಕಲಾಪ ತೀರ್ಮಾನ ಇನ್ನಿತರರ ವಿಚಾರಗಳ ಕುರಿತಂತೆ ಸಮಗ್ರವಾಗಿ ಚರ್ಚಿಸಲಾಗಿದೆ. ಈ ಮತ್ತಷ್ಟು ಚರ್ಚಿಸಿ ಅಂತಿಮವಾಗಿ ರೂಪುರೇಷೆ ಸಿದ್ಧಪಡಿಸಲಾಗುವುದು ಎಂದು ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ಸಮಿತಿಯ ಸದಸ್ಯರುಗಳಾದ ನಾಗಾಲ್ಯಾಂಡ್ ವಿಧಾನಸಭೆಯ ಸಭಾಧ್ಯಕ್ಷ ಶ್ಯಾರಿಗ್ಯಾನ್ ಲಾಂಗ್ಕುಮೇರ್, ಹಿಮಾಚಲ ಪ್ರದೇಶದ ವಿಧಾನಸಭೆಯ ಸಭಾಧ್ಯಕ್ಷ ಕುಲ್ ದೀಪ್ ಸಿಂಗ್ ಪತಾನೀಯ ಹಾಗೂ ದೆಹಲಿ ವಿಧಾನಸಭೆಯ ಸಭಾಧ್ಯಕ್ಷ ವಿಜೇಂದರ್ ಗುಪ್ತ ಇನ್ನಿತರರು ಉಪಸ್ಥಿತರಿದ್ದರು.

## ನಮ್ಮ ವ್ಯಾಪ್ತಿಯಲ್ಲಿಲ್ಲ: ಯು.ಟಿ.ಖಾದರ್

ಮೈಸೂರು: ಇತ್ತೀಚಿನ ದಿನಗಳಲ್ಲಿ ರಾಜ್ಯಪಾಲರು ಹಾಗೂ ವಿಧಾನಸಭಾಧ್ಯಕ್ಷರ ನಡುವಿನ ಮನಸ್ತಾಪ, ರಾಜ್ಯಪಾಲರು ಭಾಷಣ ಓದದೇ ಹೋದ ಕುರಿತಂತ ಘಟನೆಗಳ ಬಗ್ಗೆಯೂ ಚರ್ಚೆ ಹಾಗೂ ನಿಯಮ ಜಾರಿಗೊಳ್ಳುವುದೇ ಎಂಬ ಕುರಿತ ಪ್ರಶ್ನೆಗೆ ಸದರಿ ವಿಚಾರ ನಮ್ಮ ವ್ಯಾಪ್ತಿಯಲ್ಲಿ ಇಲ್ಲ ಎಂದು ವಿಧಾನಸಭಾಧ್ಯಕ್ಷ ಯು.ಟಿ.ಖಾದರ್ ಸ್ಪಷ್ಟಪಡಿಸಿದರು. ಇನ್ನೂ ರಾಜ್ಯಪಾಲರ ನಡವಳಿಕೆ ಪ್ರಶ್ನಿಸುವಷ್ಟು ದೊಡ್ಡತನ ನಮಗಿಲ್ಲ. ಈ ಬಗ್ಗೆ ಹಿರಿಯರೇ ಹೇಳಬೇಕೆಂದು ಹೇಳಿದರು.

# ಜೂ.5ರಿಂದ ನಾನಾ ಕಾರ್ಯಕ್ರಮ




ಮೈಸೂರು: ಬಿಲ್ಡರ್ಸ್ ಅಸೋಸಿಯೇಷನ್ ಆಫ್ ಇಂಡಿಯಾ ಮೈಸೂರು ಶಾಖೆ ವತಿಯಿಂದ ವಿಶ್ವ ಪರಿಸರ ಮಾಸಾಚರಣೆ ಅಂಗವಾಗಿ ಜೂ. 5 ರಿಂದ ಜೂ. 30 ರವರೆಗೆ ನಗರದಲ್ಲಿ ವಿವಿಧ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಸಂಘಟನಾ ಸಮಿತಿ ಅಧ್ಯಕ್ಷ ಸಿ.ಡಿ. ಕೃಷ್ಣ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಜೂ. 5 ರಂದು ಸಂಜೆ 5ಕ್ಕೆ ಸಂಸ್ಥೆಯ ಎಂಬಿಸಿಟಿ ಸಭಾಂಗಣದಲ್ಲಿ ಅರಣ್ಯಾಧಿಕಾರಿ ಡಾ.ರಮೇಶ್ ಚಾಲನೆ ನೀಡುವರು, ಜೂ.5ರಂದು ಗ್ರೀನ್ ಮೈಸೂರು ವಾಕಥಾನ್, 13ರಂದು ಮೈಸೂರು ಮತ್ತು ಸುತ್ತಮುತ್ತಲಿನ ಹಲವಾರು ಪ್ರದೇಶಗಳಲ್ಲಿ ಸಸಿ ನೆಡುವುದು, 14 ರಂದು ಸೈಕ್ಲೋಥಾನ್, ಅಂದೇ ಶಾಲಾ ಮಕ್ಕಳಿಗೆ ಚಿತ್ರಕಲೆ ಸ್ಪರ್ಧೆ ರೀತಿಯಲ್ಲಿ ಜೂ. 30 ರವರೆಗೆ ವಿವಿಧೆಡೆ ವಿವಿಧ ಕಾರ್ಯಕ್ರಮ ನಡೆಯಲಿವೆ. ಜೂ. 30 ರಂದು ಸಂಜೆ 5ಕ್ಕೆ ಎಂಬಿಸಿಟಿ ಹಾಲ್‌ನಲ್ಲಿ ಸಮಾರೋಪ ಸಮಾರಂಭ ನಡೆಯಲಿದೆ ಎಂದು ಮಾಹಿತಿ ನೀಡಿದರು. ಜಿಎಸ್‌ಎಸ್ ಸಂಸ್ಥೆ ಮುಖ್ಯಸ್ಥ ಶ್ರೀಹರಿ, ಎಸ್.ವಾಸುದೇವನ್, ಕೆ.ಆರ್.ಪ್ರಭಾಕರ್ ರಾವ್, ರಘನಂದನ್ ಇನ್ನಿತರರು ಇದ್ದರು.

# ಕೇಂದ್ರದ ನಾಲ್ಕು ಕಾರ್ಮಿಕ ವಿರೋಧಿಸಿ ಪ್ರತಿಭಟನೆ

ಮೈಸೂರು: ಕೇಂದ್ರದ ಬಿಜೆಪಿ ನೇತೃತ್ವದ ಸರ್ಕಾರ ಕಾರ್ಮಿಕರ ಹಿತಾಸಕ್ತಿ ಬಲಿಕೊಟ್ಟು, ನಾಲ್ಕು ಕಾರ್ಮಿಕ ಸಂಹಿತೆಗಳಿಗೆ ನಿಯಮಾವಳಿಗಳನ್ನು ರೂಪಿಸಿ ಗೆಜೆಟ್ ಪ್ರಕಟಿಸಿರುವುದನ್ನು ವಿರೋಧಿಸಿ ಸೆಂಟರ್ ಆಫ್ ಇಂಡಿಯನ್ ಟ್ರೇಡ್ ಯೂನಿಯನ್ಸ್(ಸಿಐಟಿಯು) ಕಾರ್ಯಕರ್ತರು ನಗರದ ಹಳೇ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಿದರು.




ಕಾರ್ಮಿಕ ಸಂಘಟನೆಗಳು ಸೂಚಿಸಿದ ಯಾವುದೇ ತಿದ್ದುಪಡಿ ಪರಿಗಣಿಸದೆ ಮತ್ತು ಅವರೊಂದಿಗೆ ಯಾವುದೇ ಮಾತುಕತೆ ನಡೆಸದೆ ಸರ್ಕಾರ ಪ್ರಜಾಪ್ರಭುತ್ವದ ಮೌಲ್ಯಗಳನ್ನು ಗಾಳಿಗೆ ತೂರಿದೆ. ದಶಕಗಳ ಕಾಲದ ಹೋರಾಟದ ಮೂಲಕ ಗಳಿಸಿದ್ದ ಕಾರ್ಮಿಕರ ಮೂಲಭೂತ ಹಕ್ಕು ಮತ್ತು ಸವಲತ್ತನ್ನು ಈ ಸಂಹಿತೆಗಳು ನಾಶ ಮಾಡುತ್ತವೆ ಎಂದು ದೂರಿದರು. ಈ ಹೊಸ ನಿಯಮಗಳ ಮೂಲಕ ಬಂಡವಾಳಗಾರರು ಮಾಡುವ ಕಾನೂನು ಉಲ್ಲಂಘನೆಯನ್ನು ಕಾನೂನು ಬದ್ಧಗೊಳಿಸಲಾಗಿದೆ. ಇದರಿಂದ ಯುವಜನತೆಯ ಖಾಯಂ ಉದ್ಯೋಗದ ಕನಸು ಭಗ್ನಗೊಂಡು ಬದುಕು ಅತಂತ್ರವಾಗಲಿದೆ. ಈ ನಾಲ್ಕು ಕಾರ್ಮಿಕ ಸಂಹಿತೆಗಳು ಕಾರ್ಮಿಕರ ಮೇಲೆ ಗುಲಾಮಗಿರಿ ಹೇರುವುದಲ್ಲದೆ, ಅವರ ಪ್ರತಿಭಟನೆಯ ಹಕ್ಕನ್ನೇ ಕಿತ್ತುಕೊಳ್ಳುತ್ತವೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಕಾರ್ಮಿಕ ಕಾನೂನುಗಳು ಸಮವರ್ತಿ ಪಟ್ಟಿಯಲ್ಲಿ ಬರುವುದರಿಂದ, ಕರ್ನಾಟಕ ರಾಜ್ಯ ಸರ್ಕಾರ ಯಾವುದೇ ಕಾರಣಕ್ಕೂ ಈ ಸಂಹಿತೆಗಳನ್ನು ರಾಜ್ಯದಲ್ಲಿ ಅನುಷ್ಠಾನಗೊಳಿಸಬಾರದು. ಸಂವಿಧಾನದ ಒಕ್ಕೂಟ ತತ್ವದಡಿ ರಾಜ್ಯದ ಶ್ರಮಜೀವಿಗಳ ಹಿತರಕ್ಷಣೆಗೆ ಸರ್ಕಾರ ಮುಂದಾಗಬೇಕು ಎಂದು ಒತ್ತಾಯಿಸಿದರು.

ದೇಶದಲ್ಲಿ ಈಗಾಗಲೇ ನಿರುದ್ಯೋಗ ಮತ್ತು ಬೆಲೆ ಏರಿಕೆ ತಾಂಡವವಾಡುತ್ತಿರುವಾಗ, ಕೇಂದ್ರ ಸರ್ಕಾರ ಕಾರ್ಮಿಕರ ಮೇಲೆ ಅಮಾನವೀಯ ಯುದ್ಧ ಸಾರಿದೆ ಎಂದು ಆರೋಪಿಸಿದರು. ಪ್ರತಿಭಟನೆಯಲ್ಲಿ ಸಿಐಟಿಯು ಜಿಲ್ಲಾ ಅಧ್ಯಕ್ಷ ಎಂ.ಅಣ್ಣಪ್ಪ, ಪ್ರಧಾನ ಕಾರ್ಯದರ್ಶಿ ಎನ್.ಕೆ.ಬಾಲಾಜಿರಾವ್ ಸೇರಿ ಹಲವರು ಭಾಗವಹಿಸಿದ್ದರು.

# ಯುಪಿಎಸ್ಸಿಗೆ ಸಾಧಕರಿಗೆ ಸನ್ಮಾನ

ಮೈಸೂರು: ಕುವೆಂಪುನಗರ ಪಂಚಮಂತ್ರ ರಸ್ತೆಯಲ್ಲಿನ ನವೋ ಪ್ರಮತಿ ನಾಗರೀಕ ಸೇವೆಗಳ ತರಬೇತಿ ಕೇಂದ್ರದಲ್ಲಿ ತರಬೇತಿ ಪಡೆದು ಈ ಬಾರಿಯ ನಾಗರೀಕ ಸೇವಾ ಪರೀಕ್ಷೆಗಳಲ್ಲಿ ಉತ್ತಮ ಸಾಧನೆ ಮಾಡುವ ಮೂಲಕ ಕೇಂದ್ರ ಸೇವೆಗೆ ಆಯ್ಕೆಯಾದ ಜಿ.ಎಸ್. ಅಭಿಷೇಕ್ ನಾಯಕ್ ಹಾಗೂ ಸಾಗರ್ ಅಶ್ವತ್ಥಪ್ಪ ಅವರನ್ನು ಸಂಸ್ಥೆ ವತಿಯಿಂದ ಜಿಲ್ಲಾ ಪತ್ರಕರ್ತರ ಭವನದಲ್ಲಿ ನಡೆದ ಕಾರ್ಯಕ್ರಮದಲ್ಲಿ ಗಣ್ಯರು ಸನ್ಮಾನಿಸಿದರು.

ಅಪರ ಜಿಲ್ಲಾಧಿಕಾರಿ ಐಶ್ವರ್ಯ ಮಾತನಾಡಿ, ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಬಹಳಷ್ಟು ಮಂದಿ ಅನುತ್ತೀರ್ಣರಾದರೆ ಕೆಲವರು ಉತ್ತೀರ್ಣರಾಗುತ್ತಾರೆ. ಏಕೆಂದರೆ ಸರಿಯಾದ ಗುರಿಯಲ್ಲಿ ಸಾಗಲು ಮಾರ್ಗದ ರ್ಶಕರು ಅಗತ್ಯವಾಗಿದೆ. ಸಾಮಾನ್ಯ ವಿದ್ಯಾಭ್ಯಾಸದ ರೀತಿ ಇಲ್ಲಿ ಅಭ್ಯಾಸ ಇರದೇ ಬೇರೆ ರೀತಿಯಾಗಿರುತ್ತದೆ. ಈ ನಿಟ್ಟಿನಲ್ಲಿ ನವೋ ಪ್ರಮತಿ ತರಬೇತಿ ಉಪ ಯುಕ್ತವಾಗಿದೆ. ಕೆಲವೊಂದು ಬಾರಿ ನಿರೀಕ್ಷಿಸಿದಷ್ಟು ಅಂಕ ಬಾರದಿರಬಹುದು, ಆದರೇ ಜಗ್ಗದೇ ಮುಂದೆ ಸಾಗಬೇಕು. ಆಗ ಗುರಿ ಮುಟ್ಟುವುದು ಸಾಧ್ಯವಾಗುತ್ತದೆ ಎಂದರು.

ಸಂಸ್ಥೆ ಮುಖ್ಯಸ್ಥ ಹಾಗೂ ಮುಡಾ ಮಾಜಿ ಅಧ್ಯಕ್ಷ ಎಚ್.ವಿ.ರಾಜೀವ್ ಮಾತನಾಡಿ, ನಮಗೆ ಎಲ್ಲವೂ ಸಿಗುವಂತಿದ್ದರೆ, ಸುಲಭವೆಂದು ಸುಮ್ಮನಿರುತ್ತೇವೆ.



ಆದರೆ ಸಿಗದಿದ್ದುದಕ್ಕಾಗಿ ಪ್ರಯತ್ನ ಪಟ್ಟು ಪಡೆಯುತ್ತೇವೆ. ಇದೇ ರೀತಿ ಕೆಲವೊಂದು ಅಹಿತಕರ ವಾತಾವರಣದ ಸ್ಥಳದ ವಿದ್ಯಾರ್ಥಿಗಳು ನಾಗರಿಕ ಸೇವಾ ಪರೀಕ್ಷೆಗಳಲ್ಲಿ ಸಾಧನೆ ಮಾಡುತ್ತಿದ್ದಾರೆ. ನಮ್ಮ ಭಾಷೆಯಲ್ಲೇ ಪರೀಕ್ಷೆಯಲ್ಲಿ ಬರೆದು ಸಾಧನೆ ಮಾಡಬಹುದಾಗಿದೆ ಎಂಬುದಕ್ಕೆ ಕನ್ನಡದಲ್ಲೇ ಪರೀಕ್ಷೆ ಎದುರಿಸಿ ಉತ್ತೀರ್ಣರಾದ ಹಲವರ ಉದಾಹರಣೆ ನಮ್ಮ ಮುಂದಿವೆ. ಹೀಗಾಗಿ ಅಭ್ಯರ್ಥಿಗಳು ಎದೆಗುಂದಬಾರದು. ಆದರೆ ಉತ್ತಮ ಹುದ್ದೆ ಗಳಿಸಿದ ಬಳಿಕ ಸಮಾಜದ ಕಟ್ಟ ಕಡೆಯ ವ್ಯಕ್ತಿಯ ಕಣ್ಣೊರೆಸುವ ಕೆಲಸ ಮರೆಯಬಾರದೆಂದರು. ನಿವೃತ್ತ ಗ್ರೂಪ್ ಕ್ಯಾಪ್ಟನ್ ಸೈನಿ ನವಲ್, ಲಕ್ಷ್ಮಿಪುರಂ ವೃತ್ತ ನಿರೀಕ್ಷಕ ರವಿಶಂಕರ್, ಬಿ.ರವಿಕುಮಾರ್, ಎಸ್.ಫಣಿರಾಜ್ ಹಾಗೂ ಸಂಸ್ಥೆಯಲ್ಲಿ ತರಬೇತಿ ಪಡೆಯುತ್ತಿರುವ ಇನ್ನಿತರ ಅಭ್ಯರ್ಥಿಗಳು ಹಾಜರಿದ್ದರು.

ರಾಷ್ಟ್ರೀಯ ಸ್ವಯಂಸೇವಕ ಸಂಘದ ಸಂಘಚಾಲಕ ಕೆ.ವಿ.ರಾಜಣ್ಣ

# ಕೊಳ್ಳೇಗಾಲದಲ್ಲಿ ಆರೆಸ್‌ಎಸ್ ಶಿಬಿರ ನಿಂತಿಲ್ಲ

ಚಾಮರಾಜನಗರ,ಜಿಲ್ಲೆಯ ಕೊಳ್ಳೇಗಾಲ ಪಟ್ಟಣದ ಶಂಕನಪುರ ಬಡಾವಣೆಯಲ್ಲಿರುವ ವಿಸ್ಡಮ್ ಖಾಸಗಿ ವಿದ್ಯಾಸಂಸ್ಥೆಯಲ್ಲಿ ಸ್ಥಳೀಯ ಶಂಕನಪುರ ಗ್ರಾಮದ ಮುಖಂಡರು ಮತ್ತು ಪಟ್ಟಣದ ಜನತೆಯ ಸಹಕಾರದೊಂದಿಗೆ ನಡೆಯುತ್ತಿದ್ದ ವ್ಯಕ್ತಿತ್ವ ವಿಕಸನ ಶಿಬಿರವು ನಿರಂತರವಾಗಿ ನಡೆಯುತ್ತಿದೆ ಎಂದು ರಾಷ್ಟ್ರೀಯ ಸ್ವಯಂಸೇವಕ ಸಂಘದ ಸಂಘಚಾಲಕರಾದ ಕೆ.ವಿ. ರಾಜಣ್ಣ ತಿಳಿಸಿದ್ದಾರೆ.

ಕೊಳ್ಳೇಗಾಲದಲ್ಲಿ ನಡೆಯುತ್ತಿದ್ದ ಆರೆಸ್‌ಎಸ್ ಶಿಬಿರಕ್ಕೆ ಕೆಲವು ಸಂಘಟನೆ ಕಾರ್ಯಕರ್ತರು ಮತ್ತು ಕಿಡಿಗೇಡಿಗಳು ಶಿಬಿರದ ಒಳಗೆ ಬಂದು ಶಿಬಿರವನ್ನು ನಡೆಸಲು ಅವಕಾಶ ಕೊಡಬಾರದು ಎಂದು ಧಮಕಿ ಹಾಕಿದ್ದರು. ಶಾಲೆಯ ಸಿಬ್ಬಂದಿ ಮತ್ತು ಆಡಳಿತ ಮಂಡಳಿಯವರ ಮೇಲೆ ಗಲಾಟೆ ಮಾಡಿದ್ದರು. ಶಿಬಿರವನ್ನು ನಿಲ್ಲಿಸಲು ಕೊಳ್ಳೇಗಾಲದ ಬಿಇಓ ರವರಿಂದಲೂ ಶಾಲೆಗೆ ನೋಟಿಸ್ ಕೊಡಿಸುವುದರ ಮೂಲಕ ತೊಂದರೆ ಮಾಡಿದ್ದರು. ಆದರೆ ಇದ್ಯಾವುದಕ್ಕೆ ಸೊಪ್ಪು ಕೊಡದೇ ಆರಾರೆಸ್ ಶಿಬಿರ ನಡೆಯುತ್ತಿದೆ ಕೊಳ್ಳೇಗಾಲ ನಗರದ ಪೊಲೀಸ್ ಇನ್ಸ್‌ಪೆಕ್ಟರ್ ಅವರು ತಮ್ಮ ಸಿಬ್ಬಂದಿಗಳೊಡನೆ ಶಿಬಿರಕ್ಕೆ ಬಂದು ಸ್ಥಳದಿಂದ ಕಿಡಿಗೇಡಿಗಳನ್ನು ಹೊರಗೆ ಕಳುಹಿಸಿ ಶಿಬಿರಕ್ಕೆ ರಕ್ಷಣೆ ನೀಡಿದ್ದಾರೆ. ರಾಷ್ಟ್ರೀಯ ಸ್ವಯಂಸೇವಕ ಸಂಘವು ಕಳೆದ ನೂರು ವರ್ಷಗಳಿಂದ ಸರ್ಕಾರದ ಕಾನೂನು ಮತ್ತು ಸಂವಿಧಾನದ ನಿಯಮಗಳನ್ನು ಪಾಲಿಸುತ್ತಾ ಸಮಾಜದ ಸಹಕಾರದೊಂದಿಗೆ ದೇಶಾದ್ಯಂತ ಗೌರವದಿಂದ ತನ್ನ ಚಟುವಟಿಕೆಯನ್ನು ನಡೆಸಿಕೊಂಡು ಬಂದಿದೆ. ಈ ಪ್ರಕರಣದಲ್ಲೂ ಸರ್ಕಾರ ಮತ್ತು ಇಲಾಖೆಯ ಕಾನೂನು ನಿಯಮಗಳನ್ನು ಗೌರವಿಸುವುದರೊಂದಿಗೆ ಸದರಿ ಶಾಲೆಯ ಆಡಳಿತದ ಚಟುವಟಿಕೆಗೆ ಕಿಡಿಗೇಡಿಗಳಿಂದ ತೊಂದರೆ ಆಗಬಾರದು ಮತ್ತು ಕೆಟ್ಟ ಹೆಸರು ಬರಬಾರದೆಂದು ನಾವು ನಮ್ಮ ಶಿಬಿರವನ್ನು ಕೊಳ್ಳೇಗಾಲದ ನಗರದ ಪೀಸ್ ಪಾರ್ಕ ರಸ್ತೆಯ ಕನ್ನಿಕಾ ಪರಮೇಶ್ವರಿ ದೇವಾಲಯದ ಹತ್ತಿರವಿರುವ 'ಅಮರಾಲಯ ಸೇವಾಧಾಮ' ಕೇಂದ್ರಕ್ಕೆ ಸ್ಥಳಾಂತರ ಮಾಡಿ ಮುಂದುವರಿಸುತ್ತಿದ್ದೇವೆ. ನಾಳೆ ಭಾನುವಾರ ಮಧ್ಯಾಹ್ನ ಸಮಾರೋಪ ಸಮಾರಂಭ ನಡೆಯಲಿದೆ. ಕೆಲವು ಪತ್ರಿಕೆಗಳಲ್ಲಿ ಆರ್‌ಎಸ್‌ಎಸ್ ಶಿಬಿರವು ನಿಂತಿದೆ ಎಂದು ಸುಳ್ಳು ಸುದ್ದಿ ವರದಿಯಾಗಿದ್ದು ಇದು ಸರಿಯಲ್ಲ ಎಂದು ಆರೆಸ್‌ಎಸ್ ಸಂಘ ಚಾಲಕರಾದ ಕೆ.ವಿ.ರಾಜಣ್ಣ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



## ಸಂಕ್ಷಿಪ್ತ ಸುದ್ದಿ

### ಮಂಡ್ಯದಲ್ಲಿ ಮನೆಗೊಂದು ಗ್ರಂಥಾಲಯ ಅನುಷ್ಠಾನ ಸಮಾರಂಭ ಮೇ 13ಕ್ಕೆ

**ಮಂಡ್ಯ:** ಜನರಲ್ಲಿ ಪುಸ್ತಕಗಳ ಓದಿನ ಲಾಭದ ಅರಿವು ಮೂಡಿಸಲು ಹಾಗೂ ಪುಸ್ತಕ ಸಂಸ್ಕೃತಿ ಹರಡಲು ಕನ್ನಡ ಪುಸ್ತಕ ಪ್ರಾಧಿಕಾರ ನಗರದ ಶಂಕರನಗರದ ಚಂದಗಾಲು ಲೇಔಟ್ ನಲ್ಲಿ ಮೇ 13ರಂದು ಮನೆಗೊಂದು ಗ್ರಂಥಾಲಯ ಅನುಷ್ಠಾನ ಸಮಾರಂಭ ಆಯೋಜಿಸಿದೆ.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಡಿ ಕನ್ನಡ ಪುಸ್ತಕ ಪ್ರಾಧಿಕಾರ ಜಿಲ್ಲಾ ಜಾಗೃತ ಸಮಿತಿ ಆಯೋಜಿಸಿರುವ ಈ ಕಾರ್ಯಕ್ರಮವು ಲೇಖಕ, ಹಿರಿಯ ಪತ್ರಕರ್ತ ಚಂದ್ರಶೇಖರ ದ.ಕೋ.ಹಳ್ಳಿ ಅವರ ನಿವಾಸದಲ್ಲಿ ನಡೆಯಲಿದೆ. ಅಂದು ಸಂಜೆ 5 ಗಂಟೆಗೆ ಕನ್ನಡ ಪುಸ್ತಕ ಪ್ರಾಧಿಕಾರದ ಅಧ್ಯಕ್ಷ ಡಾ.ಮಾನಸ ಅವರು ಕಾರ್ಯಕ್ರಮ ಉದ್ಘಾಟಿಸುವರು.

ಜಿಲ್ಲಾ ಜಾಗೃತ ಸಮಿತಿ ಸಂಚಾಲಕ ಕಾರಸವಾಡಿ ಮಹದೇವ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಲೇಖಕಿ ಹೆಚ್.ಆರ್.ಕನ್ನಿಕ, ಶಿಕ್ಷಕ ಕೊತ್ತತ್ತಿ ರಾಜು ಭಾಗವಹಿಸುವರು ಎಂದು ಪ್ರಾಧಿಕಾರದ ಆಡಳಿತಾಧಿಕಾರಿ ಕೆ.ಬಿ.ಕಿರಣ್ ಸಿಂಗ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕನ್ನಡ ಪುಸ್ತಕ ಪ್ರಾಧಿಕಾರದ ಮಂಡ್ಯ ಜಿಲ್ಲಾ ಜಾಗೃತ ಸಮಿತಿಯ ಸದಸ್ಯರಾದ ಡಾ. ಎಂ.ಕೆಂಪಮ್ಮ, ಮಂಜು ಮುತ್ತೇಗೆರೆ, ಡಾ. ಶುಭಶ್ರೀ ಪ್ರಸಾದ್, ಚಂದ್ರಶೇಖರ ದ.ಕೋ ಹಳ್ಳಿ, ಮಂಚಶೆಟ್ಟಿ ಎಂ, ಉಮೇಶ ದಡಮಹಳ್ಳಿ, ಅನಿಲ್‌ಬಾಬು, ಶಿವಕುಮಾರ್ ಆರಾಧ್ಯ, ದೇವರಾಜು ಎಸ್. ಪಂಡಿತ್, ವಾಸು, ಕುಮಾರ್, ಜಿ.ವಿ. ದೇವರಾಜು, ಅನಿಲ್ ಕುಮಾರ್, ಸದ್ದಾಂ ತಗ್ಗಹಳ್ಳಿ ಹಾಗೂ ಪುಸ್ತಕ ಪ್ರೇಮಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

### ಬಹಿರಂಗ ಹರಾಜು

**ಮಂಡ್ಯ:** ಮಂಡ್ಯ ಜಿಲ್ಲೆಯ ವ್ಯಾಪ್ತಿಯಲ್ಲಿ ದಾಖಲಾದ ವಿವಿಧ ಅಬಕಾರಿ ಪ್ರಕರಣಗಳಲ್ಲಿ ಜಪ್ತುಪಡಿಸಿಕೊಂಡು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡಿರುವ ಎಲ್ಲಾ ತಾಲ್ಲೂಕಿನ ವಿವಿಧ ಮಾದರಿಯ ವಾಹನಗಳನ್ನು ಆಯಾಯ ವಲಯ ಕಛೇರಿಯ ಆವರಣದಲ್ಲಿ ಟೆಂಡರ್ ಕಂ ಬಹಿರಂಗ ಹರಾಜು ಮಾಡಲಾಗುವುದು.

ಸದರಿ ವಾಹನಗಳು ಹೇಗಿದೆಯೋ ಯಥಾಸ್ಥಿತಿಯಲ್ಲಿ ಹಾಗೆ ಷರತ್ತಿಗೊಳಪಟ್ಟು ಪ್ರಕಟಣೆಯನ್ನು ಹೊರಡಿಸಲಾಗಿದೆ.

ಆಸಕ್ತಿಯುಳ್ಳ ಬಿಡ್ಡುದಾರರು ಮೇ 25 ರಂದು ಬೆಳಿಗ್ಗೆ 11. 00 ಗಂಟೆಗೆ ಮಂಡ್ಯ ವಲಯ, ಮೇ 26ರಂದು ಬೆಳಿಗ್ಗೆ 11.00 ಗಂಟೆಗೆ ಮದ್ದೂರು ವಲಯ ಹಾಗೂ ಅದೇ ದಿನ ಮಧ್ಯಾಹ್ನ 3.00 ಗಂಟೆಗೆ ಮಳವಳ್ಳಿ ವಲಯ, ಮೇ 27ರಂದು ಬೆಳಿಗ್ಗೆ 11.00 ಗಂಟೆಗೆ ಶ್ರೀರಂಗಪಟ್ಟಣ ವಲಯ, ಮೇ 29ರಂದು ಬೆಳಗ್ಗೆ 11.00 ಗಂಟೆಗೆ ನಾಗಮಂಗಲ ವಲಯ ಹಾಗೂ ಅದೇ ದಿನ ಮಧ್ಯಾಹ್ನ 3:00 ಗಂಟೆಗೆ ಕೆ.ಆರ್ ಪೇಟೆ ವಲಯ ಇಲ್ಲಿ ನಿಗದಿತ ದಿನಾಂಕ ಮತ್ತು ಸಮಯದೊಳಗೆ ಟೆಂಡರ್ ಕಂ ಬಹಿರಂಗ ಹರಾಜಿನಲ್ಲಿ ಪಾಲ್ಗೊಳ್ಳಬಹುದು.

ಬಹಿರಂಗ ಹರಾಜಿನಲ್ಲಿ ಭಾಗವಹಿಸಲು ಇಚ್ಛಿಸುವ ಸಾರ್ವಜನಿಕರು ವಾಹನ ಇರುವ ಆಯಾಯ ವಲಯ ಕಛೇರಿಗಳಲ್ಲಿ ವಾಹನಗಳು ಇರುವ ಸ್ಥಳದಲ್ಲಿ ಕಛೇರಿ ಸಮಯದಲ್ಲಿ ವೀಕ್ಷಿಸಬಹುದಾಗಿದೆ.

ಹರಾಜು ನಿರ್ವಹಣಾಧಿಕಾರಿಯಾಗಿ ಸಂಬಂಧಪಟ್ಟ ಉಪವಿಭಾಗದ ಅಬಕಾರಿ ಉಪ ಅಧೀಕ್ಷಕರುಗಳನ್ನು ನಿಯೋಜಿಸಿದೆ. ಸಂಬಂಧಪಟ್ಟ ವಲಯ ಕಛೇರಿಯ ಅಬಕಾರಿ ನಿರೀಕ್ಷಕರು ಹಾಗೂ ಅಬಕಾರಿ ಉಪ ನಿರೀಕ್ಷಕರುಗಳು ತಮ್ಮ ಸಿಬ್ಬಂದಿಯೊಡನೆ ಹರಾಜು ಕಾರ್ಯ ನಿರ್ವಹಿಸಲು ಆದೇಶಿಸಲಾಗಿದೆ ಎಂದು ಮಂಡ್ಯ ಜಿಲ್ಲೆಯ ಡೆಪ್ಯೂಟಿ ಕಮಿಷನರ್ ಆಫ್ ಎಕ್ಸೈಸ್ ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಕಚೇರಿ ದೂ.ಸಂ.08232-220313 ಮತ್ತು 223353 ಅನ್ನು ಸಂಪರ್ಕಿಸಬಹುದಾಗಿದೆ.

### ಕಾಣೆಯಾದವರ ಪತ್ತೆಗಾಗಿ

**ಮಂಡ್ಯ:** ಮಂಡ್ಯ ತಾಲ್ಲೂಕಿನ ತಿಮ್ಮನಹೊಸರು ಗ್ರಾಮದ ಕೃಷ್ಣೇಗೌಡ (58) ಎಂಬುವವರು ಕಾಣೆಯಾಗಿದ್ದಾರೆ ಎಂದು ಮಂಡ್ಯ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ.

ಕಾಣೆಯಾದ ವ್ಯಕ್ತಿಯು 5 ಅಡಿ ಎತ್ತರ,ಗೋಧಿ ಮೈ ಬಣ್ಣ, ಸಾಧಾರಣ ಮೈಕಟ್ಟು, ಆಕಾಶ್ ಬಣ್ಣದ ಶರ್ಟ್ ಕಪ್ಪು ಬಣ್ಣದ ನಿಕ್ಕರ್ ಅನ್ನು ಧರಿಸಿರುತ್ತಾರೆ.

ವ್ಯಕ್ತಿಯ ಸುಳಿವು ಸಿಕ್ಕಲ್ಲಿ ದೂ.ಸಂ: 9480804847 9480804808, 948080480800 ಅನ್ನು ಸಂಪರ್ಕಿಸಬಹುದು ಎಂದು ಗ್ರಾಮಾಂತರ ಪೊಲೀಸ್ ಠಾಣೆಯ ಸಬ್ ಇನ್ಸ್ ಪೆಕ್ಟರ್ ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಕಾಲ ಯೋಜನೆಯಡಿ ಸ್ವೀಕರಿಸಿದ ಎಲ್ಲಾ ಅರ್ಜಿಗಳನ್ನು ನಿಗದಿತ ಅವಧಿಯೊಳಗೆ ಇತ್ಯರ್ಥಗೊಳಿಸಿ

# ಜಿಲ್ಲೆಯಲ್ಲಿ ಕುಡಿಯುವ ನೀರಿಗೆ ತೊಂದರೆಯಾಗದಂತೆ ಕ್ರಮ ವಹಿಸಿ: ಮೀನಾ

**ಮಂಡ್ಯ:** ಬೇಸಿಗೆಯ ಅವಧಿಯಲ್ಲಿ ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ತಲೆದೋರದಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕು ಹಾಗೂ ಸಕಾಲ ಯೋಜನೆಯಡಿ ಸ್ವೀಕರಿಸಿದ ಎಲ್ಲಾ ಅರ್ಜಿಗಳನ್ನು ನಿಗದಿತ ಅವಧಿಯೊಳಗೆ ಇತ್ಯರ್ಥಗೊಳಿಸಬೇಕು ಎಂದು *ಮಂಡ್ಯ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಪ್ರಧಾನ ಕಾರ್ಯದರ್ಶಿ ಗಳಾದ ಮನೋಜ್ ಕುಮಾರ್ ಮೀನಾ ಅವರು ತಿಳಿಸಿದರು.

ಮಂಗಳವಾರ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಪ್ರಗತಿ ಪರಿಶೀಲನೆ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಜಿಲ್ಲೆಯಲ್ಲಿ ಸಕಾಲ ಯೋಜನೆಯಡಿ ಸ್ವೀಕರಿಸಿದ ಎಲ್ಲಾ ಅರ್ಜಿಗಳನ್ನು ನಿಗದಿತ ಅವಧಿಯೊಳಗೆ ಇತ್ಯರ್ಥಗೊಳಿಸಿ ಸಾರ್ವಜನಿಕರಿಗೆ ಸಮರ್ಪಕವಾಗಿ ಸಕಾಲ




ಯೋಜನೆಯ ಸೇವೆಗಳು ಲಭ್ಯವಾಗುವಂತೆ ನೋಡಿಕೊಳ್ಳಬೇಕು ಎಂದು ಅವರು ತಿಳಿಸಿದರು.

ಬೇಸಿಗೆಯ ಸಂದರ್ಭದಲ್ಲಿ ಕುಡಿಯುವ ನೀರಿನ ಪೂರೈಕೆ, ಜಲಜೀವನ್ ಮಿಷನ್ (ಎಎಂ) ಯೋಜನೆಗಳ ಪ್ರಗತಿ ಮತ್ತು ಜಾನುವಾರುಗಳಿಗೆ ಮೇವಿನ ಲಭ್ಯತೆ ಕುರಿತು ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಚರ್ಚೆ ನಡೆಸಿದರು.

ಜನತೆಯ ಸಮಸ್ಯೆಗಳಿಗೆ ಸ್ಪಂದಿಸಬೇಕು. ಸಾರ್ವಜನಿಕರ ಆರೋಗ್ಯ ಹಿತದೃಷ್ಟಿಯಿಂದ ಮುಂಜಾಗ್ರತೆ ಕ್ರಮವಾಗಿ ಪರೀಕ್ಷೆಗೊಳಪಡಿಸಿಯೇ ಕುಡಿಯುವ ನೀರು ಪೂರೈಸಲು ಕ್ರಮ ವಹಿಸಬೇಕು ಎಂದರು. ತೀವ್ರ ಸಮಸ್ಯೆ ಇರುವ ಗ್ರಾಮಗಳಿಗೆ ಆದ್ಯತೆ ಮೇರೆಗೆ ಟ್ಯಾಂಕರ್ ಮೂಲಕ ನೀರು ಒದಗಿಸಲು ಸೂಚಿಸಿದರು.

ಸಾಲಬಾಧೆ ಅಥವಾ ಕೃಷಿ ಸಂಕಷ್ಟದಿಂದ ಆತ್ಮಹತ್ಯೆ ಮಾಡಿಕೊಂಡ ರೈತರ ಕುಟುಂಬಗಳಿಗೆ ಪರಿಹಾರ ನೀಡಬೇಕು. ಸಾಮಾಜಿಕ ಭದ್ರತಾ ಯೋಜನೆಯಡಿ ಅರ್ಹ ಫಲಾನುಭವಿಗಳಿಗೆ ವಿವಿಧ ಮಾಸಾಶನವನ್ನು ನೀಡುವಂತೆ ಸಭೆಯಲ್ಲಿ ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳಾದ ಡಾ ಕುಮಾರ ಅವರು ಮಾತನಾಡಿ

ಜಿಲ್ಲೆಯ ಗ್ರಾಮಾಂತರ ಪ್ರದೇಶಗಳಲ್ಲಿ ಒಟ್ಟು 289 ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗಬಹುದೆಂದು ಅಂದಾಜಿಸಲಾಗಿದ್ದು, ಈಗಾಗಲೇ 15 ಗ್ರಾಮಗಳಲ್ಲಿ ಖಾಸಗಿ ಕೊಳವೆಬಾವಿಗಳ ಮೂಲಕ ಕುಡಿಯುವ ನೀರು ಸರಬರಾಜು ಮಾಡುವ ವ್ಯವಸ್ಥೆ ಕಲ್ಪಿಸಲಾಗಿದೆ. ಉಳಿದ ಗ್ರಾಮಗಳಲ್ಲಿಯೂ ಅಗತ್ಯವಿರುವ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಅವರು ತಿಳಿಸಿದರು.

ಕೊಳವೆಬಾವಿಗಳಲ್ಲಿ ಇಳುವರಿ ಕಡಿಮೆಯಾದ ತಕ್ಷಣವೇ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಅಧಿಕಾರಿಗಳಿಗೆ ವಿಶೇಷ ಸೂಚನೆ ನೀಡಲಾಗಿದೆ ಹಾಗೂ ಅದರಂತೆ ಕೊಳವೆಬಾವಿಗಳನ್ನು ಮರು ಆಳಗೊಳಿಸುವುದು, ಹೆಚ್ಚುವರಿ ಪೈಪ್ ಅಳವಡಿಸುವುದು, ಅಗತ್ಯವಿರುವ ಕಡೆಗಳಲ್ಲಿ ವಿದ್ಯುತ್ ಸಂಪರ್ಕ ಕಲ್ಪಿಸುವ ಬಗ್ಗೆ ಅಗತ್ಯ ಕ್ರಮವಹಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳು ಸಭೆಯಲ್ಲಿ ಮಾಹಿತಿ ನೀಡಿದರು.

ಜನಗಣತಿ ಕಾರ್ಯ ಜಿಲ್ಲೆಯಲ್ಲಿ ಉತ್ತಮ ಪ್ರಗತಿಯಲ್ಲಿ ಇದೆ ಎಂದು ಅವರು ತಿಳಿಸಿದರು.

ಅಪರ ಜಿಲ್ಲಾಧಿಕಾರಿ ಶಿವನಂದಾಮೂರ್ತಿ, ಉಪ ವಿಭಾಗಾಧಿಕಾರಿಗಳಾದ ಶ್ರೀನಿವಾಸ್, ಶಿವಾಮೂರ್ತಿ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ಸಿಮ್ಸ್ ನಲ್ಲಿ ಗರ್ಭಿಣಿ ಸಾವು, ವೈದ್ಯರ ಅಮಾನತ್ತಿಗೆ ಆಗ್ರಹ




**ಚಾಮರಾಜನಗರ:** ನಗರದ ಸಿಮ್ಸ್ ಆಸ್ಪತ್ರೆಯ ತಾಯಿ ಮತ್ತು ಮಕ್ಕಳ ವಿಭಾಗದಲ್ಲಿ ಇತ್ತೀಚೆಗೆ ರೂಪಾ ಎಂಬ ಗರ್ಭಿಣಿ ಮೃತಪಟ್ಟ ಹಿನ್ನೆಲೆಯಲ್ಲಿ, ತಪ್ಪಿತಸ್ಥ ವೈದ್ಯರ ಅಮಾನತ್ತು ಮಾಡುವಂತೆ ಒತ್ತಾಯಿಸಿ ಮಂಗಳವಾರ ವಿವಿಧ ಸಂಘಟನೆಗಳ ವತಿಯಿಂದ ಪ್ರತಿಭಟನೆ ನಡೆಸಲಾಯಿತು.

ನಗರದ ಬಿ.ರಾಚಯ್ಯ ಜೋಡಿ ರಸ್ತೆಯಲ್ಲಿರುವ ಚಾಮರಾಜನಗರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಮತ್ತು ಬೋಧನಾ ಆಸ್ಪತ್ರೆಯ ತಾಯಿ ಮತ್ತು ಮಕ್ಕಳ ವಿಭಾಗದ ಮುಂಭಾಗ ಜಮಾಯಿಸಿದ ವಿವಿಧ ಸಂಘಟನೆಗಳ ಪ್ರತಿಭಟನಾಕಾರರು ಧರಣಿ ನಡೆಸಿದರು.

ಈ ಸಂದರ್ಭದಲ್ಲಿ ಬಿಎಸ್ಪಿ ಮುಖಂಡ ಹ.ರಾ. ಮಹೇಶ್ ಮಾತನಾಡಿ, ಅಗ್ರಹಾರ ಗ್ರಾಮದ ಸುರೇಶ್ ಅವರ ಪತ್ನಿ ರೂಪಾ ಅವರು ಕಳೆದ 9 ತಿಂಗಳಿಂದ ಸ್ತ್ರೀರೋಗ ತಜ್ಞೆ.ಡಾ.ಭಾರತಿ ಅವರ ಬಳಿ ಚಿಕಿತ್ಸೆ ಪಡೆದುಕೊಳ್ಳುತ್ತಿದ್ದರು. ಮೇ 3 ರಂದು ಹೆರಿಗೆ ನೋವು ಕಾಣಿಸಿಕೊಂಡ ಹಿನ್ನೆಲೆಯಲ್ಲಿ ತಾಯಿ-ಮಕ್ಕಳ ವಿಭಾಗಕ್ಕೆ ದಾಖಲಾಗಿದ್ದರು. ಈ ವೇಳೆ ಡಾ.ಭಾರತಿ ಅವರು ಗರ್ಭಿಣಿ ರೂಪಾ ಅವರಿಗೆ ಸೂಕ್ತ ಚಿಕಿತ್ಸೆ ನೀಡಿದೆ ನಿರ್ಲಕ್ಷ್ಯ ವಹಿಸಿದ ಕಾರಣದಿಂದ ರೂಪಾ ಅವರು ಮೃತಪಟ್ಟಿದ್ದಾರೆ ಎಂದು ದೂರಿದರು.

ಹೆರಿಗೆಯ ಸಂದರ್ಭದಲ್ಲಿ ಡಾ.ಕೌಶಲ್ಯ ಅವರು ರೂಪಾ ಅವರ ಕುಟುಂಬದವರಿಗೆ 5 ಸಾವಿರ ರೂ, ಹಣಕ್ಕೆ ಬೇಡಿಕೆ ಇಟ್ಟಿದ್ದಾರೆ. ಗರ್ಭಿಣಿಗೆ ಮಾನಸಿಕವಾಗಿಯೂ ಹಿಂಸೆಯನ್ನು ನೀಡಿದ್ದಾರೆ. ಅದಲ್ಲದೇ ವೈದ್ಯರು ಹೆರಿಗೆ ಸಂದರ್ಭದಲ್ಲಿ ಗರ್ಭಿಣಿಯ ಹೊಟ್ಟೆಯನ್ನು ಜೋರಾಗಿ ಒತ್ತಲಾಗಿ ರೂಪಾ ಅವರು ಮೃತಪಟ್ಟಿದ್ದಾರೆ. ಇದೊಂದು ಅಸಹಜವಾದ ಸಾವಾಗದೇ ಇದು ಗರ್ಭಿಣಿಯ ಕೊಲೆಯಾಗಿದೆ ಎಂದು ಆರೋಪಿಸಿದರು.

ಮುಖಂಡ ವಾಸು ಹೊಂಡರಬಾಳು ಮಾತನಾಡಿ, ಸಿಮ್ಸ್ ತಾಯಿ ಮತ್ತು ಮಕ್ಕಳ ವಿಭಾಗದಲ್ಲಿ ಇತ್ತೀಚೆಗೆ ಗರ್ಭಿಣಿ ಮತ್ತು ಮಗು ಮೃತಪಟ್ಟಿದ್ದರು. ಅದಾಗ್ಯೂ ಮತ್ತೊಂದು ಗರ್ಭಿಣಿ ಸಾವು ಸಂಭವಿಸಿರುವುದು ಅತ್ಯಂತ ದುರದೃಷ್ಟಕರವಾಗಿದೆ. ಈ ನಿಟ್ಟಿನಲ್ಲಿ ಸಂಬಂಧಪಟ್ಟ ವೈದ್ಯರ ಮೇಲೆ ಕಠಿಣ ಕ್ರಣವಾಗಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ವಿವಿಧ ಸಂಘಟನೆಗಳ ಹಲವಾರು ಮುಖಂಡರು ಭಾಗವಹಿಸಿದ್ದರು.

ತಪ್ಪಿತಸ್ಥರ ವಿರುದ್ಧ ಕ್ರಮ: ಪ್ರತಿಭಟನಾ ಸ್ಥಳಕ್ಕೆ ಆಗಮಿಸಿದ ಸಿಮ್ಸ್ ಡೀನ್ ಮತ್ತು ನಿರ್ದೇಶಕ ಡಾ.ಮಂಜುನಾಥ್ ಅವರು ಭೇಟಿನೀಡಿ ಪ್ರತಿಭಟನಾಕಾರರ ಹಕ್ಕೊತ್ತಾಯಗಳನ್ನು ಆಲಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಗರ್ಭಿಣಿ ರೂಪಾ ಅವರು ಮೃತಪಟ್ಟಿರುವುದು ವಿಷಾದನೀಯ. ಈ ಪ್ರಕರಣದ ಸಂಬಂಧ ಈಗಾಗಲೇ ವಿಚಾರಣೆ ನಡೆಸುತ್ತಿದ್ದು, ಮೈಸೂರು ವೈದ್ಯಕೀಯ ಕಾಲೇಜಿನ ವೈದ್ಯರ ನೇತೃತ್ವದಲ್ಲಿ ಮತ್ತೊಂದು ಉನ್ನತ ತನಿಖೆ ನಡೆಸಿ ಸರ್ಕಾರಕ್ಕೆ ವರದಿ ಸಲ್ಲಿಸಲಾಗುವುದು. ಈಗಾಗಲೇ ಡಾ.ಭಾರತಿ ಅವರು ಕಡ್ಡಾಯದ ರಜೆ ಮೇಲೆ ತೆರಳಿದ್ದು, ತನಿಖೆಯ ವರದಿ ಬಂದ ಬಳಿಕ ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

ಜಿಲ್ಲಾಧಿಕಾರಿ ಸ್ಥಳಕ್ಕೆ ಬರುವಂತೆ ಪಟ್ಟು: ಪ್ರತಿಭಟನಾ ಸ್ಥಳಕ್ಕೆ ಅಪರ ಜಿಲ್ಲಾಧಿಕಾರಿ ಟಿ.ಜವರೇಗೌಡ ಅವರು ಭೇಟಿ ನೀಡಿ ಸಮಸ್ಯೆ ಆಲಿಸಲು ಮುಂದಾದರು. ಈ ವೇಳೆ ಜಿಲ್ಲಾಧಿಕಾರಿ ಶ್ರೀ ರೂಪಾ ಅವರು ಸ್ಥಳಕ್ಕೆ ಭೇಟಿ ನೀಡುವಂತೆ ಪ್ರತಿಭಟನಾಕಾರರು ಪಟ್ಟು ಹಿಡಿದರು. ಬಳಿಕ ಪ್ರತಿಭಟನಾ ಸ್ಥಳಕ್ಕೆ ಆಗಮಿಸಿದ ಜಿಲ್ಲಾಧಿಕಾರಿ ಶ್ರೀ ರೂಪಾ ಅವರಿಗೆ ಮೃತ ರೂಪಾ ಅವರ ತಾಯಿ ಮನವಿ ಪತ್ರವನ್ನು ಸಲ್ಲಿಸಿದರು. ನಂತರ ಜಿಲ್ಲಾಧಿಕಾರಿ ಶ್ರೀ ರೂಪಾ ಮಾತನಾಡಿ, ಪ್ರಕರಣದ ಭಾಗವಾಗಿರುವ ಮೂವರು ವೈದ್ಯರನ್ನು ಕಡ್ಡಾಯ ರಜೆಯ ಮೇಲೆ ಕಳುಹಿಸಲಾಗಿದೆ. ಈ ಪ್ರಕರಣದ ಸಂಬಂಧ ಉನ್ನತ ಮಟ್ಟದ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕ್ರಮ ಜರುಗಿಸಲಾಗುವುದು ಎಂದು ಭರವಸೆ ನೀಡಿದರು.

## ದಾದಿಯರು ತಮ್ಮ ಸೇವೆಯಲ್ಲೇ ಸಾರ್ಥಕತೆ ಕಂಡವರು: ಶಾಸಕ



**ಹಾಸನ:** ಪ್ರತಿದಿನ ತಮ್ಮ ಸೇವೆಯಲ್ಲಿ ಸಾರ್ಥಕತೆಯನ್ನು ಕಾಣುತ್ತರುವ ದಾದಿಯರ (ಶುಶ್ರೂಷಕರು) ಸೇವೆ ಅಪಾರ, ಇವರ ಸೇವೆಗೆ ಬೆಲೆ ಕಟ್ಟಲು ಸಾಧ್ಯವಿಲ್ಲ ಎಂದು ಶಾಸಕರು ಹಾಗೂ ಸಂಜೀವಿನಿ ಸಹಕಾರ ಆಸ್ಪತ್ರೆಯ ಅಧ್ಯಕ್ಷ ಹೆಚ್.ಪಿ ಸ್ವರೂಪ್ ಪ್ರಕಾಶ್ ಶ್ಲಾಘಿಸಿದರು.

ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ., ಬೆಂಗಳೂರು, ಹಾಸನ ಜಿಲ್ಲಾ ಸಹಕಾರ ಒಕ್ಕೂಟ, ಸಂಜೀವಿನಿ ಸಹಕಾರಿ ಆಸ್ಪತ್ರೆ ಹಾಗೂ ವೈದ್ಯಕೀಯ ಶಿಕ್ಷಣ ಮತ್ತು ಸಂಶೋಧನಾ ಸಂಸ್ಥೆ ನಿ., ಹಾಸನ ಮತ್ತು ಸಹಕಾರ ಇಲಾಖೆ ಸಂಯುಕ್ತಾಶ್ರಯದಲ್ಲಿ ಸಹಕಾರ ಆಸ್ಪತ್ರೆಯ ಸಿಬ್ಬಂದಿಗಳಿಗೆ ಇಂದು ಏರ್ಪಡಿಸಿದ್ದ ರಾಜ್ಯ ಮಟ್ಟದ ತರಭೇತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸಹಕಾರ ಕ್ಷೇತ್ರದಲ್ಲಿ ಸಹಕಾರ ತತ್ವಗಳಿಗೆ ಅನುಗುಣವಾಗಿ ಇಡೀ ರಾಜ್ಯದಲ್ಲಿರುವ ಎರಡು ಸಹಕಾರ ಆಸ್ಪತ್ರೆಗಳಲ್ಲಿ ನಮ್ಮ ಸಂಜೀವಿನಿ ಸಹಕಾರಿ ಆಸ್ಪತ್ರೆಯು ಅತ್ಯುತ್ತಮವಾಗಿ ಕಾರ್ಯನಿರ್ವಹಿಸುತ್ತಿರುವುದು ಶ್ಲಾಘನೀಯ. ಇದಕ್ಕೆ ಕಾರಣ ಕರ್ತರು ಇಲ್ಲಿನ ಸಿಬ್ಬಂದಿಗಳು, ವೈದ್ಯರು, ಆಡಳಿತ ಮಂಡಳಿಯಾಗಿದೆ. ಇಂದು (ಮೇ 12) ಅಂತರಾಷ್ಟ್ರೀಯ ದಾದಿಯರ ದಿನವಾಗಿದ್ದು, ಆಸ್ಪತ್ರೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲ ಶುಶೂಷಕರು, ವೈದ್ಯರಿಗೆ ಅಂತರಾಷ್ಟ್ರೀಯ ದಾದಿಯರ ದಿನದ ಶುಭಾಷಯಗಳನ್ನು ಕೋರಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಸಹಕಾರ ಒಕ್ಕೂಟ ಅಧ್ಯಕ್ಷ ಎಸ್. ಎನ್. ಪ್ರಕಾಶ್ ಮಾತಮಾಡಿ, ಹಾಸನ ಜಿಲ್ಲೆಯಲ್ಲಿ ಸುಮಾರು 30 ರಿಂದ 35 ರೀತಿಯಾದ 2000 ಸಹಕಾರ ಸಂಘಗಳಿದ್ದು, ಅದರಲ್ಲಿ ನಮ್ಮ ಜಿಲ್ಲೆಯ ಸಂಜೀವಿನಿ ಸಹಕಾರ ಆಸ್ಪತ್ರೆಯು ರಾಜ್ಯದಲ್ಲಿಯೇ ಹೆಸರುವಾಸಿಯಾಗಿದೆ. ಸಹಕಾರ ತತ್ವದಡಿಯಲ್ಲಿ ಕೆಲಸ ನಿರ್ವಹಿಸುತ್ತಿರುವ ಈ ಆಸ್ಪತೆಯು ಬಡವರಿಗೆ ಕೂಲಿ ಕಾರ್ಮಿಕರಿಗೆ, ಸಹಕಾರಿಗಳಿಗೆ ಉತ್ತಮವಾದ ಅತಿ ಕಡಿಮೆ ದರದಲ್ಲಿ ಸೇವೆಯನ್ನು ನೀಡುತ್ತಿದೆ. ಇಂತಹ ಆಸ್ಪತ್ರೆಯ ಸಿಬ್ಬಂದಿಗಳಿಗೆ ಅಂತರಾಷ್ಟ್ರೀಯ ದಾದಿಯರ ದಿನವಾದ ಇಂದು ತರಭೇತಿ ನೀಡುತ್ತಿರುವುದು ನಮಗೆ ಸಂತೋಷವಾಗಿರುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಹಿರಿಯ ಸಹಕಾರಿಗಳು ಸಹಕಾರ ರತ್ನ ಪ್ರಶಸ್ತಿ ಪುರಸ್ಕೃತರಾದ ಆರ್.ಟಿ. ದ್ಯಾವೇಗೌಡ, ಜಿಲ್ಲಾ ಸಹಕಾರ ಕೇಂದ್ರಬ್ಯಾಂಕಿನ ನಿರ್ದೇಶಕ ಕೆ.ಎಸ್. ಮಂಜೇಗೌಡ ಒಕ್ಕೂಟದ ಉಪಾಧ್ಯಕ್ಷ ಡಿ.ಬಿ. ಸೋಮೇಗೌಡ, ನಿರ್ದೇಶಕರುಗಳಾದ ನಾಗರಾಜು, ಪುಟ್ಟಸ್ವಾಮಿಗೌಡ, ಪದ್ಮರಾಜು, ಪ್ರವೀಣ್, ಸೋಮಣ್ಣ, ಸಿದ್ದೇಶ್ರವರು ಹಾಗೂ ಸಂಜೀವಿನಿ ಸಹಕಾರ ಆಸ್ಪತ್ರೆಯ ಆಡಳಿತ ಮಂಡಳಿ ನಿರ್ದೇಶಕರುಗಳು ಹಾಜರಿದ್ದರು.

## ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಿಂದ ತಾಲ್ಲೂಕು ಕಚೇರಿಗೆ ಭೇಟಿ

**ಮಂಡ್ಯ:** ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ಮನೋಜ್ ಕುಮಾರ್ ಮೀನಾ ಅವರು ಜಿಲ್ಲಾಧಿಕಾರಿ ಡಾ ಕುಮಾರ ಅವರೊಂದಿಗೆ ಮಂಗಳವಾರ ಮಂಡ್ಯ ತಾಲ್ಲೂಕು ಕಚೇರಿಗೆ ಭೇಟಿ ನೀಡಿ, ಅಲ್ಲಿನ ಕಾರ್ಯವೈಖರಿ ಪರಿಶೀಲಿಸಿದರು.

ಸರ್ಕಾರದ ಯೋಜನೆಗಳ ಅನುಷ್ಠಾನ, ಸಾರ್ವಜನಿಕರ ಅಹವಾಲುಗಳ ವಿಚಾರಣೆ ಮತ್ತು ಕಚೇರಿಗಳ ಕಾರ್ಯನಿರ್ವಹಣೆಯನ್ನು ಪರಿಶೀಲನೆ ನಡೆಸಿದರು.

ಈ ಸಂದರ್ಭದಲ್ಲಿ ಮಳೆ ಮಾಪನ ಕೇಂದ್ರಗಳು ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿವೆಯೇ ಎಂದು ಪರಿಶೀಲನೆ ನಡೆಸದರು.

ಈ ಸಂದರ್ಭದಲ್ಲಿ ಮಂಡ್ಯ ಉಪ ವಿಭಾಗಧಿಕಾರಿ ಶಿವನಂದಾಮೂರ್ತಿ, ಮಂಡ್ಯ ತಹಶೀಲ್ದಾರ್ ಹಾಗೂ ಅಧಿಕಾರಿಗಳು ಉಪಸ್ಥಿತರಿದ್ದರು.





## ಹೇಮರೆಡ್ಡಿ ಮಲ್ಲಮ್ಮ ಜಯಂತಿ ಆಚರಣೆ

**ಮಂಡ್ಯ:** ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮಂಡ್ಯ ಇವರ ವತಿಯಿಂದ ಕಲಾಮಂದಿರದ ಆವರಣದಲ್ಲಿ ಸರಳವಾಗಿ ನಡೆದ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಜಯಂತಿ ರವರ ಕಾರ್ಯಕ್ರಮದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಡಾ. ಬಿ.ವಿ. ನಂದೀಶ, ಹಿರಿಯ ತತ್ವಪದ ಗಾಯಕ ಗೊರವಾಲೆ ರುದ್ರಪ್ಪ, ಇಲಾಖೆಯ ಕೆ.ಒ. ಓಬಳೇಶ, ಸದಾಶಿವಸ್ವಾಮಿ, ಆನಂದ ಡಿ., ಕಲಾವಿದರುಗಳಾದ ಸಂತೆಕಸಲಗೆರೆ ಬಸವರಾಜು, ಹನಿಯಂಬಾಡಿ ಶೇಖರ್, ತಡಗವಾಡಿ ನಾಗರಾಜು, ಸಬ್ಬನಹಳ್ಳಿ ರಾಜು ಹಾಜರಿದ್ದರು.

## ಜಿಂಕೆ ಮಾಂಸ ಮಾರಾಟ ಮಾಡಲು ಯತ್ನ: ಬಂಧನ

ಗುಂಡ್ಲುಪೇಟೆ ತಾಲ್ಲೂಕಿನ ಕೂತನೂರು ಗ್ರಾಮದಲ್ಲಿ ಜಿಂಕೆ ಮಾಂಸ ಮಾರಾಟ ಮಾಡಲು ಯತ್ನಿಸುತ್ತಿದ್ದ ವ್ಯಕ್ತಿಯೊಬ್ಬರನ್ನು ಗುಂಡ್ಲುಪೇಟೆ ಬಫರ್ ಜೋನ್ ವಲಯದ ಅರಣ್ಯಾಧಿಕಾರಿಗಳು ಬಂಧಿಸಿದ್ದಾರೆ.

ತಾಲ್ಲೂಕಿನ ಕೂತನೂರು ಗ್ರಾಮದ ಲಕ್ಷ್ಮಣ್(30) ಬಂಧಿತ. ಮಾಹಿತಿ ಅರಿತ ಪೊಲೀಸರು ಮನೆಯ ಪಕ್ಕದ ಹಿತ್ತಲಿನಲ್ಲಿ ಜಿಂಕೆ ಮಾಂಸವನ್ನು ಕತ್ತರಿಸಿ ಮಾರಾಟ ಮಾಡುತ್ತಿದ್ದಾಗ ಅರಣ್ಯಾಧಿಕಾರಿ ಶಿವಕುಮಾರ್ ನೇತೃತ್ವದ ತಂಡ ದಾಳಿ ನಡೆಸಿದೆ. ಈ ವೇಳೆ ಮಾಂಸದ ಜೊತೆಗೆ ಜಿಂಕೆಯ ತಲೆ, ಕಾಲುಗಳು ಸಿಕ್ಕಿವೆ.

ಪ್ರಕರಣ ದಾಖಲಿಸಿಕೊಂಡಿರುವ ಅರಣ್ಯಾಧಿಕಾರಿಗಳು ಮುಂದಿನ ಕ್ರಮ ಕೈಗೊಂಡಿದ್ದಾರೆ.



### ಹಿರಿಯ ಸಾಹಿತಿ ಗೊರೂರು ಅನಂತರಾಜು ಕೃತಿ ಲೋಕಾರ್ಪಣೆ

## ‘ಸಾಗುತಾ ಇದೆ ದೋಣಿ ನದಿಯ ನೀರನು ಸೀಳುತಾ’

**ಹಾಸನ:** ಕನ್ನಡ ಸಾಹಿತ್ಯ ವಿಶಿಷ್ಟ ಪರಂಪರೆಯನ್ನು ಹೊಂದಿದ್ದು, ಅದು ನಿತ್ಯ ನಿರಂತರವಾಗಿ ಬೆಳೆಯಬೇಕು. ಕನ್ನಡ ಭಾಷೆ ಹಾಗೂ ಸಾಹಿತ್ಯದ ಅಭಿವೃದ್ಧಿಗೆ ಸಾಹಿತಿಗಳು ಇನ್ನಷ್ಟು ತೊಡಗಿಸಿಕೊಳ್ಳಬೇಕು ಎಂದು ಉದಯರವಿ ಹೇಳಿದರು.



ನಗರದ ಕೃಷ್ಣ ಹೋಟೆಲ್‌ನಲ್ಲಿ ಕದಂಬ ಸೈನ್ಯ ಕನ್ನಡ ಸಂಘಟನೆ ವತಿಯಿಂದ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಹಿರಿಯ ಸಾಹಿತಿ ಗೊರೂರು ಅನಂತರಾಜು ಅವರ ಇತ್ತೀಚಿನ ಸಾಹಿತ್ಯ ಕೃತಿಗಳ ವಿಮರ್ಶಾ ಗ್ರಂಥ ‘ಸಾಗುತಾ ಇದೆ ದೋಣಿ ನದಿಯ ನೀರನು ಸೀಳುತಾ’ ಲೋಕಾರ್ಪಣೆಗೊಳಿಸಿ ಅವರು ಮಾತನಾಡಿದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತುಗಳು ಸಾಹಿತಿಗಳನ್ನುಗುರುತಿಸಿ ಪುಸ್ತಕ ಬಿಡುಗಡೆ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ಸಾಹಿತ್ಯ ವಲಯದ ಉಳಿವಿಗೆ ಕಾರ್ಯಪ್ರವೃತ್ತವಾಗಬೇಕು ಎಂದು ಅವರು ಅಭಿಪ್ರಾಯಪಟ್ಟರು.ಇದೇ ಸಂದರ್ಭದಲ್ಲಿ ರಮೇಶ್ ಸುರ್ವೆ ಅವರ ಸಾಹಿತ್ಯ ಮತ್ತು ಸಾಂಸ್ಕೃತಿಕ ಸೇವೆಯನ್ನು ಸ್ಮರಿಸಿ ಸನ್ಮಾನಿಸಲಾಯಿತು. ಬಳಿಕ ಮಾತನಾಡಿದ ಅವರು, ಹಾಸನ ಜಿಲ್ಲೆ ಸಾಹಿತ್ಯ ಕ್ಷೇತ್ರಕ್ಕೆ ಗಣನೀಯ ಕೊಡುಗೆ ನೀಡಿರುವ ನೆಲವಾಗಿದೆ ಎಂದು ಹೇಳಿದರು.

ಸಾಹಿತಿ ಗೊರೂರು ಅನಂತರಾಜು ಮಾತನಾಡಿ, ಲೋಕಾರ್ಪಣೆಗೊಂಡ ಕೃತಿಗೆ ರಮೇಶ್ ಸುರ್ವೆ ಅವರು ಬೆನ್ನುಡಿ ಬರೆದಿದ್ದು, ಉದಯರವಿ ಅವರಿಂದ ಲೋಕಾರ್ಪಣೆಗೊಂಡಿರುವುದು ಸಂತಸ ತಂದಿದೆ ಎಂದು ತಿಳಿಸಿದರು. ಎ.ಹೆಚ್. ಗಣೇಶ್ ಅಂಕಪುರ ಮಾತನಾಡಿ, ಸಾಹಿತ್ಯ ವಲಯದ ಬೆಳವಣಿಗೆಗೆ ಪ್ರತಿಯೊಬ್ಬರೂ ಅಳಿಲು ಸೇವೆ ಮಾಡುವ ಮನೋಭಾವ ಬೆಳೆಸಿಕೊಳ್ಳಬೇಕು ಎಂದರು.

ಆನಂದ ಪಟೇಲ್ ನೆಲ್ಲಿಗೆರೆ ಮಾತನಾಡಿ, ಪುಸ್ತಕಗಳನ್ನು ತೆರೆಯುವ ಮೂಲಕ ಜ್ಞಾನ ಭಂಡಾರ ತೆರೆದುಕೊಳ್ಳುತ್ತದೆ. ಸಾಹಿತ್ಯದ ಮೂಲಕ ಜೀವನದ ಮೌಲ್ಯಗಳ ಅರಿವು ಹೆಚ್ಚುತ್ತದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಕುಮಾರ್, ವಿಶ್ವಾಸ್ ಡಿ. ಗೌಡ, ಚಿದಾನಂದ ಕೆ.ಎನ್., ಶ್ರೀವಿಜಯಹಾಸನ್, ಹೆಚ್.ಜಿ.ಗಂಗಾಧರ್, ಯಾಕೂಬ್ ಹಾಗೂ ಜೆ.ಆರ್.ಶ್ರೀಕಾಂತ್ ಉಪಸ್ಥಿತರಿದ್ದರು.

## ಆರೋಗ್ಯ ಸೇವೆಯಲ್ಲಿ ನರ್ಸ್‌ಗಳ ಪಾತ್ರ ಅಮೂಲ್ಯ: ಡಾ. ದೇವಿಕಾ

**ಅಂತರರಾಷ್ಟ್ರೀಯ ನರ್ಸ್ ದಿನಾಚರಣೆ**

**ಕೆ.ಆರ್.ನಗರ:** ಆರೋಗ್ಯ ಕ್ಷೇತ್ರದಲ್ಲಿ ದಾದಿಯರ ಸೇವಾ ಕಾರ್ಯ ಅತ್ಯಮೂಲ್ಯವಾದದು ಎಂದು ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರದ ಅರವಳಿಕೆ ತಜ್ಞ ವೈದ್ಯೆ ಡಾ.ದೇವಿಕಾ ಹೇಳಿದರು.

ಅವರು ಸಾಲಿಗ್ರಾಮ ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಆಯೋಜಿಸಿದ್ದ ಅಂತರಾಷ್ಟ್ರೀಯ ದಾದಿಯರ ದಿನಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು.

ನಿಸ್ವಾರ್ಥ ಸೇವಾ ಮನೋಭಾವನೆಯಿಂದ ಪ್ರತಿನಿತ್ಯ ಆರೋಗ್ಯ ಕೇಂದ್ರಗಳಿಗೆ ಬರುವ ರೋಗಿಗಳ ಬಗ್ಗೆ ಹೆಚ್ಚಿನ ಕಾಳಜಿ ವಹಿಸಿ ಅವರ ಆರೋಗ್ಯ ರಕ್ಷಣೆ ಮಾಡುವಲ್ಲಿ ಪ್ರಮುಖ ಪಾತ್ರ ವಹಿಸುತ್ತಾ ಬರುತ್ತಿರುವ ದಾದಿಯರ ಸೇವೆಯು ನಿಜಕ್ಕೂ ಶ್ಲಾಘನೀಯವಾಗಿದೆ ಎಂದರು.

ಸರ್ಕಾರಿ ಹಾಗೂ ಖಾಸಗಿ ಆಸ್ಪತ್ರೆಗಳಲ್ಲಿ ಹಗಲು ರಾತ್ರಿ ಎನ್ನದೆ ಪ್ರತಿನಿತ್ಯ ಕಾರ್ಯ ನಿರ್ವಹಿಸುವ ಮೂಲಕ ಆರೋಗ್ಯ ಸೇವೆಯನ್ನು ಮಾಡಿಕೊಂಡು ಬರುತ್ತಿರುವ ದಾದಿಯರು ಮತ್ತು ಆರೋಗ್ಯ ಸಿಬ್ಬಂದಿಗಳ ಕರ್ತವ್ಯ ಅತ್ಯಂತ ಶ್ರೇಷ್ಠವಾದದು ಎಂದರು.


ಈ ಸಂದರ್ಭದಲ್ಲಿ ಆಧುನಿಕ ನರ್ಸಿಂಗ್ ನ ಸಂಸ್ಥಾಪಕಿ ಫ್ಲಾರೆನ್ಸ್ ನೈಟಿಂಗೇಲ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಗೌರವ ನಮನ ಸಲ್ಲಿಸಲಾಯಿತು.

ವಿಶ್ವದಾದಿಯರ ದಿನಾಚರಣೆ ಪ್ರಯುಕ್ತ ಆಸ್ಪತ್ರೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ದಾದಿಯರುಗಳನ್ನು ಡಾ.ದೇವಿಕ ಅವರು ಸನ್ಮಾನಿಸುವ ಮೂಲಕ ಗೌರವಿಸಿ ಸಿಹಿ ವಿತರಿಸಿ ಶುಭ ಹಾರೈಸಿದರು.




ಈ ಸಂದರ್ಭದಲ್ಲಿ ವೈದ್ಯರುಗಳಾದ ಡಾ.ಕೀರ್ತಿ, ಡಾ.ಮಮತಾ, ಡಾ.ವಸುದ, ಕರುನಾಡ ದೀಪ ಸೇವಾ ಟ್ರಸ್ಟ್ ಅಧ್ಯಕ್ಷ ಕೆ.ಟಿ.ಮೋಹನ್ ಕುಮಾರ್, ಸಿಬ್ಬಂದಿಗಳಾದ ಪ್ರದೀಪ್ ಕುಮಾರ್, ಅಶ್ವಿನಿ, ಪುಷ್ಪಲತಾ, ಸಬೀನಾ, ಲೀಲಾವತಿ, ನಾಜಿಮ ಕೌಸರ್, ನೇತ್ರಾವತಿ, ಕೆ.ಸಿ.ನವೀನ್, ಶಾರದಮ್ಮ, ಲಕ್ಷ್ಮಣ್, ಶಿವಕುಮಾರ್, ಕೆ.ಎಲ್.ಸಿದ್ದಲಿಂಗಪ್ಪ, ಶ್ರೀಮಂತ, ಮಧುಚಂದ್ರ, ಯಶವಂತ್, ವಿವೇಕಾನಂದ, ಶ್ರೀಕಾಂತ್, ರಾಜೀವ್, ಶೋಭಮ್ಮ, ದಾದಿಯರು, ಆಸ್ಪತ್ರೆ ನೌಕರರು ಹಾಗೂ ಸಿಬ್ಬಂದಿ ವರ್ಗದವರು ಇದ್ದರು.

# ಮಂಡ್ಯ ಜಿಲ್ಲಾ ಜೆಡಿಎಸ್ ಉಪಾಧ್ಯಕ್ಷರನ್ನಾಗಿ ಎಂ.ಆರ್.ಮನು ಆಯ್ಕೆ



**ಕೆ.ಆರ್.ಪೇಟೆ:** ತಾಲ್ಲೂಕಿನ ಮಡುವಿನಕೋಡಿ ಗ್ರಾಮದ ಜೆಡಿಎಸ್ ಮುಖಂಡರು ಹಾಗೂ ಉದ್ಯಮಿಗಳಾದ ಎಂ.ಆರ್.ಮನು ಅವರನ್ನು ಜಿಲ್ಲಾ ಜೆಡಿಎಸ್ ಉಪಾಧ್ಯಕ್ಷರನ್ನಾಗಿ ಆಯ್ಕೆ ಮಾಡಲಾಗಿದೆ ಎಂದು ಶಾಸಕ ಹೆಚ್.ಟಿ.ಮಂಜು ಅವರು ತಿಳಿಸಿದರು.

ಮಡುವಿನಕೋಡಿ ಗ್ರಾಮದಲ್ಲಿ ನಡೆದ ರಸ್ತೆ ಅಭಿವೃದ್ಧಿ ಕಾಮಗಾರಿಯ ಭೂಮಿ ಪೂಜೆ ಕಾರ್ಯಕ್ರಮದಲ್ಲಿ ಜಿಲ್ಲಾ ಜೆಡಿಎಸ್ ಉಪಾಧ್ಯಕ್ಷರಾಗಿ ನೇಮಕವಾಗಿರುವ ಬಗ್ಗೆ ನೇಮಕಾತಿ ಆದೇಶ ಪತ್ರವನ್ನು ಎಂ.ಆರ್.ಮನು ಅವರಿಗೆ ವಿತರಣೆ ಮಾಡಿ ಮಾತನಾಡಿದ ಶಾಸಕರು

ಎಂ.ಆರ್.ಮನು ಅವರ ನೇತೃತ್ವದಲ್ಲಿ ಇತ್ತೀಚೆಗೆ ಮಡುವಿನಕೋಡಿ ಗ್ರಾಮದಲ್ಲಿ ಯುವ ಜೆಡಿಎಸ್ ರಾಜ್ಯಾಧ್ಯಕ್ಷರಾದ ನಿಖಿಲ್ ಕುಮಾರಸ್ವಾಮಿ ಅವರ ನೇತೃತ್ವದಲ್ಲಿ ಹಾಗೂ ಶಾಸಕ ಹೆಚ್.ಟಿ.ಮಂಜು ಅವರ ಅಧ್ಯಕ್ಷತೆಯಲ್ಲಿ ನಡೆದ ಜೆಡಿಎಸ್ ಬೆಳ್ಳಿ ಹಬ್ಬದ ಯಶಸ್ಸಿಗೆ ಶ್ರಮಿಸಿದ್ದರು. ಎಂ.ಆರ್.ಮನು ಅವರ ಸಂಘಟನಾ ಶಕ್ತಿಯನ್ನು ಗಮನಿಸಿ ಮಂಡ್ಯ ಜಿಲ್ಲಾ ಜೆಡಿಎಸ್ ಉಪಾಧ್ಯಕ್ಷರನ್ನಾಗಿ ಜಿಲ್ಲಾಧ್ಯಕ್ಷರಾದ ಡಿ.ರಮೇಶ್ ಅವರು ನೇಮಕ ಮಾಡಿರುತ್ತಾರೆ.

ಎಂ.ಆರ್.ಮನು ಅವರು ತಮ್ಮ ಸ್ವಂತ ಖರ್ಚಿನಿಂದ ಮಡುವಿನಕೋಡಿ ಗ್ರಾಮದಲ್ಲಿ ಶುದ್ಧ ಕುಡಿಯುವ ನೀರಿನ ಘಟಕ ಆರಂಭಿಸಿ ಗ್ರಾಮದ ಜನತೆಗೆ ಶುದ್ಧ ಕುಡಿಯುವ ನೀರು ಸಿಗುವಂತೆ ಮಾಡಿದ್ದಾರೆ. ಇದಲ್ಲದೆ ಉಚಿತ ನೀರಿನ ಟ್ಯಾಂಕರ್ ಮೂಲಕ ಮನೆ ಮನೆಗೆ ಹಾಗೂ ಗ್ರಾಮದಲ್ಲಿ ನಡೆಯುವ ವಿವಿಧ ಕಾರ್ಯಕ್ರಮಗಳಿಗೆ ಉಚಿತವಾಗಿ ಟ್ಯಾಂಕರ್ ಮೂಲಕ ನೀರು ಪೂರೈಕೆ ಮಾಡುತ್ತಿದ್ದಾರೆ. ಇದಕ್ಕೂ ಮಾಜಿ ಸ್ಪೀಕರ್ ಕೃಷ್ಣ ರವರ ನೇತೃತ್ವದಲ್ಲಿ ತಾಲ್ಲೂಕಿನ ಪ್ರತಿಭಾವಂತ ಮಕ್ಕಳಿಗೆ ಉಚಿತ ನೋಟ್ ಬುಕ್ ವಿತರಣೆ ಹಾಗೂ ನಗದು ಪ್ರತಿಭಾ ಪುರಸ್ಕಾರ ಮಾಡಿದ್ದಾರೆ. ಉಚಿತ ಆರೋಗ್ಯ ತಪಾಸಣಾ ಶಿಬಿರ ಮಾಡಿ ಗ್ರಾಮದ ಆರೋಗ್ಯವಂತ ಸಮಾಜ ನಿರ್ಮಾಣಕ್ಕೆ ಕಳೆದ ಹತ್ತಾರು ವರ್ಷಗಳಿಂದ ಕೈಜೋಡಿಸಿರುತ್ತಾರೆ. ಇಂತಹ ಸಮಾಜಮುಖಿ ವ್ಯಕ್ತಿತ್ವದ ಎಂ.ಆರ್.ಮನು ಅವರು ನಮ್ಮ ಪಕ್ಷಕ್ಕೆ ಸೇರ್ಪಡೆಯಾಗಿ ಉತ್ತಮವಾಗಿ ಪಕ್ಷ ಸಂಘಟನೆ ಮಾಡುತ್ತಿದ್ದಾರೆ. ಈಗ ಜಿಲ್ಲಾ ಜೆಡಿಎಸ್ ಉಪಾಧ್ಯಕ್ಷರನ್ನಾಗಿ ನೇಮಕ ಮಾಡಲಾಗಿದ್ದು ಕೂಡಲೇ ಜವಾಬ್ದಾರಿ ವಹಿಸಿಕೊಂಡು ಜೆಡಿಎಸ್ ಪಕ್ಷವನ್ನು ಮತ್ತಷ್ಟು ಶಕ್ತಿಯುತವಾಗಿ ತಾಲ್ಲೂಕಿನಲ್ಲಿ ಹಾಗೂ ಜಿಲ್ಲಾದ್ಯಂತ ಸಂಘಟಿಸಲು ಶ್ರಮಿಸಬೇಕು ಎಂದು ಶಾಸಕ ಹೆಚ್.ಟಿ.ಮಂಜು ಅವರು ಸಲಹೆ ನೀಡಿದರು.

ನೂತನ ಜಿಲ್ಲಾ ಜೆಡಿಎಸ್ ಉಪಾಧ್ಯಕ್ಷ ಎಂ.ಆರ್.ಮನು ಮಾತಮಾಡಿ ನನ್ನನ್ನು ಜಿಲ್ಲಾ ಜೆಡಿಎಸ್ ಉಪಾಧ್ಯಕ್ಷ ಸ್ಥಾನಕ್ಕೆ ನೇಮಕಮಾಡಲು ಸಹಕಾರ ನೀಡಿದ ಶಾಸಕ ಹೆಚ್.ಟಿ.ಮಂಜಣ್ಣ ಹಾಗೂ ಜಿಲ್ಲಾ ಜೆಡಿಎಸ್ ಅಧ್ಯಕ್ಷರಾದ ಡಿ.ರಮೇಶ್, ತಾಲ್ಲೂಕು ಜೆಡಿಎಸ್ ಅಧ್ಯಕ್ಷರಾದ ಮಲ್ಲೇನಹಳ್ಳಿ ಮೋಹನ್ ಅವರಿಗೆ ಕೃತಜ್ಞತೆಗಳನ್ನು ಸಲ್ಲಿಸುತ್ತೇನೆ. ಪಕ್ಷವು ವಹಿಸಿರುವ ಜವಾಬ್ದಾರಿಯನ್ನು ಅರಿತು ಪಕ್ಷವನ್ನು ಸಂಘಟಿಸಲು ಪ್ರಾಮಾಣಿಕವಾದ ಪ್ರಯತ್ನ ಮಾಡುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ತಾಲೂಕು ಟಿಎಪಿಸಿಎಂ ಅಧ್ಯಕ್ಷ ಬಲದೇವ್, ಉಪಾಧ್ಯಕ್ಷ ಕಾಯಿ ಮಂಜೇಗೌಡ, ತಾಲೂಕು ಯುವ ಜೆಡಿಎಸ್ ಅಧ್ಯಕ್ಷ ಮಹಾದೇವೇಗೌಡ, ತಾಲೂಕು ಜೆಡಿಎಸ್ ಮಹಿಳಾ ಘಟಕದ ಕಾರ್ಯದರ್ಶಿ ರತಿ ಮಹಾದೇವ್, ಪಿ ಎಲ್ ಡಿ ಬ್ಯಾಂಕ್ ಮಾಜಿ ಅಧ್ಯಕ್ಷ ರಾಮಕೃಷ್ಣೇಗೌಡ, ಜೆಡಿಎಸ್ ಮುಖಂಡರಾದ ಮದ್ದಿಕ್ಯಾಚಮನಹಳ್ಳಿ ಸಂದೇಶ್, ನಾಟನಹಳ್ಳಿ ಸಾಗರ್, ಹೊಸಕೊಟೆ ಶಶಿಕುಮಾರ್, ರಾಜೇಶ್, ಕೊಮ್ಮೇನಹಳ್ಳಿ ನಾಗರಾಜು, ಆಡಿಟರ್ ಬಸವರಾಜು, ಇಂಜಿನಿಯರ್ ಚೇತನ್, ಶಾಸಕರ ಆಪ್ತ ಸಹಾಯಕ ಅರಳಕುಪ್ಪೆ ಪ್ರತಾಪ್ ಮತ್ತಿತರರು ಉಪಸ್ಥಿತರಿದ್ದರು.

# ಪ್ರಗತಿ ಶಾಲೆಯ ವಿದ್ಯಾರ್ಥಿಗಳಿಗೆ ರಾಷ್ಟ್ರೀಯ ಮಟ್ಟದ ಕರಾಟೆ ಪ್ರಶಸ್ತಿ

**ಕೆ. ಆರ್ .ಪೇಟೆ :** ಪಟ್ಟಣದ ಪ್ರಗತಿ ಶಾಲೆಯ ವಿದ್ಯಾರ್ಥಿಗಳು ತಮಿಳುನಾಡಿನ ಕೊಡೈಕೆನಾಲನಲ್ಲಿ ನಡೆದ ರಾಷ್ಟ್ರೀಯ ಮಟ್ಟದ ಕರಾಟೆ ಸ್ಪರ್ಧೆಯಲ್ಲಿ ಪ್ರಶಸ್ತಿ ಗಳಿಸಿದ್ದಾರೆ. ಲಿಯೋ ಸ್ಪೋರ್ಟ್ಸ್ ಕ್ಲಬ್ ಆಯೋಜಿಸಿದ್ದ 12ನೇ ಕೊಡೈ ಕಪ್ – 2026 ನೇ ಪ್ರಶಸ್ತಿಯನ್ನು ವಿದ್ಯಾರ್ಥಿಗಳು ಪಡೆದಿರುತ್ತಾರೆ. 11 ವರ್ಷದ ಕಟಾ ವಿಭಾಗದಲ್ಲಿ ಆರನೇ ತರಗತಿಯ ಧನ್ಯ ಪ್ರಥಮ ಬಹುಮಾನ ಪ್ರಶಸ್ತಿ ಪಡೆದಿರುತ್ತಾರೆ. 14 ವರ್ಷದ ಕಟಾ ವಿಭಾಗದಲ್ಲಿ 8ನೇ ತರಗತಿಯ ಮಂಗಳಗೌರಿ ಪ್ರಥಮ ಬಹುಮಾನ ಪಡೆದಿರುತ್ತಾರೆ. ಹಾಗೂ 12 ವರ್ಷದ ಕಟಾ ವಿಭಾಗದಲ್ಲಿ ಏಳನೇ ತರಗತಿಯ ತೇಜಸ್ ಪ್ರಥಮ ಸ್ಥಾನ ಪ್ರಶಸ್ತಿ ಪಡೆದಿರುತ್ತಾರೆ . ರಾಷ್ಟ್ರಮಟ್ಟದಲ್ಲಿ ಪ್ರಥಮ ಸ್ಥಾನದ ಪ್ರಶಸ್ತಿ ಪಡೆದ ವಿದ್ಯಾರ್ಥಿಗಳನ್ನು ಕರಾಟೆ ಶಿಕ್ಷಕ ಹೇಮಂತ್ ತರಬೇತಿ ನೀಡಿದ್ದರು. ಪ್ರಥಮ ಪ್ರಶಸ್ತಿ ಪಡೆದ ಹಾಗೂ ಜಿಲ್ಲೆ ಹಾಗೂ ರಾಜ್ಯಕ್ಕೆ ಕೀರ್ತಿ ತಂದ ವಿದ್ಯಾರ್ಥಿಗಳನ್ನು ಹಾಗೂ ಶಿಕ್ಷಕರನ್ನು ಶಾಲೆಯ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಹಾಗೂ ಆಹಾರ ತಜ್ಞೆಡಾ. ಎಂ.ಕೆ.ಮೋನಿಕಾ ಹಾಗೂ ಪ್ರಗತಿ ಎಜುಕೇಷನ್ ಸಂಸ್ಥೆಯ ಅಧ್ಯಕ್ಷೆ ಶ್ರೀ ಶೈಲಜಾ ವಿದ್ಯಾರ್ಥಿಗಳನ್ನು ಹಾಗೂ ತರಬೇತುದಾರರನ್ನು ಅಭಿನಂದಿಸಿದ್ದಾರೆ




# ಡಾ.ಬಿಜೆವಿಗೆ ಪರಿಷತ್ ಸ್ಥಾನ ನೀಡಿ



**ಮೈಸೂರು:** ಮೈಸೂರು ಮತ್ತು ಚಾಮರಾಜನಗರ ಜಿಲ್ಲಾ ಕಾಂಗ್ರೆಸ್ ಸಮಿತಿ ಹಾಗೂ ಎರಡು ಜಿಲ್ಲೆಯ ಶಾಸಕರು ಮತ್ತು ಮಾಜಿ ಶಾಸಕರ ಸಮ್ಮುಖದಲ್ಲಿ ಮೈಸೂರು ಗ್ರಾಮಾಂತರ ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷರಾದ ಡಾ.ಬಿ ಜೆ ವಿಜಯ್ ಕುಮಾರ್ ಅವರಿಗೆ ವಿಧಾನ ಪರಿಷತ್ ಸ್ಥಾನ ನೀಡಬೇಕೆಂದು ಒಮ್ಮತದ ನಿರ್ಣಯ ಮಾಡಲಾಯಿತು.

ವಿಧಾನ ಪರಿಷತ್ ಸದಸ್ಯರಾದ ಡಾ. ಯತೀಂದ್ರ ಸಿದ್ದರಾಮಯ್ಯ ಮಾತನಾಡಿ ಸತತವಾಗಿ 25 ವರ್ಷಗಳಿಂದ ಸಮರ್ಥವಾಗಿ ಮೈಸೂರು ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಸ್ಥಾನವನ್ನು ನಿಭಾಯಿಸಿದ್ದು ಇದು ಮುಂಬರುವ ಅಧ್ಯಕ್ಷರುಗಳಿಗೆ ಮಾದರಿಯಾಗಿದೆ ಎಂದರು. ನಾನು ರಾಜಕೀಯಕ್ಕೆ 2016 ರಲ್ಲಿ ಕಾಲಿಟ್ಟ ಆರಂಭದ ದಿನಗಳಲ್ಲಿ ವಿಜಯ್ ಅವರು ನನಗೆ ಸಾಕಷ್ಟು ಮಾರ್ಗದರ್ಶನ ನೀಡಿ ನನಗೆ ಹಾಗೂ ನಮ್ಮ ಕುಟುಂಬಕ್ಕೆ ಎಲ್ಲಾ ಹಂತದಲ್ಲೂ ಬೆನ್ನೆಲುಬಾಗಿ ನಿಂತಿದ್ದಾರೆ.

ನಾನು ರಾಜಕೀಯವಾಗಿ ಬೆಳೆಯಲು ಅವರ ಸಹಕಾರ ಬಹಳಷ್ಟು ಇದೆ ಅದನ್ನ ನಾವು ಮರೆಯುವುದು ಮನುಷ್ಯತ್ವದ ಗುಣವಲ್ಲ ಎಂದರು. ಜಿಲ್ಲೆಯ ಎಲ್ಲಾ ಚುನಾವಣೆ ಹಾಗೂ ಉಪಚುನಾವಣೆಗಳಲ್ಲಿ ಅವರ ಶ್ರಮವನ್ನ ಕಾಂಗ್ರೆಸ್ ಪಕ್ಷ ಹಾಗೂ ಶಾಸಕರಾಗಿರುವ ಎಲ್ಲರೂ ಮರೆಮಾಚಲು ಸಾಧ್ಯವಿಲ್ಲ ಎಂದರು. ಆದ್ದರಿಂದ ಈ ಬಾರಿ ಅವರಿಗೆ ಪರಿಷತ್ತಿಗೆ ಅವಕಾಶ ಕಲ್ಪಿಸುವುದು ಸರ್ಕಾರದ ಹೊಣೆ ಹಾಗೂ ನನ್ನ ಸಂಪೂರ್ಣ ಬೆಂಬಲವಿದೆ ಎಂದರು. ಪಕ್ಷ ಕೊಟ್ಟ ಎಲ್ಲಾ ಕೆಲಸಗಳನ್ನು ಅಚ್ಚುಕಟ್ಟಾಗಿ ಮಾಡಿಕೊಂಡು ಬಂದಿರುವ ಅವರು ಎಂದು ಎಲ್ಲೋ ಸಣ್ಣ ಲೋಪವನ್ನು ಎಸೆಗದೆ ಯಶಸ್ವಿಯಾಗಿ ನಿಭಾಯಿಸಿದ್ದಾರೆ ಎಂದರೆ ತಪ್ಪಾಗಲಾರದು ಎಂದರು. ಇಂದಿನ ಸಭೆಯಲ್ಲಿ ಮೈಸೂರು ಮತ್ತು ಚಾಮರಾಜನಗರದ ಜಿಲ್ಲೆಯ ಎಲ್ಲಾ ಶಾಸಕರು, ಮಾಜಿ ಶಾಸಕರು ಮತ್ತು ಜನಪ್ರತಿನಿಧಿಗಳು ಒಮ್ಮತದ ನಿರ್ಣಯಕ್ಕೆ ಬಂದಿದ್ದಾರೆ ಎಂದರು. ಈಗಾಗಲೇ ವಿಜಯ್ ಕುಮಾರ್ ಅವರಿಗೆ ಪಾರ್ಲಿಮೆಂಟ್ ಹಾಗೂ ವಿಧಾನಸಭೆಗಳಲ್ಲಿ ಅವಕಾಶ ವಂಚನೆಯಾಗಿದೆ, ಈಗ ಅವರಿಗೆ ಅವಕಾಶ ಕಲ್ಪಿಸುವುದು ನಮ್ಮೆಲ್ಲರ ನೈತಿಕ ಹೊಣೆಗಾರಿಕೆ ಎದ್ದರೂ.


ಕೆಪಿಸಿಸಿ ಕಾರ್ಯಾಧ್ಯಕ್ಷರು ಮತ್ತು ಶಾಸಕರಾದ ತನ್ವಿರ್ ಸೇಠ್ ಮಾತನಾಡಿ ಪಕ್ಷಕ್ಕಾಗಿ 7 ಈಖಖ ದಾಖಲಿಸಿಕೊಂಡು ಹೊರಡುತ್ತಿದ್ದಾರೆ ಎಂದರೆ ಡಾ.ಬಿ ಜೆ ವಿಜಯ್ ಕುಮಾರ್ ನಿಷ್ಠೆ ಎಂತಹದ್ದು ಎಂದು ತಿಳಿಯುತ್ತದೆ. ಅಧಿಕಾರದಲ್ಲಿ ಇದ್ದು ಜನ ಸೇವೆ ಮಾಡೋದು ಕಷ್ಟ ಅದರಲ್ಲೂ ಜಿಲ್ಲಾಧ್ಯಕ್ಷರಾಗಿ ಇಷ್ಟೊಂದು ಪ್ರೀತಿ ಮತ್ತು ಜನಮಣ್ಣನೇ ಗಳಿಸುವುದು ಬಹಳ ಕಷ್ಟ ಎಂದು ಹೇಳಿ ಪಕ್ಷಕ್ಕೆ ಮುಜುಗರ ಉಂಟುಮಾಡೋ ಕೆಲಸ ಮಾಡಬಾರದು ಬಹಳಷ್ಟು ಜನ ನಮ್ಮ ಪಕ್ಷಕ್ಕಾಗಿ ದುಡಿದಿದ್ದಾರೆ ನಾವು ಭಾರಿ ಬಹುಮತದಿಂದ ಸರಕಾರ ಹಿಡಿದಿದ್ದೇವೆ ಎಲ್ಲರಿಗೂ ಅವಕಾಶ ಕೊಡಲು ಅಸಾಧ್ಯ ಆದರೆ ಹಂತ ಹಂತವಾಗಿ ಅವಕಾಶ ಸಿಗುತ್ತದೆ ಆದರೆ ಈ ಬಾರಿ ಡಾ ಬಿಜೆ ವಿಜಯ್ ಕುಮಾರ್ ಅವರ ಸೇವೆಯನ್ನು ಪರಿಗಣಿಸಿ ಕಾಂಗ್ರೆಸ್ ಪಕ್ಷ ಅವರಿಗೆ ವಿಧಾನ ಪರಿಷತ್ ಅಥವಾ ರಾಜ್ಯಸಭಾ ಸ್ಥಾನ ನೀಡುತ್ತದೆ ಎಂಬ ವಿಶ್ವಾಸವಿದೆ ಎಂದು ನುಡಿದರು. ಕೆ ಆರ್ ನಗರ ವಿಧಾನಸಭಾ ಕ್ಷೇತ್ರದ ಶಾಸಕರಾದ ಡಿ. ರವಿಶಂಕರ್ ಮಾತನಾಡಿ ಯಾವ ಚುನಾವಣೆಯಲ್ಲೂ ಯಾವ ಅಭ್ಯರ್ಥಿಯಿಂದ ಯಾವ ಅಪೇಕ್ಷೆ ಇಲ್ಲದೆ ಅತ್ಯಂತ ಪ್ರಾಮಾಣಿಕವಾಗಿ ಪಕ್ಷ ಸೇವೆ ಮಾಡಿದ್ದು ನನ್ನ ಮಿತ್ರ ವಿಜಯಕುಮಾರ್ ಅವರು ಎಂದರು.

ಹೆಚ್‌ಡಿ. ಕೋಟೆ ವಿಧಾನಸಭಾ ಕ್ಷೇತ್ರದ ಶಾಸಕರಾದ ಅನಿಲ್ ಚಿಕ್ಕಮಾದು ಮಾತನಾಡಿ ಮೈಸೂರು ಜಿಲ್ಲೆಯಲ್ಲಿ ಎರಡನೇ ತಲೆಮಾರಿನ ಶಾಸಕರು ಅತ್ಯಂತ ಒಗ್ಗಟ್ಟಿನಿಂದ ಕೆಲಸ ಮಾಡಲು ಚುನಾವಣೆ ಗೆಲ್ಲಲು ವಿಜಯ್ ಕುಮಾರ್ ಅವರ ಸಹಕಾರವಿದೆ ಎಂದರು.

ಮೈಸೂರು ನಗರ ಕಾಂಗ್ರೆಸ್ ಸಮಿತಿ ಅಧ್ಯಕ್ಷರಾದ ಆರ್ ಮೂರ್ತಿ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಶಾಸಕರಾದ ಪುಟ್ಟರಂಗಶೆಟ್ಟಿ, ಎ ಆರ್.ಕೃಷ್ಣಮೂರ್ತಿ , ದರ್ಶನ್ ರವನಾರಾಯಣ, ಹರೀಶ್ ಗೌಡ, ಮಾಜಿ ಶಾಸಕರಾದ ಮರಿತಿಬ್ಬೆಗೌಡ, ಜಿ.ಎನ್. ನಂಜುಂಡಸ್ವಾಮಿ ಎಂ ಕೆ ಸೋಮಶೇಖರ್, ಕಳಲೆ ಕೇಶವಮೂರ್ತಿ, ಶ್ರೀಮತಿ ಸುನಿತ ವೀರಪ್ಪಗೌಡ, ಬನ್ನೂರ್ ಎಂ ಕೃಷ್ಣಪ್ಪ, ಎನ್. ಧರ್ಮ ಸೇನಾ, ವಿವಿಧ ನಿಗಮಗಳ ಅಧ್ಯಕ್ಷರಾದ ಹಾಡ್ಯ ರಂಗಸ್ವಾಮಿ, ಎಚ್ ಡಿ ಗಣೇಶ್ ರಾಮಪ್ಪ, ರಾಮಪ್ಪ ಭೋವಿ, ಅನಂತು, ಮೂಡ ಮಾಜಿ ಅಧ್ಯಕ್ಷರಾದ ಮರಿಗೌಡ, ರಾಜೀವ್, ಕೆಎಂಎಫ್ ಮೈಸೂರ ಜಿಲ್ಲಾ ಅಧ್ಯಕ್ಷರಾದ ಈರೇಗೌಡರು,

ಮಾಜಿ ಜಿಲ್ಲಾ ಪಂಚಾಯತ್ ಅಧ್ಯಕ್ಷರಾದ ಕೂರ್ಗಳ್ಳಿ ಮಾದೇವ್, ಮಾಜಿ ಮೇಯರ್ಗಳಾದ ಪುರುಷೋತ್ತಮ್, ಟಿಬಿ. ಚಿಕ್ಕಣ್ಣ, ಕೆಪಿಸಿಸಿಯ ಜಿಲ್ಲಾ ವ್ಯಾಪ್ತಿ ಪದಾಧಿಕಾರಿಗಳು, ಎಂಟು ವಿಧಾನಸಭಾ ಕ್ಷೇತ್ರದ 16 ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು, 25 ಮಂಚೂಣಿ ಘಟಕದ ಅಧ್ಯಕ್ಷರು ಹಾಗೂ ಡಿಸಿಸಿಯ ಎಲ್ಲ ಹಂತದ ಪದಾಧಿಕಾರಿಗಳು ಹಕ್ಕುತ್ತಾಯಕ್ಕೆ ಅಧಿಕೃತವಾಗಿ ಸಹಿ ಮಾಡಿ ಮಾನ್ಯ ಮುಖ್ಯಮಂತ್ರಿಗಳಿಗೆ ಹಾಗೂ ಹೈಕಮಾಂಡ್ ಗೆ ಸಭೆಯ ಮೂಲಕ ರವಾನಿಸಿದ್ದಾರೆ.

# ಗೆಲುವಿನ ಅಲೆ: ಜೆಸ್ಸಿಕಾ ಲಾಂಗ್



| ಡಾ.ಸುಧಾಕರ.ಜಿ.ಲಕ್ಕವಳ್ಳಿ


ಸ್ಫೂರ್ತಿ ಸುಧೆ - 18

ಬದುಕು ನಮಗೆ ಏನನ್ನು ಕೊಟ್ಟಿಲ್ಲ ಎನ್ನುವುದಕ್ಕಿಂತ, ಕೊಟ್ಟಿದ್ದನ್ನು ಹೇಗೆ ಬಳಸಿಕೊಳ್ಳುತ್ತೇವೆ ಎಂಬುದು ಮುಖ್ಯ. ಇದಕ್ಕೆ ಜೀವಂತ ಉದಾಹರಣೆ ವಿಶ್ವವಿಖ್ಯಾತ ಪ್ಯಾರಾಲಿಂಪಿಕ್ ಕ್ರೀಡಾಪಟು ಜೆಸ್ಸಿಕಾ ಲಾಂಗ್.ಇವರ ಜೀವನದ ಹೋರಾಟ ಇಂದಿನ ಯುವಜನತೆಗೆ ಒಂದು ಅದ್ಭುತ ಪಾಠ.

ರಷ್ಯಾದಲ್ಲಿ ಕಾಲುಗಳಿಲ್ಲದೆ ಜನಿಸಿದ ಈ ಬಾಲಕಿ ಅನಾಥಾಶ್ರಮ ಸೇರಿದ್ದರು.ಅಮೆರಿಕದ ದಂಪತಿಗಳು ದತ್ತು ಪಡೆದಾಗ ಇವರಿಗೆ ಕೇವಲ 18 ತಿಂಗಳು.ವೈದ್ಯಕೀಯ ಅನಿವಾರ್ಯತೆಯಿಂದ ಮೊಣಕಾಲಿನ ಕೆಳಭಾಗವನ್ನು ಕತ್ತರಿಸಬೇಕಾಯಿತು.ಕೃತಕ ಕಾಲುಗಳ ಮೇಲೆ ನಿಂತ ಜೆಸ್ಸಿಕಾ, ತನ್ನ ದೌರ್ಬಲ್ಯವನ್ನೇ ಬಲವನ್ನಾಗಿಸಿಕೊಳ್ಳುವ ಸಂಕಲ್ಪ ಮಾಡಿದರು.

ನೆಲದ ಮೇಲೆ ನಡೆಯುವುದು ಕಷ್ಟವಾಗಿದ್ದರೂ,ನೀರಿನಲ್ಲಿ ಈಜುವುದು ಅವರಿಗೆ ಸಹಜವಾಗಿ ಒಲಿಯಿತು.ಕೇವಲ 12ನೇ ವಯಸ್ಸಿನಲ್ಲಿ ಅಥೆನ್ಸ್ ಪ್ಯಾರಾಲಿಂಪಿಕ್ಸ್‌ನಲ್ಲಿ ಮೂರು ಚಿನ್ನದ ಪದಕ ಗೆಲ್ಲುವ ಮೂಲಕ ಜಗತ್ತಿನ ಗಮನ ಸೆಳೆದರು. ಅಂಗವೈಕಲ್ಯವು ಸಾಧನೆಗೆ ಎಂದಿಗೂ ಅಡ್ಡಿಯಾಗದು ಎಂದು ಅಂದೇ ಸಾಬೀತುಪಡಿಸಿದರು.

2012ರ ಲಂಡನ್ ಪ್ಯಾರಾಲಿಂಪಿಕ್ಸ್ ಜೆಸ್ಸಿಕಾ ಅವರ ಕ್ರೀಡಾ ಬದುಕಿನ ಸುವರ್ಣ ಕಾಲ. ಅಂದು ಅವರು 5 ಚಿನ್ನ ಸೇರಿದಂತೆ ಒಟ್ಟು 8 ಪದಕಗಳನ್ನು ಗೆದ್ದು ದಾಖಲೆ ಬರೆದರು. ಇದುವರೆಗೆ ಒಟ್ಟು 29 ಪದಕಗಳನ್ನು ಮುಡಿಗೇರಿಸಿಕೊಂಡಿರುವ ಇವರು,



ಜಗತ್ತಿನ ಅತ್ಯಂತ ಯಶಸ್ವಿ ಕ್ರೀಡಾಪಟುಗಳಲ್ಲಿ ಒಬ್ಬರಾಗಿದ್ದಾರೆ.

ಇಂದಿನ ಯುವಜನತೆ ಸಣ್ಣಪುಟ್ಟ ವೈಫಲ್ಯಗಳಿಗೆ ಎದೆಗುಂದುತ್ತಾರೆ. ಆದರೆ ಜೆಸ್ಸಿಕಾ ಅವರ ಛಲ ನಮಗೆ ಕಲಿಸುವುದು ಒಂದೇ ನಮ್ಮ ಮಿತಿಗಳು ಇರುವುದು ಮನಸ್ಸಿನಲ್ಲೇ ಹೊರತು ದೇಹದಲ್ಲಲ್ಲ.ಸೌಲಭ್ಯಗಳ ಕೊರತೆಯ ಬಗ್ಗೆ ದೂರುವ ಬದಲು, ದೃಢಸಂಕಲ್ಪದಿಂದ ಶ್ರಮಿಸಿದರೆ ಅಸಾಧ್ಯವಾದುದನ್ನು ಸಾಧಿಸಬಹುದು.

ನನ್ನ ಕಾಲುಗಳಿಲ್ಲದಿರುವುದು ನನ್ನ ಶಾಪವಲ್ಲ,ಅದು ನನ್ನ ಗೆಲುವಿನ ಶಕ್ತಿಯಾಯಿತು ಎಂಬ ಜೆಸ್ಸಿಕಾ ಅವರ ಮಾತು ಪ್ರತಿಯೊಬ್ಬರಿಗೂ ಸ್ಫೂರ್ತಿಯ ಸೆಲೆ.

# ಅಸೀಮ ಸಾಹಸಿ ಮಹಿಳೆ ಮಾಲತಿ ಹೊಳ್ಳ



| ವೀಣಾ ಹೇಮಂತ್‌ಗೌಡ ಪಾಟೀಲ್

ಅದು 1960ರ ಸಮಯ. ತನ್ನ ಪಾಲಕರ ನಾಲ್ಕು ಜನ ಮಕ್ಕಳಲ್ಲಿ ಆಕೆಯೂ ಒಬ್ಬಳು. ಉಡುಪಿ ಭಟ್ಟರ ಕುಟುಂಬದಿಂದ ಬಂದ ಆಕೆ ಹುಟ್ಟುವ ಹೊತ್ತಿಗೆ ಆಕೆಯ ಪಾಲಕರು ಬೆಂಗಳೂರಿಗೆ ಬದುಕನ್ನು ಅರಸಿ ವಲಸೆ ಬಂದಿದ್ದರು. ಪುಟ್ಟದೊಂದು ಉಡುಪಿ ಆಹಾರವನ್ನು ತಯಾರಿಸುವ ಹೋಟೆಲನ್ನು ಆರಂಭಿಸಿದ್ದ. ಅವರಿಗೆ ಬದುಕಿನ ನಿರ್ವಹಣೆಯೇ ಕಷ್ಟಕರವಾಗಿತ್ತು. ಅಂತಹ ಸಮಯದಲ್ಲಿ ಇಡೀ ವಿಶ್ವದಾದ್ಯಂತ ವ್ಯಾಪಕ ಪಿಡುಗಾಗಿ ಪರಿಣಮಿಸಿದ ಪೋಲಿಯೋ ರೋಗಕ್ಕೆ ಆ ಪುಟ್ಟ ಒಂದುವರೆ ವರ್ಷದ ಮಗು ಈಡಾಗಿತ್ತು. ಕುತ್ತಿಗೆಯ ಕೆಳಭಾಗ ಸಂಪೂರ್ಣವಾಗಿ ಚಲನೆ ಇಲ್ಲದ ರೀತಿಯಲ್ಲಿ ಇದ್ದ ಮಗುವನ್ನು ನೋಡಿ ತಂದೆ ತಾಯಿ ನೋವಿನಿಂದ ಒದ್ದಾಡುವುದನ್ನು ಬಿಟ್ಟರೆ ಮತ್ತೇನು ಮಾಡಲು ಸಾಧ್ಯವಿರಲಿಲ್ಲ. ಕುಟುಂಬದವರ ಕರುಣೆಯ ಕೂಸಾಗಿದ್ದ ಆಕೆಯನ್ನು ಹೇಗಾದರೂ ಮಾಡಿ ತನ್ನ ಕಾಲ ಮೇಲೆ ನಿಲ್ಲುವಂತೆ ಮಾಡಬೇಕು ಎಂಬ ಅದಮ್ಯ ಆಶಯ ಆಕೆಯ ತಾಯಿಯದಾಗಿತ್ತು. ಪರಿಚಯದವರ ಹೇಳಿಕೆಯ ಮೇರೆಗೆ ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆಯಲ್ಲಿ ಎಲೆಕ್ಟ್ರಿಕ್ ಶಾಕ್ / ವಿದ್ಯುತ್ ಕಂಪನ ಚಿಕಿತ್ಸೆಯನ್ನು ನೀಡಿದರೆ ಶಕ್ತಿಗುಂದಿದ ನರಗಳಲ್ಲಿ ಚೈತನ್ಯವನ್ನು ತುಂಬಲು ಸಾಧ್ಯವಾಗಬಹುದು ಎಂಬ ಕಾರಣಕ್ಕೆ ಆಕೆಯ ತಾಯಿ ಪ್ರತಿದಿನ ತನ್ನ ಮನೆ ಕೆಲಸಗಳೆಲ್ಲವನ್ನು ಪೂರೈಸಿ ಮಗುವನ್ನು ಹೊತ್ತು ನಡೆದುಕೊಂಡು ಹೋಗಲು ತುಸು ದೂರವೇ ಎನ್ನಿಸಬಹುದಾದಷ್ಟು ದಾರಿಯನ್ನು ಪುಟ್ಟ ಮಗುವನ್ನು ಕಂಕುಳಲ್ಲಿ ಹೊತ್ತು ಸಾಗುತ್ತಿದ್ದಳು. ದಿನಕ್ಕೆ ಮೂರು ಬಾರಿ ಆ ವಿದ್ಯುತ್ ಕಂಪನ ಚಿಕಿತ್ಸೆಗೆ ಒಳಗಾಗಬೇಕಿತ್ತು.... ಮಗುವಿನ ನರಗಳಲ್ಲಿ ಶಕ್ತಿ ಇಲ್ಲದ ಕಾರಣ ಆಕೆಗೆ ಆ ನೋವಿನ ಅರಿವು ಆಗದೆ ಹೋದರೂ ತಾಯಿಯ ಜೀವ ಚಿಕಿತ್ಸೆಯ ಕಾರಣದಿಂದ ತನ್ನ ಮಗು ಪಡಬಹುದಾದ ಹಿಂಸೆಯನ್ನು ಖುದ್ದು ತಾನೇ ಅನುಭವಿಸುವಂತೆ ಒದ್ದಾಡುತ್ತಿದ್ದಳು.

ಮುಂಜಾನೆ, ಮಧ್ಯಾಹ್ನ ಹಾಗೂ ಸಾಯಂಕಾಲದ ಎಲೆಕ್ಟ್ರಿಕ್ ಶಾಕ್ ಚಿಕಿತ್ಸೆಯ ನಂತರ ಮತ್ತೆ ಮಗುವನ್ನು ಹೊತ್ತುಕೊಂಡು ಇಳಿಸಂಜೆಗೆ ಮನೆ ಸೇರುತ್ತಿದ್ದರು ಆಕೆಯ ತಾಯಿ. ಸರಿ ಸುಮಾರು ಎರಡು ವರ್ಷಗಳ ಕಾಲ ದಣಿವರಿಯದೆ ತನ್ನ ಮಗಳಿಗಾಗಿ ತನ್ನ ಬದುಕನ್ನೇ ಆಕೆ ಮುಡುಪಾಗಿಟ್ಟಳು.





ಪರಿಣಾಮವಾಗಿ ಕುತ್ತಿಗೆಯ ಕೆಳಗೆ ಸಂಪೂರ್ಣ ನಿಷ್ಕ್ರಿಯವಾಗಿದ್ದ ಆಕೆಯ ದೇಹದಲ್ಲಿ ತುಸು ಚೈತನ್ಯ ಒಡಮೂಡಿತು. ತರಕಾರಿಯ ಮುದ್ದೆಯಂತೆ ಬಿದ್ದಲ್ಲೇ ಬಿದ್ದಿರುತ್ತಿದ್ದ ಆಕೆ ಇದೀಗ ಕೊಂಚ ಮಟ್ಟಿಗೆ ತನ್ನ ಕಾಲ ಬಲದ ಮೇಲೆ ನಿಧಾನವಾಗಿ ಎದ್ದು ನಿಲ್ಲುವಂತೆ ಆಯಿತು. ಆದರೆ ಇಷ್ಟಕ್ಕೆ ಮುಗಿಯಲಿಲ್ಲ.

ಮಗುವಿಗೆ ಹೆಚ್ಚಿನ ಚಿಕಿತ್ಸೆ ಕೊಡಿಸುವ, ಶಸ್ತ್ರಚಿಕಿತ್ಸೆಯ ಮೂಲಕ ಆಕೆಯ ದೈಹಿಕ ಪರಿಸ್ಥಿತಿಯನ್ನು ಇನ್ನಷ್ಟು ಸುಧಾರಿಸುವ ನಿಟ್ಟಿನಲ್ಲಿ ಮದರಾಸಿನ ಒಂದು ಅತ್ಯಂತ ಕಡಿಮೆ ಶುಲ್ಕವನ್ನು ವಿಧಿಸುವ ಸ್ಥಾನಿಕ ವಸತಿಯುತ ಆಸ್ಪತ್ರೆಗೆ ದಾಖಲು ಮಾಡುವಂತೆ ವೈದ್ಯರು ಸಲಹೆ ಆಕೆಯ ಪಾಲಕರಿಗೆ ನೀಡಿದರು.

ನಾಲ್ಕು ವರ್ಷ ಕೂಡ ತುಂಬದ ಪುಟ್ಟ ಮಗುವನ್ನು ಕಾಣದ ದೂರದ ಊರಿನಲ್ಲಿ ಅದು ಹೇಗೆ ಬಿಟ್ಟು ಬರಬೇಕು ಎಂಬುದು ತಾಯಿಯ ಕಳವಳವಾದರೆ ತನ್ನ ಮಗಳು ಯಾರಿಗೂ ಭಾರವಾಗಬಾರದು ತನ್ನ ಬದುಕನ್ನು ತಾನು ಸಂಭಾಳಿಸಿಕೊಳ್ಳುವಷ್ಟಾದರೂ ಆಕೆ ದೈಹಿಕ ಆರೋಗ್ಯವನ್ನು ಹೊಂದಬೇಕು ಎಂಬುದು ತಂದೆಯ ಆಶಯವಾಗಿತ್ತು. ಅಂತಿಮವಾಗಿ ಮಗಳ ಭವಿಷ್ಯದ ದೃಷ್ಟಿಯಿಂದ ಪಾಲಕರಿಬ್ಬರೂ ಒಪ್ಪಿ ಆಕೆಯನ್ನು ದೂರದ ಮದರಾಸು ನಗರದ ವಸತಿ ಶಾಲೆಗೆ ದಾಖಲಿಸಿದರು. ವಾರವಿಡೀ ತಮ್ಮ ಉಡುಪಿ ಹೋಟೆಲಿನ ಕೆಲಸದ ಒತ್ತಡದಿಂದ ದಣಿಯುತ್ತಿದ್ದ ತಂದೆ ರವಿವಾರ ಮುಂಜಾನೆಯ ರೈಲಿಗೆ ಹೋಗಿ ಮಗಳನ್ನು ಮಾತಾಡಿಸಿಕೊಂಡು ಮತ್ತೆ ಸಂಜೆಯ ರೈಲಿನಲ್ಲಿ ಮರಳುತ್ತಿದ್ದರು... ಗಂಡ ಹೆಂಡತಿ ಉಳಿದ ಮೂರು ಜನ ಮಕ್ಕಳ ಬದುಕಿನ ಬಂಡಿಯನ್ನು ಸಾಗಿಸಲು ಮರುದಿನ ಮುಂಜಾನೆ ಹೋಟೆಲ್ ಬಾಗಿಲು ತೆಗೆಯಲೇಬೇಕಾದ ಅನಿವಾರ್ಯತೆ ಅವರಿಗಿತ್ತು.

ತನ್ನ ಮೂರನೇ ವಯಸ್ಸಿನಿಂದ 18ನೇ ವಯಸ್ಸಿನವರೆಗೆ ಸರಿಸುಮಾರು 15 ವರ್ಷಗಳ ಕಾಲ ಅಂಗವಿಕಲರಿಗಾಗಿಯೇ ಇದ್ದ ಆ ಶಾಲೆಯಲ್ಲಿ ಸರಿ ಸುಮಾರು 34 ಶಸ್ತ್ರ ಚಿಕಿತ್ಸೆಗಳಿಗೆ ಆಕೆ ಒಳಗಾದಳು.... ಪರಿಣಾಮವಾಗಿ ಕೈಯಲ್ಲಿ ಊರುಗೋಲುಗಳನ್ನು ಹಿಡಿದು ನಡೆಯುವಷ್ಟರ ಮಟ್ಟಿಗೆ ಆಕೆ ತಯಾರಾದಳು. ಇದೆಲ್ಲದರ ಮಧ್ಯದಲ್ಲಿ ಆಕೆಗೆ ನೆಮ್ಮದಿ ತರುತ್ತಿದ್ದದ್ದು ಆಕೆಯ ಪಠ್ಯ ಚಟುವಟಿಕೆ. ಅಲ್ಲಿ ಲಭ್ಯವಿದ್ದ ತೆಲುಗು / ತಮಿಳು ಮಾಧ್ಯಮಗಳಲ್ಲಿ ಆಕೆ ತೆಲುಗು ಭಾಷೆಯನ್ನು ಆಯ್ದುಕೊಳ್ಳಲು ಕಾರಣ ಅದು ಕನ್ನಡದ ಲಿಪಿಗಳಿಗೆ ತುಂಬಾ ಹತ್ತಿರವಾಗುತ್ತದೆ ಎಂದು. ಅತ್ಯುತ್ತಮ ಅಂಕಗಳೊಂದಿಗೆ ಹತ್ತನೇ ತರಗತಿಯನ್ನು ಪಾಸಾದ ಆಕೆ ಮುಂದೆ ತನ್ನ ಪಾಲಕರ ಬಳಿ ಬಂದಳು.

ಇದುವರೆಗೂ ತನ್ನಂತೆಯೇ ಇದ್ದ ಅಂಗವಿಕಲರ ಪ್ರಪಂಚದಲ್ಲಿ ಬದುಕಿದ್ದ ಆಕೆಗೆ ಇದೀಗ ನೀರಿನಿಂದ ಹೊರ ಬಿದ್ದ ಮೀನಿನಂತಹ ಅನುಭವ.

ಕಾಲೇಜು ಶಿಕ್ಷಣವನ್ನು ಮಗಳು ಪೂರೈಸಲಿ ಎಂದು ಮನೆಗೆ ಹತ್ತಿರವಿದ್ದ ಕಾಲೇಜಿಗೆ ಮಗಳನ್ನು ದಾಖಲಿಸಿದರು. ಆದರೆ ಮೂರು ಅಂತಸ್ತಿನ ಕಟ್ಟಡದಲ್ಲಿ ಆಕೆಯ ತರಗತಿಗಳು ಇದ್ದದ್ದು ಮೂರನೇ ಅಂತಸ್ತಿನಲ್ಲಿ ತನ್ನ ಊರಿಗೋಲುಗಳ ಸಹಾಯದಿಂದ ಹೆಗಲಿಗೆ ಒಂದು ಪುಟ್ಟ ಬ್ಯಾಗನ್ನು ನೇತು ಹಾಕಿಕೊಂಡು ಆಕೆ ತರಗತಿಯನ್ನು ತಲುಪುವ ವೇಳೆಗೆ ಆ ಅವಧಿಯ ಪಾಠ ಮುಗಿದು ಹೋಗಿರುತ್ತಿತ್ತು ಕೆಲವೇ ದಿನಗಳಲ್ಲಿ ಇದರಿಂದ ಬೇಸತ್ತು ಹೋದ ಆಕೆ ಪ್ರಾಂಶುಪಾಲರನ್ನು ಭೇಟಿಯಾಗಿ ಅತ್ಯಂತ ಗಟ್ಟಿಯಾದ ಧ್ವನಿಯಲ್ಲಿ ತನಗಾಗುತ್ತಿರುವ ತೊಂದರೆಯನ್ನು ಹೇಳಿಕೊಂಡು ಪರಿಹಾರವನ್ನು ಪಡೆದಳು.... ಹೇಳದೆ ಹೋದರೆ ಯಾವ ಸಮಸ್ಯೆಗೂ ಪರಿಹಾರ ದೊರೆಯುವುದಿಲ್ಲ. ನಿಮ್ಮಅಳಲನ್ನು ಕೇಳಲು , ಯಾರೂ ತಯಾರಿರುವುದಿಲ್ಲ ನಿಜ ಆದರೆ ಹೇಳಲು ನೀವು ಖಂಡಿತವಾಗಿಯೂ ತಯಾರಿರಬೇಕು ಎಂಬುದನ್ನು ಆಕೆ ತಾನು ಚಿಕ್ಕಂದಿನಿಂದ ಇದ್ದ ವಸತಿ ಶಾಲೆಯಲ್ಲಿ ಕಲಿತಿದ್ದಳು.

ಮುಂದೆ ಸಿಂಡಿಕೇಟ್ ಬ್ಯಾಂಕ್ ನಲ್ಲಿ ಅಸಿಸ್ಟೆಂಟ್ ಮ್ಯಾನೇಜರ್ ಆಗಿ ಕಾರ್ಯನಿರ್ವಹಿಸಿದ ಮಾಲತಿ ಹೊಳ್ಳ ಮ್ಯಾನೇಜರ್ ಆಗಿ ಕೆಲ ವರ್ಷಗಳ ಕಾಲ ತಮ್ಮ ಹುದ್ದೆಯಲ್ಲಿ ಮುಂದುವರೆದು ನಂತರ ಸ್ವಯಂ ನಿವೃತ್ತಿಯನ್ನು ಪಡೆದರು.

ಅದೊಂದು ಬಾರಿ ಆಕೆ ಅಂಗವಿಕಲರಿಗೆ ಇರುವ ಕ್ರೀಡಾಕೂಟಗಳಲ್ಲಿ ಭಾಗವಹಿಸಿದವರು ಮತ್ತೆ ಹಿಂತಿರುಗಿ ನೋಡಲಿಲ್ಲ. 397 ಚಿನ್ನದ ಪದಕಗಳು, ಜಾ ಬೆಳ್ಳಿ ಹಾಗೂ 5 ಕಂಚಿನ ಸರಕುಗಳನ್ನು ಪಡೆದಿರುವ ಮಾಲತಿ ಅವರು ಭಾರತ ದೇಶದಲ್ಲಿ ಕ್ರೀಡೆಗಾಗಿ ನೀಡಲಾಗುವ ಅರ್ಜುನ ಹಾಗೂ ದೇಶದ ಪರಮೋಚ್ಚ ಗೌರವ ಪದ್ಮಶ್ರೀ ಪ್ರಶಸ್ತಿಗಳನ್ನು ಪಡೆದಿದ್ದಾರೆ.



ದಕ್ಷಿಣ ಕೊರಿಯಾ ಅಥೆನ್ಸ್ ಬಾರ್ಸಿಲೋನಾ ಮತ್ತು ಬೀಜಿಂಗ್ ಗಳಲ್ಲಿ ನಡೆದ ಪ್ಯಾರಾ ಒಲಂಪಿಕ್ ನಲ್ಲಿ ಭಾಗವಹಿಸಿರುವ ಆಕೆ ಬೀಜಿಂಗ್, ಕೌಲಾಲಂಪುರ್, ಸೌತ್ ಕೊರಿಯಾ ಮತ್ತು ಬ್ಯಾಂಕಾಕ್ ದೇಶಗಳಲ್ಲಿ ನಡೆದ ಏಷ್ಯನ್ ಗೇಮ್ಸ್ ನಲ್ಲಿ ಕೂಡ ಭಾಗವಹಿಸಿದ್ದಾರೆ.

ಡೆನ್ಮಾರ್ಕ್ ಮತ್ತು ಆಸ್ಟ್ರೇಲಿಯಾಗಳಲ್ಲಿ ನಡೆದ ವರ್ಲ್ಡ್ ಮಾಸ್ಟರ್ ನಲ್ಲಿ ಭಾಗವಹಿಸಿದ ಆಕೆ ಆಸ್ಟ್ರೇಲಿಯಾದ ಕಾಮನ್ ವೆಲ್ತ್ ಗೇಮ್ ಗಳಲ್ಲಿ ಕೂಡ ಭಾಗವಹಿಸಿದ್ದಾರೆ. ಬೆಲ್ಜಿಯಂ, ಕೌಲಾಲಂಪುರ ಮತ್ತು ಇಂಗ್ಲೆಂಡ್ನಲ್ಲಿ ನಡೆದ ಮುಖ್ಯ ಚಾಂಪಿಯನ್ ಶಿಪ್ಗಳಲ್ಲಿ ಕೂಡ ಅವರು ಭಾಗವಹಿಸಿದ್ದಾರೆ.

ಇಲ್ಲಿಯವರೆಗೂ ಸರಿಸುಮಾರು 34 ಶಸ್ತ್ರಚಿಕಿತ್ಸೆಗಳಿಗೆ ಒಳಗಾಗಿರುವ ಮಾಲತಿ ಅವರು ಈ ಸಾಧನೆ ಮಾಡಿರುವುದು ಅವರ ಸ್ಪರ್ಧಾ ಮನೋಭಾವವನ್ನು ತೋರುತ್ತದೆ. ತಮ್ಮ ಉಳಿದ ಸ್ನೇಹಿತರೊಂದಿಗೆ 2006 ರಿಂದ ಹೆಚ್‌ಎಎಲ್ ನ ವಸತಿಯಲ್ಲಿ ಮಾತೃ ಫೌಂಡೇಶನ್ ಎಂಬ ಅಂಗವಿಕಲರಿಗಾಗಿ ವಿಶೇಷ ಸಂಸ್ಥೆಯೊಂದನ್ನು ತೆರೆದಿರುವ ಅವರು ಇದೀಗ ಸರ್ಜಾಪುರದ ಬಳಿ ಸ್ವಂತ ಕಟ್ಟಡವನ್ನು ನಿರ್ಮಿಸಿ ಸರಿಸುಮಾರು ಐವತ್ತಕ್ಕೂ ಹೆಚ್ಚು ಅವಕಾಶ ವಂಚಿತ ಅಂಗವಿಕಲರಿಗೆ ಆಶ್ರಯ ನೀಡಿದ್ದು ಅವರ ಭವಿಷ್ಯವನ್ನು ರೂಪಿಸುತ್ತಿದ್ದಾರೆ. ಈ ನಿಟ್ಟಿನಲ್ಲಿ ತಮ್ಮ ಸಂಪೂರ್ಣ ಸಮಯ ಮತ್ತು ಶ್ರದ್ಧೆ ಯನ್ನು ಮೀಸಲಿಡುವ ಕಾರಣ ತಮ್ಮ ಬ್ಯಾಂಕ್ ಮ್ಯಾನೇಜರ್ ಹುದ್ದೆಗೆ ರಾಜೀನಾಮೆ ನೀಡಿರುವ ಮಾಲತಿ ಹೊಳ್ಳ ಅವರದು ಅತ್ಯದ್ಭುತ ಮಾತೃ ಹೃದಯ. ಕರ್ನಾಟಕ ರಾಜ್ಯದಾದ್ಯಂತ ಅದರಲ್ಲೂ ವಿಶೇಷವಾಗಿ ಉತ್ತರ ಕರ್ನಾಟಕದ ಹಿಂದುಳಿದ ಜಿಲ್ಲೆಗಳಲ್ಲಿನ ಅಂಗವಿಕಲ ಮಕ್ಕಳನ್ನು ತಾವೇ ಖುದ್ದಾಗಿ ಭೇಟಿಯಾಗಿ ಅವರಿಗೆ ಮಾತೃ ಸಂಸ್ಥೆಯಲ್ಲಿ ಆಶ್ರಯ ನೀಡಿ ಬದುಕನ್ನು ರೂಪಿಸಿಕೊಳ್ಳಲು ಸಹಾಯ ಹಸ್ತ ಚಾಚಿದ್ದಾರೆ.

2009 ಜುಲೈ 8ರಂದು 'ಎ ಡಿಫರಂಟ್ ಸ್ಪಿರಿಟ್ ' ಎಂಬ ಆತ್ಮಕಥೆಯನ್ನು ಬರೆದು ಪ್ರಕಟಿಸಿರುವ ಅವರು ಕೇವಲ ತನ್ನ ಕಾಲುಗಳನ್ನು ಕಸಿದುಕೊಂಡಿರುವ ದೇವರು ತನಗೆ ಅದ್ಭುತವಾದ ಆತ್ಮ ಬಲವನ್ನು ಮತ್ತು ತುಸು ಹೆಚ್ಚೇ ಅದೃಷ್ಟವನ್ನು ನೀಡಿದ್ದು ಇಲ್ಲಿಯವರೆಗೂ ತಾನು ಸಾಧಿಸಲು ಸಾಧ್ಯವಾಗಿದ್ದು ಈ ಅಂಗವಿಕಲತೆಯಿಂದಲೇ ಎಂದು ಅತ್ಯಂತ ಹೆಮ್ಮೆಯಿಂದ ಹೇಳುವ ಮಾಲತಿ ಹೊಳ್ಳ ಅವರ **ಸಾಧನೆಗೆ ಒಂದು ದೊಡ್ಡ ಸೆಲ್ಯೂಟ್**

Published by Mihir Akash K.R Printed by M.S.Shivaprakash on behalf of Mihir Akash K.R. Printed at M.S. Shivaprakash, IDEAL OFFSET PRINTERS, #337, SLJ Temple Street, Old Town Mandya Dist-571401, Karnataka. Published from No 170, Nirvikalpa Road, E&F block, Ramakrishna Nagar, Mysore - 570022, Editor K.N Ravi,